ಸಂಪುಟ: 05 ಸಂಚಿಕೆ: 326 ಪುಟಗಳು: 08 ಭಾನುವಾರ 08 ಫೆಬ್ರವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ


**ಮುಂಜಾನೆ ಮಾತು**

ನನ್ನ ಧೀರಪುತ್ರರೇ, ನೀವೆಲ್ಲರೂ ಮಹತ್ಕಾರ್ಯವನ್ನು ಮಾಡಲು ಹುಟ್ಟಿರುವಿರಿ, ನಾಯಿ ನರಿಗಳ ಬೊಗಳುವಿಕೆಯಿಂದ ಅಪ್ರತಿಭರಾಗಬೇಡಿ, ಸಿಡಿಲ ಗರ್ಜನೆಯೂ ನಿಮ್ಮನ್ನಂಜಿಸದಿರಲಿ, ಎದ್ದು ನಿಂತು ಕಾರ್ಯೋನ್ಮುಖರಾಗಿ.

# ಕುರ್ಚಿ ಕಿತ್ತಾಟ ಕೈಗೆ ಪೀಕಲಾಟ

ಬಗೆಹರಿಯದ ಕುರ್ಚಿ ಜಗಳ





ಅತ್ತ ಗೋಡೆ ಮೇಲೆ ದೀಪ ಇಟ್ಟ ಡಿಕೆಶಿ

ಮಲ್ಲಿಕಾರ್ಜುನ ಖರ್ಗೆ ಮೌನಕ್ಕೆ ರೊಚ್ಚಿಗೆದ್ದ ಶಾಸಕರು

**ಎಷ್ಟು ಅಂತ ಸಹಿಸೋದು, ದಿನ ನೋಡಿ ನೋಡಿ ಸಾಕಾಯ್ತು, ಇನ್ನ ನಮ್ಮಿಂದ ಸಾಧ್ಯವಿಲ್ಲ. ಇದು ಕಾಂಗ್ರೆಸ್ ಪಾಳೆಯಿಂದ ತೂರಿ ಬರುತ್ತಿರುವ ಆಕ್ರೋಶದ ಧ್ವನಿ.. ಸಿದ್ದರಾಮಯ್ಯ ಹಾಗೂ ಡಿಕೆಶಿ ನಡುವಿನ ಕುರ್ಚಿ ಕದನಕ್ಕೆ ಸ್ವತಃ ಕಾಂಗ್ರೆಸ್ ಶಾಸಕರು, ಸಚಿವರು ಬೇಸತ್ತು ಹೋಗಿದ್ದಾರೆ.**

**ಗಂಡ ಹೆಂಡತಿ ಜಗಳದಲ್ಲಿ ಕೂಸು ಬಡವಾಯ್ತು ಅನ್ನೋ ಹಾಗೆ ಇವರಿಬ್ಬರ ಅಧಿಕಾರ ಹಸ್ತಾಂತರ ಕಚ್ಚಾಟದಲ್ಲಿ ಶಾಸಕರು, ಕಾರ್ಯಕರ್ತರು ಬಲಿಯಾಗುತ್ತಿದ್ದಾರೆ. ನಾನು ಸಿಎಂ ಆಗಬೇಕೆಂಬ ಹಂಬಲ ಜನರಿಗೂ ಇದೆ, ಶಾಸಕರಿಗೂ ಇದೆ, ಮಾಧ್ಯಮದವರಿಗೂ ಇದೆ. ಆದರೆ, ಪಕ್ಷ ಏನು ಹೇಳುತ್ತದೆ ಎಂದು ನೋಡಬೇಕು" ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದರು.**

1 ಸಿಎಂ ವಿಚಾರದಲ್ಲಿ ವರಿಷ್ಠರ ನಿರ್ಧಾರ, ಮಾತುಗಳು ಅಂತಿಮ; ಸಚಿವ ಪ್ರಿಯಾಂಕ್ ಖರ್ಗೆ

2 ಯತೀಂದ್ರ ಹೇಳಿಕೆ ವೈಯಕ್ತಿಕ, ಹೈಕಮಾಂಡ್ ತೀರ್ಮಾನವೇ ಅಂತಿಮ: ಗೃಹ ಸಚಿವ ಪರಮೇಶ್ವರ್

3 ಸಿಎಂ ಅಧಿಕಾರ ಹಂಚಿಕೆ ಒಪ್ಪಂದ ಆಗಿದೆ, ಡಿಕೆಶಿ ಪ್ರಾಣ ಕೇಳಿದ್ರು ಕೊಡ್ತೇನೆ: ಬಸವರಾಜ್ ಶಿವಗಂಗಾ

• ಉದಯವಾಹಿನಿ, ಬೆಂಗಳೂರು

ಡಿಕೆಶಿ ಸಿಎಂ ಆಗಬೇಕು ಎಂಬ ಕೂಗು ಜೋರಾಗಿದೆ ಎಂಬ ಪ್ರಶ್ನೆಗೆ ಉತ್ತರಿಸಿದರು. ಪರಮೇಶ್ವರ್ ಅವರು ಸಿಎಂ ಆಗಬೇಕೆಂಬ ಒತ್ತಾಯವೂ ಇದೆ ಎಂದು ಕೇಳಿದಾಗ, ''ತಪ್ಪೇನಿದೆ ಅವರವರ ಅಭಿಮಾನಿಗಳು ಆಸೆ ಪಡುತ್ತಾರೆ. ಅದಕ್ಕೆಲ್ಲ ನಾನು ಬೇಡ ಅನ್ನುವುದಕ್ಕೆ ಆಗುವುದಿಲ್ಲ'' ಎಂದರು. ದರ ಪರಿಷ್ಕರಣೆ ವೇಳೆ ಬಿಎಂಆರ್‌ಸಿಎಲ್ ನಮ್ಮನ್ನು ಸಂಪರ್ಕಿಸಿಲ್ಲ. ದರ ಪರಿಷ್ಕರಿಸಲು ಅವರಿಗೆ ಅಧಿಕಾರವಿದೆ. ಕೇಂದ್ರ ಸರ್ಕಾರದ ಸೆಕ್ರೆಟರಿ ಇದಕ್ಕೆ ಅಧ್ಯಕ್ಷರು. ಅವರೇ ತೆಗೆದುಕೊಂಡ ನಿರ್ಧಾರ ಇದು. ನಾನು ಇಂದು ಇಲ್ಲವೇ, ನಾಡಿದ್ದು ಹೋಗಿ ಮಾತನಾಡುತ್ತೇನೆ. ನಮಗೂ ಜನರಿಗೆ ತೊಂದರೆ ಕೊಡಲು ಇಷ್ಟವಿಲ್ಲ. ಹಣಕಾಸಿನ ವ್ಯವಸ್ಥೆ ಏನಿದೆ, ಅದನ್ನು ನಾನು ನೋಡುತ್ತೇನೆ'' ಎಂದು ಡಿಕೆಶಿ ತಿಳಿಸಿದರು.

**ಪೂಜಾರಿ ನಿವಾಸಕ್ಕೆ ಡಿಕೆಶಿ ಭೇಟಿ:** ಡಿ.ಕೆ. ಶಿವಕುಮಾರ್ ಮಾಜಿ ಸಚಿವ ಬಿ.ಜನಾರ್ದನ ಪೂಜಾರಿ ಅವರ ನಿವಾಸಕ್ಕೆ ಭೇಟಿ ನೀಡಿ, ಮಾತುಕತೆ ನಡೆಸಿದ್ದರು. ಕೆಪಿಸಿಸಿ ಮಾಜಿ ಅಧ್ಯಕ್ಷರೂ ಆಗಿರುವ ಪೂಜಾರಿ ಅವರ ಮಾರ್ಗದರ್ಶನ ಪಡೆದ ಶಿವಕುಮಾರ್, ಪ್ರಸಕ್ತ ರಾಜಕೀಯ ವಿಚಾರಗಳ ಸಹಿತ ಹಲವು ವಿಷಯಗಳ ಕುರಿತು ಚರ್ಚೆ ನಡೆಸಿದರು. ಈ ಸಂದರ್ಭ ಮಾಜಿ ಸಚಿವ ಬಿ.ರಮಾನಾಥ ರೈ, ಪಕ್ಷ ಪ್ರಮುಖರಾದ ವಿನಯ ಕುಮಾರ್ ಸೊರಕೆ, ಹರೀಶ್ ಕುಮಾರ್, ಆರ್. ಪದ್ಮರಾಜ್, ಇನಾಯತ್ ಆಲಿ, ಇಬ್ರಾಹಿಂ ನವಾಜ್, ಬೇಬಿ ಕುಂದರ್ ಸಹಿತ ಹಲವು ಮುಖಂಡರು ಉಪಸ್ಥಿತರಿದ್ದರು. ಕೆಲ ದಿನಗಳ ಹಿಂದೆ ಮಾಜಿ ಸಿಎಂ ವೀರಪ್ಪಮೊಯ್ಲಿ ಕೂಡ ಪೂಜಾರಿ ನಿವಾಸಕ್ಕೆ ಭೇಟಿ ನೀಡಿದ್ದರು.

**ಚರ್ಚೆ ಮುನ್ನೆಲೆಗೆ:** ಯತೀಂದ್ರ ಅವರ ಹೇಳಿಕೆ ಬೆನ್ನಲ್ಲೇ ಮತ್ತೊಮ್ಮೆ ಸಿಎಂ ಬದಲಾವಣೆ ಚರ್ಚೆ ಮುನ್ನೆಲೆಗೆ ಬಂದಿದೆ. ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರದಲ್ಲಿ ನಮ್ಮಲ್ಲಿ ಯಾವುದೇ ಗೊಂದಲಗಳು ಇಲ್ಲ. ಸದ್ಯಕ್ಕೆ ಅವರನ್ನು ಇಳಿಸಿ ಎಂದು ಯಾರು ಕೇಳುತ್ತಿಲ್ಲ. ಹೈಕಮಾಂಡ್ ನೇರವಾಗಿ ಹೇಳದೇ ಇರಬಹುದು, ಆದರೆ ಸದ್ಯಕ್ಕೆ ನಾಯಕತ್ವದಲ್ಲಿ ಬದಲಾವಣೆ ಮಾಡಲ್ಲ ಎಂದು ಸ್ಪಷ್ಟವಾಗಿ ಸಿಗ್ನಲ್ ಕೊಟ್ಟಿದೆ. ಆದ್ದರಿಂದ ಸಿದ್ದರಾಮಯ್ಯ ಅವರು 5 ವರ್ಷ ಸಿಎಂ ಆಗಿರುತ್ತಾರೆ ಅಂತಾ ನಾನು ನಂಬುತ್ತೇನೆ'' ಎಂದು ಯತೀಂದ್ರ ಸಿದ್ದರಾಮಯ್ಯ ಹೇಳಿದ್ದರು.

ಇದಕ್ಕೆ, ಬಳಿಕ ಮಂಗಳೂರಿನಲ್ಲಿ ಪ್ರತಿಕ್ರಿಯಿಸಿದ್ದ ಡಿಸಿಎಂ ಡಿ.ಕೆ.ಶಿವಕುಮಾರ್, ''ಯತೀಂದ್ರರೇ ಈಗ ನಮ್ಮ ಹೈಕಮಾಂಡ್. ಅವರು ಹೇಳಿದ ಮೇಲೆ ಅವರ ಮಾತನ್ನೇ ಗೌರವದಿಂದ ಸ್ವೀಕರಿಸೋಣ. ಈ ಬಗ್ಗೆ ನನಗೆ ಪ್ರತಿಕ್ರಿಯಿಸಲು ಇಷ್ಟವಿಲ್ಲ. ದೆಹಲಿಯವರು ಪ್ರತಿಕ್ರಿಯೆ ನೀಡಬೇಕು'' ಎಂದು ತಿಳಿಸಿದ್ದರು.

**ಕ್ಯಾಬಿನೆಟ್ ನಿರ್ಧಾರ:** ಯಾರಿಗೆ ಸಾಲ ಕೊಟ್ಟಿದ್ದಾರೆ ಅದನ್ನು ಸರ್ಕಾರ ಮನ್ನಾ ಮಾಡೋದು ಅನೇಕ ಬಾರಿ ಮಾಡಿದೆ. ಅಲ್ಪಸಂಖ್ಯಾತ,ಯಾವುದೇ ಸಮುದಾಯವರಿಗೆ ಮನ್ನಾ ಮಾಡುವ ಕೆಲಸ ಮಾಡಿದ್ದೇವೆ. ಹಿಂದೆಯೂ ರೈತರ ಸಾಲ ಮನ್ನಾ ಮಾಡಿರಲಿಲ್ವಾ ಕೇಂದ್ರ, ರಾಜ್ಯ ಎರಡೂ ಸರ್ಕಾರಗಳು ಕೂಡ ಸಾಲಮನ್ನಾ ಮಾಡುತ್ತಾ ಬರುತ್ತಿದೆ. ಇದರಲ್ಲಿ ರಾಜಕೀಯ ಏನಿಲ್ಲ ಎಂದರು.

### ಇವಿಎಂ ಪಾರದರ್ಶಕತೆ ಅನುಮಾನವಿದೆ

ಗ್ರಾಮ ಪಂಚಾಯಿತಿ ಸೇರಿದಂತೆ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಪಾರದರ್ಶಕತೆ ತರಲು ಮತಪತ್ರಗಳ ಬಳಕೆ ಮಾಡಲು ನಿರ್ಧರಿಸಲಾಗಿದೆ. ಇವಿಎಂ ಪಾರದರ್ಶಕತೆ ಬಗ್ಗೆ ಅನುಮಾನಗಳಿವೆ. ತಂತ್ರಜ್ಞಾನದಲ್ಲಿ ಮುಂದುವರಿದ ದೇಶಗಳೇ ಮತಪತ್ರಗಳನ್ನು ಬಳಸುತ್ತಿವೆ. ಮತಗಟ್ಟೆಗಳನ್ನು ದೋಚಲು ಸಾಧ್ಯವಾಗದು. ಅಕ್ರಮ ನಡೆದರೆ ಕಂಡು ಹಿಡಿಯುವುದು ಸುಲಭ. ಆದರೆ, ಇವಿಎಂ ತಂತ್ರಜ್ಞಾನದಲ್ಲಿ ಫಲಿತಾಂಶ ಬದಲಿಸಿದರೂ ಗೊತ್ತಾಗದು. ಮುಂದಿನ ವಿಧಾನಸಭಾ ಚುನಾವಣೆಯಲ್ಲೂ ಮತಪತ್ರಗಳ ಬಳಕೆ ಮಾಡುವುದು ಒಳಿತು ಎಂದರು.

### ಆಪರೇಷನ್ ಕಮಲ ಹುಟ್ಟುಹಾಕಿದ್ದು ಬಿಜೆಪಿಗರು



ಆಪರೇಷನ್ ಕಮಲ ಹುಟ್ಟುಹಾಕಿದ್ದು ಬಿಜೆಪಿಗರು. ಇಡೀ ದೇಶದಲ್ಲೇ ಆಪರೇಷನ್ ಕಮಲ ಅವರಿಂದಲೇ ನಾಂದಿ ಹಾಡಲಾಗಿತ್ತು. ವಿರೋಧ ಪಕ್ಷದಲ್ಲಿ ಯಾರೂ ಸಮರ್ಥರಿಲ್ಲ. ನಿಲುವಳಿ ಸೂಚನೆಯನ್ನು ಅರ್ಧ ದಿನ ತಡೆಹಿಡಿಯಲು ಆಗಲಿಲ್ಲ. ಅವರು ಕಾಂಗ್ರೆಸ್ ಬಗ್ಗೆ ಮಾತನಾಡುತ್ತಾರೆ ಎಂದು ಪ್ರಶ್ನಿಸಿದರು. ಮೊದಲು ಅವರ ಪಕ್ಷವನ್ನು ನೋಡಿಕೊಳ್ಳಿ ನಂತರ ನಮ್ಮ ಪಕ್ಷದ ಬಗ್ಗೆ ಬರಲಿ. 135 ವರ್ಷ ಚೆನ್ನಾಗಿ ಕೆಲಸ ಮಾಡಿಕೊಂಡು ಬಂದಿದ್ದೇವೆ. ಇನ್ನೂ 135 ವರ್ಷ ಚೆನ್ನಾಗಿ ಕೆಲಸ ಮಾಡುತ್ತೇವೆ ಎಂದು ಸಚಿವ ಖರ್ಗೆ ಹೇಳಿದ್ರು.

### ಹೈಕಮಾಂಡ್‌ಗೆ ಡೆಡ್‌ಲೈನ್

**ಬಿಜೆಪಿಯಿಂದ ಗಾಂಧೀಜಿ ಆಶಯ ಕಡೆಗಣನೆ**

ನಾವು ಗಾಂಧೀಜಿ ಅವರ ಗ್ರಾಮ ಸ್ವರಾಜ್ ಪರಿಕಲ್ಪನೆಯಲ್ಲಿ ಸಾಗುತ್ತಿದ್ದೇವೆ. ಬಿಜೆಪಿಯವರಿಗೆ ಜನರ ಕೆಲಸ, ಗಾಂಧೀಜಿಯ ಆಶಯಗಳು ಬೇಕಿಲ್ಲ. ಅದಕ್ಕಾಗಿ ಮನರೇಗಾ ಯೋಜನೆಯ ಹೆಸರು ಬದಲಾವಣೆ ಮಾಡಿದ್ದಾರೆ ಎಂದು ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ದೂರಿದರು. ಮನರೇಗಾದ ಯೋಜನೆ ಹೆಸರಿನಲ್ಲಿ ಕೇಂದ್ರ ಸರ್ಕಾರದ ಸಾವಿರಾರು ಕೂಲಿ ಕಾರ್ಮಿಕರಿಗೆ ಅನ್ಯಾಯ ಮಾಡಿದೆ ಎಂದರು. ಸಚಿವ ಕೆ.ಜೆ.ಜಾರ್ಜ್ ಇಲಾಖೆಯಲ್ಲಿ ತಮ್ಮ ಹಸ್ತಕ್ಷೇಪದ ಆರೋಪದ ವಿಚಾರಕ್ಕೆ ಪ್ರತಿಕ್ರಿಯಿಸಿ, ಈ ಬಗ್ಗೆ ನನಗೇನೂ ಗೊತ್ತಿಲ್ಲ. ಕೆ.ಜೆ ಜಾರ್ಜ್ ಅವರೇ ಸ್ಪಷ್ಟಪಡಿಸಿದ್ದಾರೆ. ಅನಗತ್ಯವಾಗಿ ಬಿಜೆಪಿಯವರು ನನ್ನ ಹೆಸರನ್ನು ಎಳೆದು ತಂದಿದ್ದಾರೆ ಎಂದರು.

**ನೀವು ಯಾವಾಗ ಸಿಎಂ ಆಗ್ತೀರಾ**

ಅಭಿಮಾನಿಗಳು ಮುಂದಿನ ಸಿಎಂ ಎಂದು ಜೈಕಾರ ಹಾಕೋದು ಸಹಜ. ನನಗೂ ಹೇಳಿದ್ರು. ಇನ್ನೊಬ್ಬರಿಗೂ ಹೇಳ್ತಾರೆ. ಅದು ಅಭಿಮಾನಿಗಳ ಆಸೆ ಅಷ್ಟೇ. ಅಂತಿಮವಾಗಿ ತೀರ್ಮಾನ ಮಾಡೋದು ಹೈಕಮಾಂಡ್ ಎಂದ ಪರಮೇಶ್ವರ್ ನೀವು ಯಾವಾಗ ಸಿಎಂ ಆಗ್ತೀರಾ ಎಂಬ ಮಾಧ್ಯಮದ ಪ್ರಶ್ನೆಗೆ ಆಮೇಲೆ ಹೇಳ್ತೀನಿ ನಡೀರಿ ಎಂದು ನಗುತ್ತಾ ತೆರಳಿದರು.


## ವಿನ್ಯಾಸಗಾರರು ಬೇಕಾಗಿದ್ದಾರೆ



ಪೇಜ್ ಮೇಕರ್, ಇನ್ ಡಿಸೈನರ್, ಕನ್ನಡ ಟೈಪ್ ಮಾಡಬಲ್ಲವರು. ಬೆಂಗಳೂರಿನಲ್ಲಿ ವಾಸವಿರುವ ಬೆಂಗಳೂರು ಕಚೇರಿಯಲ್ಲಿ ಕೆಲಸ ಮಾಡಲು ಇಚ್ಚಿಸುವ (4 ಮಂದಿ) ಪತ್ರಿಕೋದ್ಯಮದಲ್ಲಿ ತೀವ್ರ ಆಸಕ್ತಿ, ಕನ್ನಡ ಭಾಷೆಯ ಮೇಲೆ ಹಿಡಿತ, ಸಾಮಾನ್ಯ ಜ್ಞಾನ, ಓದುವ ಹವ್ಯಾಸ ಹಾಗೂ ಉತ್ಸಾಹ ಕಾತುರವಿರುವ ಆಸಕ್ತರಿಗೆ ನಿರ್ದಿಷ್ಟ ಪದವಿಯ ಅಗತ್ಯವಿಲ್ಲ. ವಯೋಮಿತಿ ಗರಿಷ್ಠ 25 ವರ್ಷ.
ಆಸಕ್ತರು ಕೂಡಲೇ ಈ ಕೆಳಗಿನ ವಿಳಾಸಕ್ಕೆ ತಮ್ಮ ಪೂರ್ಣ ವಿವರಗಳುಳ್ಳ ಅರ್ಜಿ ಸಲ್ಲಿಸಿ ಅಥವಾ ಮುಖತಃ ಭೇಟಿ ನೀಡಿ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9448225696

ಉದಯ ವಾಹಿನಿ
#: 1230 'JAYAMAHAL 13th cross, 2nd phase, Girinagar, Bangalore-560085.
(Near to bangalore one park, opposite mandya medical)
udayavahininews@gmail.com


## ಜಿಬಿಎ ಚುನಾವಣೆಗೆ ಕಮಲ ಪಡೆ ಭರ್ಜರಿ ಸಿದ್ಧತೆ: ಶೀಘ್ರದಲ್ಲೇ ಆಯ್ಕೆ

• ಉದಯವಾಹಿನಿ, ಬೆಂಗಳೂರು

ಜಿಬಿಎ ಚುನಾವಣೆಗೆ ಕಮಲ ಪಡೆ ಭರ್ಜರಿ ಸಿದ್ಧತೆ ಮಾಡಿಕೊಳ್ಳುತ್ತಿದೆ. ಚುನಾವಣಾ ವೀಕ್ಷಕ ರಾಮ್ ಮಾಧವ್ ನೇತೃತ್ವದಲ್ಲಿ ಮುಖಂಡರು ಮಹತ್ವದ ಸಭೆಯನ್ನು ನಡೆಸಿದ್ದಾರೆ. ಈ ನಡುವೆ ಮೈತ್ರಿ ಪಕ್ಷ ಜೆಡಿಎಸ್ ಜೊತೆ ಚರ್ಚಿಸಿ ಶೀಘ್ರದಲ್ಲೇ ಅಭ್ಯರ್ಥಿಗಳ ಆಯ್ಕೆ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ. ಕಾಂಗ್ರೆಸ್ ತಂತ್ರ - ಕುತಂತ್ರದ ನಡುವೆ 5 ಜಿಬಿಎಯಲ್ಲೂ ಬಿಜೆಪಿ ಜಯಭೇರಿ ಬಾರಿಸಲು ಒಳ್ಳೆಯ ಅವಕಾಶ ಇದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಜಗನ್ನಾಥ ಭವನದಲ್ಲಿ ಗ್ರೇಟರ್ ಬೆಂಗಳೂರು ಅಥಾರಿಟಿ (ಜಿಬಿಎ) ಚುನಾವಣೆಯ ಹಿನ್ನೆಲೆಯಲ್ಲಿ ಮಹತ್ವದ ಸಭೆ ಆಯೋಜಿಸಲಾಗಿತ್ತು ಎಂದು ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ. ಯಾವತ್ತೇ ಜಿಬಿಎ ಚುನಾವಣೆ ನಡೆದರೂ ನಾವು ಗೆದ್ದೇ ಗೆಲ್ಲುತ್ತೇವೆ. ಕಾಂಗ್ರೆಸ್ ಪಕ್ಷದ ತಂತ್ರ - ಕುತಂತ್ರದ ನಡುವೆಯೂ 5 ಜಿಬಿಎಯಲ್ಲೂ ಬಿಜೆಪಿ ಜಯಭೇರಿ ಬಾರಿಸಲು ಒಳ್ಳೆಯ ಅವಕಾಶವಿದೆ.

ಹಾಗಾಗಿ ಅತಿ ಶೀಘ್ರದಲ್ಲಿ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನೂ ಆರಂಭಿಸಬೇಕು. ಜೆಡಿಎಸ್ ಜೊತೆ ಚರ್ಚಿಸಿ ಅವರ ಅಭಿಪ್ರಾಯ ಪಡೆದುಕೊಂಡು ಜಿಬಿಎ ಚುನಾವಣೆಗೆ ಸಜ್ಜಾಗಲು ನಿರ್ಧರಿಸಿದ್ದಾಗಿ ವಿವರಿಸಿದರು.

## ದಾಖಲಾತಿ ನಂತರೇ ವರ್ಗಾವಣೆ: ಉಪನ್ಯಾಸಕರ ಒತ್ತಾಯ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಪಿಯು ಕಾಲೇಜುಗಳ ಉಪನ್ಯಾಸಕರ ವರ್ಗಾವಣೆ ಪ್ರಕ್ರಿಯೆಯನ್ನು 2026-27ನೇ ಸಾಲಿನ ದಾಖಲಾತಿ ಪ್ರಕ್ರಿಯೆ ಪೂರ್ಣಗೊಂಡ ಬಳಿಕವೇ ನಡೆಸಬೇಕು ಎಂದು ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಸಂಘ ಒತ್ತಾಯಿಸಿದೆ. ಈ ಕುರಿತು ಶಾಲಾ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ, ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರಿಗೆ ಪತ್ರ ಬರೆದಿರುವ ಸಂಘವು, ಹೆಚ್ಚುವರಿ ಉಪನ್ಯಾಸಕರ ತಾತ್ಕಾಲಿಕ ಪಟ್ಟಿಯನ್ನು ಇಲಾಖೆ ಬಿಡುಗಡೆ ಮಾಡಿದೆ. ವಿದ್ಯಾರ್ಥಿ-ಉಪನ್ಯಾಸಕರ ಅನುಪಾತವನ್ನು ಈಗಿರುವ 320:1ರಿಂದ 180:1ಕ್ಕೆ ಪರಿಷ್ಕರಿಸಿದರೆ 'ಹೆಚ್ಚುವರಿ' ಇಲ್ಲವಾಗುತ್ತದೆ. ವಿದ್ಯಾರ್ಥಿಗಳಿಗೂ ಅನುಕೂಲವಾಗುತ್ತದೆ. ಈಗಿರುವ ಅನುಪಾತ ರಾಷ್ಟ್ರಮಟ್ಟದ ನೀತಿ ಮಾತ್ರವಲ್ಲ, ಅಂತಾರಾಷ್ಟ್ರೀಯ ಶೈಕ್ಷಣಿಕ ಮಾನದಂಡಗಳಿಗೂ ವಿರುದ್ಧವಾಗಿದೆ. ರಾಜ್ಯದಲ್ಲಿ ಸಿಬಿಎಸ್‌ಇಗೆ ಸಮಾನಾಂತರವಾಗಿ ಪಠ್ಯಕ್ರಮ ಜಾರಿಗೆ ತರುತ್ತಿರುವ ಕಾರಣ ವಿದ್ಯಾರ್ಥಿ- ಉಪನ್ಯಾಸಕ ಅನುಪಾತವನ್ನು ಪರಿಷ್ಕರಿಸಬೇಕು ಎಂದು ಒತ್ತಾಯಿಸಿದೆ.

''ವಿದ್ಯಾರ್ಥಿ-ಉಪನ್ಯಾಸಕರ ಅನುಪಾತವನ್ನು ಪರಿಷ್ಕರಿಸಿದ ನಂತರ ಹೆಚ್ಚುವರಿ ಉಪನ್ಯಾಸಕರ ಅಂತಿಮ ಪಟ್ಟಿ ಪ್ರಕಟಿಸಬೇಕು. ನಂತರವೇ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳಬೇಕು. ಹಾಗೆ ಮಾಡದೆ ಇದ್ದರೆ ಉಪನ್ಯಾಸಕರಿಗೆ ತೊಂದರೆಯಾಗುತ್ತದೆ. ಆಡಳಿತಾತ್ಮಕ ಗೊಂದಲಗಳಿಗೆ ಕಾರಣವಾಗುತ್ತದೆ'' ಎಂದು ಸಂಘದ ಅಧ್ಯಕ್ಷ ಎ.ಎಚ್.ನಿಂಗೇಗೌಡ ಪತ್ರದಲ್ಲಿ ವಿವರಿಸಿದ್ದಾರೆ.

## ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ಜೀವಿತ ಪ್ರಮಾಣಪತ್ರ

• ಉದಯವಾಹಿನಿ, ಬೆಂಗಳೂರು


**ಕ್ರಮ ವಹಿಸಲು ಸಿಎಂ ಸೂಚನೆ**

ಪಂಚ ಗ್ಯಾರಂಟಿಗಳಲ್ಲಿ ಒಂದಾದ ಗೃಹ ಲಕ್ಷ್ಮಿ ಯೋಜನೆಯ ಫಲಾನುಭವಿಗಳು ಜೀವಿತ ಪ್ರಮಾಣಪತ್ರ ನೀಡುವುದನ್ನು ಕಡ್ಡಾಯಗೊಳಿಸುವ ಬಗ್ಗೆ ಪರಿಶೀಲಿಸಿ ಕೂಡಲೇ ಕ್ರಮ ವಹಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸರಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಿದ್ದಾರೆ. ರಾಜ್ಯ ಗ್ಯಾರಂಟಿ ಪ್ರಾಧಿಕಾರದ ಉಪಾಧ್ಯಕ್ಷ ಹಾಗೂ ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಈ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದ್ದರು. ಅದಕ್ಕೆ ಮುಖ್ಯಮಂತ್ರಿ ಅವರು ಸರಕಾರದ ಮುಖ್ಯ ಕಾರ್ಯದರ್ಶಿ ಅವರಿಗೆ ಈ ಬಗ್ಗೆ ಪರಿಶೀಲನೆ ಮಾಡಿ ಶೀಘ್ರ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.

**ಮನವಿಯಲ್ಲೇನಿತ್ತು..:** ರಾಜ್ಯ ಸರಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳನ್ನು ಈಗಾಗಲೆ ರಾಜ್ಯಾದ್ಯಂತ ಯಶಸ್ವಿಯಾಗಿ ಜಾರಿಗೊಳಿಸಲಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಪೈಕಿ ಗೃಹಲಕ್ಷ್ಮಿ ಯೋಜನೆಯಡಿ 2023ರ ಜೂನ್ ತಿಂಗಳಿನಿಂದ ಸರಕಾರದ ಆದೇಶದನ್ವಯ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಮಾಸಿಕ 2 ಸಾವಿರ ರೂ. ಪಾವತಿಸಲಾಗುತ್ತಿದೆ.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯು ಯೋಜನೆಯ ಫಲಾನುಭವಿ ಮಹಿಳೆಯಾಗಿರುತ್ತಾರೆ.

ಗೃಹಲಕ್ಷ್ಮಿ ಯೋಜನೆಯಡಿ 1,24,12,543 ಅರ್ಹ ಫಲಾನುಭವಿಗಳಿಗೆ ಈವರೆಗೂ ಸುಮಾರು 57,300 ಕೋಟಿ ರೂ.ಗಳ ಆರ್ಥಿಕ ಸಹಾಯವನ್ನು ಪಾವತಿ ಮಾಡಲಾಗಿದೆ. ಈ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಲ್ಲಿ ಮರಣ ಹೊಂದಿರುವವರ ಮಾಹಿತಿಗಳು ಕಾಲಕಾಲಕ್ಕೆ ಪರಿಶೀಲನೆ ನಡೆಸಿ,



**ಮಾಹಿತಿಗಳು ಕಾಲಕಾಲಕ್ಕೆ ಪರಿಶೀಲನೆ**

**ಗೃಹಲಕ್ಷ್ಮಿ ಯೋಜನೆಯಡಿ 1,24,12,543 ಅರ್ಹ ಫಲಾನುಭವಿಗಳಿಗೆ ಈವರೆಗೂ ಸುಮಾರು 57,300 ಕೋಟಿ ರೂ.ಗಳ ಆರ್ಥಿಕ ಸಹಾಯವನ್ನು ಪಾವತಿ ಮಾಡಲಾಗಿದೆ. ಈ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಲ್ಲಿ ಮರಣ ಹೊಂದಿರುವವರ ಮಾಹಿತಿಗಳು ಕಾಲಕಾಲಕ್ಕೆ ಪರಿಶೀಲನೆ ನಡೆಸಿ, ಗೃಹಲಕ್ಷ್ಮಿ ಯೋಜನೆಯಡಿ ಪಾವತಿಯಾಗುವ ಮೊತ್ತವು ಮರಣ ಹೊಂದಿರುವ ಫಲಾನುಭವಿಗಳಿಗೆ ಕೆಲವು ಕಡೆ ಪಾವತಿಯಾಗುದನ್ನು ತಡೆಗಟ್ಟುವುದು ಅವಶ್ಯವಾಗಿರುತ್ತದೆ.**

ಗೃಹಲಕ್ಷ್ಮಿ ಯೋಜನೆಯಡಿ ಪಾವತಿಯಾಗುವ ಮೊತ್ತವು ಮರಣ ಹೊಂದಿರುವ ಫಲಾನುಭವಿಗಳಿಗೆ ಕೆಲವು ಕಡೆ ಪಾವತಿಯಾಗುದನ್ನು ತಡೆಗಟ್ಟುವುದು ಅವಶ್ಯವಾಗಿರುತ್ತದೆ. ಇದರಿಂದ ಸರಕಾರವು ಪಾವತಿಸುವ ಮೊತ್ತವು ಸದ್ವಿನಿಯೋಗವಾಗಲು ಹಾಗೂ ಸರಕಾರದ ಹಣ ಇತರೆ ಅರ್ಹ ಫಲಾನುಭವಿಗಳಿಗೆ ವಿತರಿಸಲು ಅನುಕೂಲವಾಗುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದು ದಿನೇಶ್ ಗೂಳಿಗೌಡ ಮನವಿ ಮಾಡಿದ್ದರು.

ನಿವೃತ್ತ ಸರಕಾರಿ ನೌಕರರಿಗೆ ಪಾವತಿಸುವ ಪಿಂಚಣಿ ಮೊತ್ತವನ್ನು ಪಡೆಯಲು ಅವರು ಪ್ರತಿ ವರ್ಷ ಸಂಬಂಧಪಟ್ಟ ಬ್ಯಾಂಕ್‌ಗಳಿಗೆ ತಮ್ಮ ಜೀವಿತ ಪ್ರಮಾಣ ಸಲ್ಲಿಸುವುದನ್ನು ಕಡ್ಡಾಯಗೊಳಿಸಿರುವ ಮಾದರಿಯಲ್ಲಿ ಗೃಹಲಕ್ಷ್ಮಿ ಯೋಜನೆಯಡಿಯ ಅರ್ಹ ಫಲಾನುಭವಿಗಳು ಸಹ ಪ್ರತಿ ವರ್ಷ ಸಂಬಂಧಪಟ್ಟ ಬ್ಯಾಂಕ್‌ಗಳಿಗೆ ತಮ್ಮ ಜೀವಿತ ಪ್ರಮಾಣ ಸಲ್ಲಿಸುವುದನ್ನು ಕಡ್ಡಾಯಗೊಳಿಸುವ ಬಗ್ಗೆ ಹಾಗೂ ಇತರೆ ಮಾರ್ಗೋಪಾಯಗಳ ಬಗ್ಗೆ ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ದಿನೇಶ್ ಗೂಳಿಗೌಡ ಕೋರಿದ್ದರು.

## ಬಿ ಖಾತಾ ಸೈಟ್‌ನಿಂದ ಎ-ಖಾತಾ ಪರಿವರ್ತನೆ ಈಗ ಮತ್ತಷ್ಟು ಸುಲಭ

### ● ಮಾಸ್ಟರ್ ಪ್ಲಾನ್ ಪ್ರದೇಶದಲ್ಲಿ ಪ್ರತ್ಯೇಕ ಭೂ ಪರಿವರ್ತನೆಯ ಅಗತ್ಯ ಇಲ್ಲ: ಸಚಿವ ಕೃಷ್ಣಭೈರೇಗೌಡ

• ಉದಯವಾಹಿನಿ, ಬೆಂಗಳೂರು

ಮಾಸ್ಟರ್ ಪ್ಲಾನ್ ಪ್ರದೇಶದಲ್ಲಿ ಭೂಮಿಯನ್ನು ಸ್ವಯಂ ಪರಿವರ್ತನೆ ಮಾಡುವ ಅಗತ್ಯವನ್ನು ಸರಕಾರ ಇದೀಗ ತೆಗೆದುಹಾಕಿದೆ. ಮಾಸ್ಟರ್ ಪ್ಲಾನ್ ಪ್ರಕಾರ ನೇರವಾಗಿ ಯೋಜನೆ ಅನುಮೋದನೆ ಪಡೆಯಬಹುದು. ಯೋಜನಾ ಅನುಮೋದನೆಯ ಭಾಗವಾಗಿ ಪರಿವರ್ತನೆ ಮಾಡಲಾಗುತ್ತದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ತಿಳಿಸಿದರು.

ವಿಕಾಸಸೌಧದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಬಿಎ ವ್ಯಾಪ್ತಿಯ ಭೂಮಿ ಸ್ವಯಂ ಪರಿವರ್ತನೆ ನೂತನ ತಂತ್ರಾಂಶವನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಮಾಸ್ಟರ್ ಪ್ಲಾನ್ ಪ್ರಕಾರ, ಲಕ್ಷಾಂತರ ಜಿಬಿಎ 'ಬಿ ಖಾತಾ' ನಿವೇಶನ ಮಾಲಕರಿಗೆ ಪ್ರಯೋಜನವಾಗುವಂತೆ 'ಬಿ ಖಾತಾ'ದಿಂದ 'ಎ ಖಾತಾ'ಗೆ ಪರಿವರ್ತನೆ ಸಕ್ರಿಯಗೊಳಿಸಲಾಗಿದೆ ಎಂದು ಹೇಳಿದರು.

ಜಿಬಿಎ ವ್ಯಾಪ್ತಿಯ ಭೂಮಿ ಸ್ವಯಂ ಪರಿವರ್ತನೆ 'ಈವರೆಗೆ, ಮಾಸ್ಟರ್ ಪ್ಲಾನ್ ಒಳಗೆ ಬರುವ ಪ್ರದೇಶಗಳಲ್ಲಿಯೂ ಸಹ ಭೂಮಿಯನ್ನು ಪರಿವರ್ತಿಸುವುದು ಅಗತ್ಯವಾಗಿತ್ತು.

ಡೀಮ್ಡ್ ಕನ್ವರ್ಷನ್ ಹೊರತಾಗಿಯೂ, ಈ ಪ್ರಕ್ರಿಯೆ ಕನಿಷ್ಠ 4-6 ತಿಂಗಳು ಸಮಯ ತೆಗೆದುಕೊಳ್ಳುತ್ತಿತ್ತು. ಅಲ್ಲದೆ, ಮಧ್ಯವರ್ತಿಗಳು ಡೆವಲಪರ್ಗಳನ್ನು ಶೋಷಿಸಲು ಅವಕಾಶ ನೀಡುತ್ತಿತ್ತು' ಎಂದು ಕೃಷ್ಣ ಭೈರೇಗೌಡ ತಿಳಿಸಿದರು.


ವಿಳಂಬ, ಕಿರುಕುಳ, ಭ್ರಷ್ಟಾಚಾರ ಮತ್ತು ವೆಚ್ಚ ಹೆಚ್ಚಳವು ಅಂತಿಮವಾಗಿ ನಿವೇಶನ-ಖರೀದಿದಾರರಾದ ಸಾಮಾನ್ಯ ಜನರ ಮೇಲೆ ಹೊರೆಯಾಗುತ್ತಿತ್ತು. ಇಂತಹ ಬೆಳವಣಿಗೆಗಳು ಸರಕಾರ ಮತ್ತು ಕಂದಾಯ ಇಲಾಖೆಯ ಅಪಖ್ಯಾತಿಗೆ ಕಾರಣವಾಗಿತ್ತು ಎಂದು ಅವರು ವಿಷಾದಿಸಿದರು.

ಪ್ರಸಕ್ತ ಜಿಬಿಎ ವ್ಯಾಪ್ತಿಯಲ್ಲಿ ಸ್ವಯಂ ಪರಿವರ್ತನೆಯನ್ನು ಜಾರಿಗೆ ತರುವುದರೊಂದಿಗೆ, ಕಂದಾಯ ಇಲಾಖೆಯು ಕಿರುಕುಳ, ಭ್ರಷ್ಟಾಚಾರ, ವಿಳಂಬ ನೀತಿ ಹಾಗೂ ಸಾಮಾನ್ಯ ಜನರ ಮೇಲಿನ ಹೊರೆ ತಡೆಯುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ. ಇದೇ ಸಮಯದಲ್ಲಿ ಆಡಳಿತದಲ್ಲಿ ಸುಧಾರಣೆಗಳನ್ನು ತರಲು ಮಹತ್ವದ ನಿರ್ಧಾರವಾಗಿದೆ ಎಂದು ಅವರು ಹೇಳಿದರು.

ಕಾನೂನುಬದ್ಧ ಭೂ ಅಭಿವೃದ್ಧಿಯನ್ನು ಸರಳ, ಸುಲಲಿತ ಮತ್ತು ಶೀಘ್ರವಾಗಿ ಮಾಡುವುದು ಉದ್ದೇಶವಾಗಿದೆ. ಹೀಗಾಗಿ, ಸಾಮಾನ್ಯ ಜನರಿಗೆ ಕೈಗೆಟುಕುವ ನಿವೇಶನಗಳನ್ನು ಖರೀದಿಸಲು ಇದು ಸಹಾಯ ಮಾಡುತ್ತದೆ ಎಂದು ಕೃಷ್ಣ ಭೈರೇಗೌಡ ಭರವಸೆ ನೀಡಿದರು.

ಅಲ್ಲದೆ, ಈ ಸುಧಾರಣೆಯು ಆಡಳಿತ ಪಾಲನೆ ಮತ್ತು ಭೂ ಅಭಿವೃದ್ಧಿಯ ವೆಚ್ಚ ಸಮಯ ಕಡಿಮೆ ಮಾಡುತ್ತದೆ. ಈ ಸುಧಾರಣೆಗಳು ವಸತಿ ಅಭಿವೃದ್ಧಿಗೆ ಮಾತ್ರವಲ್ಲದೆ ಮಾಸ್ಟರ್ ಪ್ಲಾನ್ ನಲ್ಲಿ ಅನುಮತಿಸಲಾದ ಕೈಗಾರಿಕಾ ಮತ್ತು ಇತರ ಬಳಕೆಗಳಿಗೂ ಲಭ್ಯವಿರಲಿದೆ.

ಈ ಸುಧಾರಣೆಯೊಂದಿಗೆ, ಕಂದಾಯ ಇಲಾಖೆಯು ಶೋಷಣೆ ಮತ್ತು ಭ್ರಷ್ಟಾಚಾರವನ್ನು ಮೂಲದಲ್ಲೇ ತಡೆಯಲು ಮುಂದಾಗಿದೆ ಎಂದು ಆಶಯ ವ್ಯಕ್ತಪಡಿಸಿದರು.



> "ನಗರೀಕರಣ ಹೆಚ್ಚಾದಂತೆ, ನಗರ ಆಸ್ತಿಗಳಿಗೆ ಬೇಡಿಕೆ ವೇಗವಾಗಿ ಹೆಚ್ಚಾಗುತ್ತಿದೆ ಯೋಜನಾ ಬದ್ಧ ಅಭಿವೃದ್ಧಿಯನ್ನು ಸುಗಮಗೊಳಿಸಲು ಮತ್ತು ಜನರಿಗೆ ಕೈಗೆಟುವ ದರದಲ್ಲಿ ಆಸ್ತಿ ಖರೀದಿಗೆ ಸಹಕರಿಸಲು ನಮ್ಮ ಸರಕಾರ ಬದ್ಧವಾಗಿದೆ. ಅದೇ ಸಮಯದಲ್ಲಿ ಜನಸಾಮಾನ್ಯರು ಉತ್ತಮ ಆಡಳಿತ ಪಡೆಯಲು ಹಾಗೂ ಸುಗಮವಾಗಿ ತಮ್ಮ ವ್ಯವಹಾರವನ್ನು ನಡೆಸಲು ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ನಮ್ಮ ಸರಕಾರ ನಿರಂತರ ಸುಧಾರಣೆಗಳನ್ನು ತರುತ್ತಿದೆ. ಮಾಸ್ಟರ್ ಪ್ಲಾನ್‌ನಲ್ಲಿ ಸ್ವಯಂಚಾಲಿತ ಪರಿವರ್ತನೆಯು ಆ ದಿಕ್ಕಿನಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ
> -ಕೃಷ್ಣ ಭೈರೇಗೌಡ, ಸಚಿವರು

**ಆಸ್ತಿ ಮಾಲಕರಿಗೆ ಇದು ಸಹಾಯ**

ಸ್ವಯಂ ಪರಿವರ್ತನೆಯಿಂದ ಹಾಲಿ ಬಿ-ಖಾತಾ ನಿವೇಶನಗಳೂ ಅನುಕೂಲ ಪಡೆಯಲಿವೆ. ಬಿ ಖಾತಾ ಆಸ್ತಿಗಳನ್ನು ಎ ಖಾತಾ ಆಗಿ ಪರಿವರ್ತಿಸಲು ಜಿಬಿಎ ಈಗ ಕಾನೂನು ಚೌಕಟ್ಟನ್ನು ಸರಳೀಕರಿಸಲಾಗಿದೆ. ಈ ಹಿಂದೆ ಅನಧಿಕೃತ ನಿವೇಶನಗಳನ್ನು ಖರೀದಿಸಿದ ಲಕ್ಷಾಂತರ ಆಸ್ತಿ ಮಾಲಕರಿಗೆ ಇದು ಸಹಾಯವಾಗಲಿದೆ. ಎ-ಖಾತಾ ಪಡೆಯುವುದು ಇಂತಹ ನಿವೇಶನಗಳಿಗೆ ಕಾನೂನು ಬಲವನ್ನು ನೀಡುತ್ತದೆ ಎಂದು ಕೃಷ್ಣ ಭೈರೇಗೌಡ ವಿವರಿಸಿದರು.

ಸಾಲಗಳನ್ನು ಪಡೆಯಲು, ಅವರ ಆಸ್ತಿಯ ಮೌಲ್ಯವನ್ನು ಹೆಚ್ಚಿಸುವುದು ಸೇರಿದಂತೆ ಎಲ್ಲಾ ವಹಿವಾಟುಗಳೂ ಇದೀಗ ಸುಲಭ ಮಾಡಲಾಗಿದೆ. ಆನ್‌ಲೈನ್ ಪಾರದರ್ಶಕತೆ, ಸಮಯ-ಪರಿಮಿತಿ ಮತ್ತು ಸ್ವಯಂಚಾಲಿತ ಪ್ರಕ್ರಿಯೆಯ ಮೂಲಕ ಈ ಸೇವೆಗಳನ್ನೂ ಮತ್ತಷ್ಟು ಜನಪರಗೊಳಿಸಲಾಗಿದೆ. ಅಲ್ಲದೆ, ಇ ಖಾತಾ ಜೊತೆಗೆ ಎಲ್ಲಾ ದಾಖಲೆಗಳನ್ನೂ ಸಮೀಕರಣ ಮಾಡುವ ಮೂಲಕ ಜನರ ಆಸ್ತಿ ಮಾಲಕತ್ವಕ್ಕೆ ಮತ್ತಷ್ಟು ಬಲ ತುಂಬಲಾಗಿದೆ ಹಾಗೂ ಕಾನೂನು ತಕರಾರುಗಳಿಗೂ ಆಸ್ಪದ ಇಲ್ಲದಂತಾಗುತ್ತಿದೆ ಎಂದು ಅವರು ಹೇಳಿದರು. ದುರಾಡಳಿತದ ಒಂದು ಸಂಕೇತವಾಗಿ ನಡೆಯುತ್ತಿದ್ದ ಪರಿವರ್ತನೆ ಪ್ರಕ್ರಿಯೆಗಳನ್ನು ಸುಧಾರಿಸುವ ಮತ್ತು ಸರಳಗೊಳಿಸುವ ಮೂಲಕ, ಸರಕಾರವು ದಿಟ್ಟ ಹೆಜ್ಜೆಯನ್ನು ಇಟ್ಟಿದೆ ಎಂದು ಕೃಷ್ಣ ಭೈರೇಗೌಡ ತಿಳಿಸಿದರು. ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ, ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಸರಕಾರದ ಪ್ರಧಾನ ಕಾರ್ದಶಿರ(ವಿಪತ್ತು ನಿರ್ವಹಣೆ) ಮೌನೀಶ್ ಮುದ್ಗಿಲ್, ಕಂದಾಯ ಆಯುಕ್ತರಾದ ಮೀನಾ ನಾಗರಾಜ್ ಉಪಸ್ಥಿತರಿದ್ದರು.

**ಈ ದಿನದ ದರ** ಪೆಟ್ರೋಲ್: 102.92 ₹/L ಡೀಸೆಲ್ : 90.99 ₹/L ಬಂಗಾರ: ₹15,660/Gram24ct ₹14,355/Gram22ct ಬೆಳ್ಳಿ: ₹285.00/Gram

# ಟ್ರಕ್ ಚಾಲಕನ ಗಮನ ಬೇರೆಡೆ ಸೆಳೆದು ಲಕ್ಷಾಂತರ ರೂ. ಮೊಬೈಲ್ ಕದ್ದ ಕಳ್ಳರು

• ಉದಯವಾಹಿನಿ, ಬೆಂಗಳೂರು

ಟ್ರಕ್ ಚಾಲಕನ ಗಮನ ಬೇರೆಡೆ ಸೆಳೆದು ಅದರಲ್ಲಿದ್ದ ಲಕ್ಷಾಂತರ ರೂ ಮೌಲ್ಯದ ಮೊಬೈಲ್, ಇತರ ವಸ್ತುಗಳನ್ನು ಕಳ್ಳರು ದೋಚಿರುವ ಘಟನೆ ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲ್ಲೂಕಿನ ಕಾಕೋಳ ಸಮೀಪ ನಡೆದಿದೆ. ಕಳೆದ ಜನವರಿ 1ರಂದು ಈ ಘಟನೆ ನಡೆದಿದ್ದು, ಕಳ್ಳರ ಕೈ ಚಳಕ ಕಂಡು ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ. ಇತ್ತೀಚೆಗೆ ಬೆಳಗಾವಿ ಸಮೀಪ 400 ಕೋಟಿ ರೂ. ಹಣ ಸಾಗಿಸುತ್ತಿದ್ದ ಎರಡು ಕಂಟೈನರ್ ಟ್ರಕ್‌ಗಳನ್ನು ಹೈಜಾಕ್ ಮಾಡಿದ ಘಟನೆ ಮಾಸುವ ಮುನ್ನವೇ ಇದು ನಡೆದಿರುವುದು ಆತಂಕ ಮೂಡಿಸಿದೆ. ಬೆಂಗಳೂರಿನಿಂದ ಧಾರವಾಡಕ್ಕೆ ಟ್ರಕ್‌ನಲ್ಲಿ ಫ್ಲಿಪ್‌ಕಾರ್ಟ್ ಕಂಪೆನಿಗೆ ಸೇರಿದ ಮೊಬೈಲ್‌ಗಳು ಸೇರಿದಂತೆ ಕೆಲ ಔಷಧ, ಆಹಾರ ಪದಾರ್ಥಗಳನ್ನು ಸಾಗಿಸಲಾಗುತ್ತಿತ್ತು. ರಾಣೇಬೆನ್ನೂರಿನ ಕಾಕೋಳದಿಂದ ಮೊಟೇಬೆನ್ನೂರು ಮಧ್ಯೆ ಟ್ರಕ್ ಚಲಿಸುವಾಗ ಮಧ್ಯರಾತ್ರಿ 1 ಗಂಟೆ ಸಂದರ್ಭದಲ್ಲಿ ಅಪರಿಚಿತ ದುಷ್ಕರ್ಮಿಗಳು ಅದರಲ್ಲಿದ್ದ ಆರು ಬಾಕ್ಸ್‌ಗಳನ್ನು ಸಿನಿಮೀಯ ರೀತಿಯಲ್ಲಿ ಕಳವು ಮಾಡಿಕೊಂಡು ಪರಾರಿಯಾಗಿದ್ದಾರೆ. ವಿಶೇಷವೆಂದರೆ, ಚೋರರು ಟ್ರಕ್‌ನಲ್ಲಿದ್ದ ವಸ್ತುಗಳನ್ನು ಒಡೆದು ತೆರೆಯುತ್ತಿದ್ದಂತೆಯೇ ಮಾಲೀಕರಿಗೆ ಮೆಸೇಜ್ ಹೋಗಿದೆ. ನಂತರ ಮಾಲೀಕರು ಟ್ರಕ್ ಚಾಲಕ ಮಲಿಕಾಜಾನ್ ಮುಲ್ಲಾಗೆ ಕರೆ ಮಾಡಿ ವಿಚಾರಿಸಿದಾಗ ಆತ ಆತಂಕಗೊಂಡು ಲಾರಿಯನ್ನು ಪಕ್ಕಕ್ಕೆ ನಿಲ್ಲಿಸಿ ನೋಡಿದಾಗ ಕಳ್ಳತನ ನಡೆದಿರುವುದು ಬೆಳಕಿಗೆ ಬಂದಿದೆ. ಈ ವಸ್ತುಗಳನ್ನು ಧಾರವಾಡದ ಕೊಟ್ಟೂರು ಗ್ರಾಮದ ಫ್ಲಿಪ್‌ಕಾರ್ಟ್ ವೇರ್‌ಹೌಸ್‌ಗೆ ಸಾಗಿಸಲಾಗುತ್ತಿತ್ತು ಎಂದು ದೂರಿನಲ್ಲಿ ತಿಳಿಸಲಾಗಿದೆ. ರಾಣೇಬೆನ್ನೂರು ಗ್ರಾಮಾಂತರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ. ಈ ಹೆದ್ದಾರಿಯಲ್ಲಿ ಸಾವಿರಾರು ವಾಹನಗಳು ಸಂಚರಿಸುತ್ತವೆ. ಇದರ ನಡುವೆ ಈ ಕಳ್ಳತನ ನಡೆದಿರುವುದು ಭಾರೀ ಕುತೂಹಲ ಕೆರಳಿಸಿದೆ. ಪ್ರಕರಣ ಕೂಡ ತಡವಾಗಿ ಬೆಳಕಿಗೆ ಬಂದಿದ್ದು, ಎಸ್‌ಪಿ ಯಶೋಧಾ ವಂಟಗೋಡಿ ಅವರು ಪ್ರಕರಣ ಕುರಿತು ವಿಶೇಷ ತಂಡ ರಚಿಸಿದ್ದು, ಪೊಲೀಸರು ತನಿಖೆ ಆರಂಭಿಸಿದ್ದಾರೆ.

# 54 ನಿಗಮ-ಮಂಡಳಿಗಳ ಅಧ್ಯಕ್ಷರ ಅವಧಿ ವಿಸ್ತರಿಸಿದ ರಾಜ್ಯ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಅವಧಿ ಪೂರ್ಣಗೊಂಡಿರುವ ವಿವಿಧ 54 ನಿಗಮ ಮಂಡಳಿ, ಪ್ರಾಧಿಕಾರ ಅಧ್ಯಕ್ಷರ ಪದಾವಧಿಯನ್ನು ಮುಂದಿನ ಆದೇಶದವರೆಗೆ ವಿಸ್ತರಿಸಿ ರಾಜ್ಯ ಸರ್ಕಾರ ಶನಿವಾರ ಆದೇಶ ಹೊರಡಿಸಿದೆ. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ಆರ್. ನಾಯ್ಕ, ದೇವರಾಜ ಅರಸು ನಿಗಮದ ಅಧ್ಯಕ್ಷ ಕೀರ್ತಿ ಗಣೇಶ್, ಒಕ್ಕಲಿಗ ನಿಗಮ ಅಧ್ಯಕ್ಷ ಎಂ.ಎಸ್. ಆತ್ಮಾನಂದ, ಮರಾಠ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಚ್. ಮರಿಯೋಜಿ ರಾವ್, ವಿಶ್ವಕರ್ಮ ಅಭಿವೃದ್ಧಿ ನಿಗಮದ ಪಿ. ಸುಜ್ಞಾನ ಮೂರ್ತಿ ಸೇರಿದಂತೆ ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರನ್ನು ಅದೇ ಹುದ್ದೆಯಲ್ಲಿ ಮುಂದುವರೆಸಿ, ಅವರಿಗೆ ನೀಡಲಾಗುತ್ತಿದ್ದ ರಾಜ್ಯ ಸಚಿವರ ಸ್ಥಾನಮಾನ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ನೀಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿದೆ. ಅಪ್ಪಾಜಿ ನಾಡಗೌಡ, ರಾಜು ಕಾಗೆ, ಎಚ್.ಸಿ. ಬಾಲಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಬೇಳೂರು ಗೋಪಾಲಕೃಷ್ಣ, ಟಿ.ಡಿ. ರಾಜೇಗೌಡ, ಶರತ್ ಬಚ್ಚೇಗೌಡ ಸೇರಿ ಅವಧಿ ಪೂರ್ಣಗೊಂಡಿದ್ದ ವಿವಿಧ 25 ನಿಗಮ ಮಂಡಳಿಗಳ ಅಧ್ಯಕ್ಷರ ಪದಾವಧಿಯನ್ನು ಮುಂದಿನ ಆದೇಶದವರೆಗೆ ವಿಸ್ತರಿಸಿ ಸರ್ಕಾರ ಇತ್ತೀಚೆಗೆ ಆದೇಶ ಹೊರಡಿಸಿತ್ತು.

# ತಂತ್ರಜ್ಞಾನದೊಂದಿಗೆ ಭವಿಷ್ಯ ರೂಪಿಸಿಕೊಳ್ಳಿ ಎಕ್ಸ್‌ಐಎಸ್‌ಎಸ್ ನಿರ್ದೇಶಕ ಜೋಸೆಫ್

• ಉದಯವಾಹಿನಿ, ಬೆಂಗಳೂರು

ಹಿಂದಿನ ವೈಜ್ಞಾನಿಕ ಸಾಧನೆಯನ್ನು ಗೌರವಿಸುವುದು, ನೂತನ ತಂತ್ರಜ್ಞಾನದೊಂದಿಗೆ ಭವಿಷ್ಯವನ್ನು ಕಟ್ಟುವುದು ನಮ್ಮ ಗುರಿ ಎಂದು ಎಕ್ಸ್‌ಐಎಸ್‌ಎಸ್ ನಿರ್ದೇಶಕ ಜೋಸೆಫ್ ಮೇರಿಯಾನಸ್ ಕುಜುರ್ ಎಸ್.ಜೆ. ತಿಳಿಸಿದರು. ಸುಸ್ಥಿರ ಭವಿಷ್ಯಕ್ಕಾಗಿ ಆಡಳಿತದ ಮರುಕಲ್ಪನೆ ಎ.ಐ ಯುಗದಲ್ಲಿ ಲಾಭ, ಉದ್ದೇಶ ಮತ್ತು ಜನರ ಸಮತೋಲನ ಕುರಿತು ಕ್ಷೇವಿಯರ್ ಸಾಮಾಜಿಕ ಸೇವಾ ಸಂಸ್ಥೆ ಹಮ್ಮಿಕೊಂಡಿದ್ದ ಮೂರು ದಿನಗಳ ಅಂತರರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೃತಕ ಬುದ್ಧಿಮತ್ತೆಯ ಯುಗದಲ್ಲಿ ನೀತಿಶಾಸ್ತ್ರ, ಸುಸ್ಥಿರತೆ ಮತ್ತು ಮಾನವೀಯ ಮೌಲ್ಯಗಳು ಆಡಳಿತಕ್ಕೆ ಮಾರ್ಗದರ್ಶನವಾಗಲಿವೆ. ನೈತಿಕ ನಾಯಕತ್ವ, ಸಾಮಾಜಿಕ ನ್ಯಾಯ, ಜವಾಬ್ದಾರಿಯುತ ನಿರ್ವಹಣಾ ಶಿಕ್ಷಣ ಇಂದಿನ ಅಗತ್ಯ, ಎಂದು ಹೇಳಿದರು. ಎಕ್ಸ್‌ಐಎಸ್‌ಎಸ್-ಜಿಬಿ ಅಧ್ಯಕ್ಷ ಅಜಿತ್ ಕುಮಾರ್ ಕ್ಸೆಸ್ ಎಸ್.ಜೆ. ಮಾತನಾಡಿ, ಸಂಸ್ಥೆಯು ತನ್ನ ಪ್ಲಾಟಿನಂ ಮಹೋತ್ಸವ ಆಚರಣೆಯ ಸಂದರ್ಭದಲ್ಲಿ ಅಂತರರಾಷ್ಟ್ರೀಯ ಸಮ್ಮೇಳನವು ಮೆರುಗು ನೀಡಿದೆ. ನಿಜವಾದ ಆಡಳಿತವು ಮಾನವ-ಕೇಂದ್ರಿತ, ಅಂತರ್ಗತ ಮತ್ತು ನೈತಿಕವಾಗಿಬೇಕು ಎಂದರು.


ಪ್ರಬೀರ್ ಝಾ ಪೀಪಲ್ ಅಡ್ವೆಸರಿ ಸಂಸ್ಥೆಯ ಸ್ಥಾಪಕ ಪ್ರಬೀರ್ ಝಾ, ಅಮೆರಿಕದ ಸಿಯಾಟಲ್ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಪ್ರಾಧ್ಯಾಪಕ ಜೋಸೆಫ್ ಎಂ. ಫಿಲಿಪ್ಸ್, ಪ್ರಧಾನ ಮಂತ್ರಿ ಕರ್ಮ ಯೋಗಿ ಭಾರತ್ ಉಪಕ್ರಮದ ಸಹ-ಸಂಸ್ಥಾಪಕ ಪಂಕಜ್ ಬನ್ಸಾಲ್, ಕೋಲ್ ಇಂಡಿಯಾ ಲಿಮಿಟೆಡ್ ನಿರ್ದೇಶಕ ವಿನಯ್ ರಂಜನ್, ಡೀನ್ ಡಾ. ಅಮರ್ ಇ. ಟಿಗ್ಗಾ ವಿವಿಧ ವಿಚಾರಗಳ ಕುರಿತು ಮಾತನಾಡಿದರು. ಮೊದಲ ದಿನ 13 ಪ್ರಬಂಧಗಳ ಮಂಡನೆಯಾಯಿತು.

# ಥೀಮ್ ಪಾರ್ಕ್ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸಿ: ಗುತ್ತಿಗೆದಾರರಿಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಕೆಪಿಟಿಸಿಎಲ್ ವತಿಯಿಂದ ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದಲ್ಲಿ ನಿರ್ಮಾಣ ಆಗುತ್ತಿರುವ ಥೀಮ್ ಪಾರ್ಕ್ ಕಾಮಗಾರಿಯನ್ನು ಏಪ್ರಿಲ್ ಒಳಗಾಗಿ ಪೂರ್ಣಗೊಳಿಸಿ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಸರ್ವಜ್ಞನಗರ ಕ್ಷೇತ್ರದಲ್ಲಿ ಕೈಗೊಳ್ಳಲಾಗಿರುವ ವಿವಿಧ ಕಾಮಗಾರಿಗಳನ್ನು ಪರಿಶೀಲನೆ ನಡೆಸಿ ಅವರು ಮಾತನಾಡಿದರು. ಎಚ್‌ಬಿಆರ್ ಲೇಔಟ್‌ನ 5ನೇ ಬ್ಲಾಕ್‌ನ ಕೆಪಿಟಿಸಿಎಲ್ ಸ್ಟೇಷನ್ ಬಳಿ ನಿರ್ಮಾಣಗೊಳ್ಳುತ್ತಿರುವ ಥೀಮ್ ಪಾರ್ಕ್ ಕಾಮಗಾರಿ ಗುಣಮಟ್ಟದ ಜತೆಗೆ ತ್ವರಿತವಾಗಿ ಕೆಲಸ ಮುಗಿಸಬೇಕು. ಸಮಾಜಕ್ಕೆ ಹಸಿರಿನ ಮಹತ್ವ ತಿಳಿಸುವ ಉದ್ದೇಶದಿಂದ ನಿರ್ಮಾಣಗೊಳ್ಳುತ್ತಿರುವ ಈ ಥೀಮ್ ಪಾರ್ಕ್ ಕ್ಷೇತ್ರಕ್ಕೆ ಮಾತ್ರವಲ್ಲ, ರಾಜ್ಯದಲ್ಲೂ ಮಾದರಿಯಾಗಿರಬೇಕು ಎಂದರು. ಥೀಮ್ ಪಾರ್ಕ್‌ನಲ್ಲಿ ತರಬೇತಿ ಕೇಂದ್ರ, ಗ್ರಾಮೀಣ ಆಟಗಳು, ಬಯಲು ರಂಗಮಂದಿರ, ಪಾದಚಾರಿ ಪಥ, ಓಪನ್‌ಜಿಮ್, ಶುದ್ಧ ಕುಡಿಯುವ ನೀರಿನ ಘಟಕ, ಶೌಚಾಲಯ ವ್ಯವಸ್ಥೆ, ಮ್ಯಾಪಿಂಗ್ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ರೂಪಿಸಬೇಕು ಎಂದು ನಿರ್ದೇಶನ ನೀಡಿದರು.

ವೀರಣ್ಣಪಾಳ್ಯ ಮುಖ್ಯರಸ್ತೆ, 4ನೇ ಅಡ್ಡರಸ್ತೆ-ಇಂದಿರಾ ಕ್ಯಾಂಟೀನ್ ರಸ್ತೆ ಮತ್ತು ನಾಗವಾರ ಮುಖ್ಯರಸ್ತೆಯಿಂದ ರೈಲ್ವೆ ಗೇಟ್‌ವರೆಗಿನ ವಿನಾಯಕ ದೇವಸ್ಥಾನದ ರಸ್ತೆಗಳ ಸಮಗ್ರ ಅಭಿವೃದ್ಧಿಗಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅನುದಾನದಡಿಯಲ್ಲಿ ಮಂಜೂರು ಮಾಡಲಾದ ರಸ್ತೆ ಕಾಮಗಾರಿಗಳಿಗೆ ಸಚಿವರು ಶಂಕುಸ್ಥಾಪನೆ ನೆರವೇರಿಸಿದರು. ಎಚ್‌ಆರ್‌ಬಿಆರ್ ಲೇಔಟ್ 1 ನೇ ಬ್ಲಾಕ್ 8ನೇ ಮುಖ್ಯರಸ್ತೆಯ ಸಮೀಪದಲ್ಲಿ ಒಳಚರಂಡಿ ವ್ಯವಸ್ಥೆಯ ಪುನಶ್ಚೇತನ ಕಾಮಗಾರಿಗೆ ಚಾಲನೆ ನೀಡಿದರು. ಬಾಣಸವಾಡಿ ಮುಖ್ಯ ರಸ್ತೆಯ ಸಮೀಪ ನೂತನವಾಗಿ ನಿರ್ಮಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟಿಸಿದರು.



# 194 ಜಾಗಗಳಿಗೆ ಮರುಜೀವ

## ಬಯಸಿದಂತೆ ಬಯಲು ವಿಶ್ರಾಂತಿ ತಾಣ ನಿರ್ಮಾಣ: ಏನಿದು ಯೋಜನೆ?

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಬಳಕೆಯಲ್ಲಿಲ್ಲದ ಜಾಗಗಳಿಗೆ ಮರುಜೀವ ನೀಡಲು ಜಿಬಿಎ ಜತೆ ನಾಗರಿಕರು ಕೈ ಜೋಡಿಸಬೇಕು ಎಂದು ಮುಖ್ಯ ಆಯುಕ್ತ ಮಹೇಶ್ವರ ರಾವ್ ಮನವಿ ಮಾಡಿದ್ದಾರೆ. ಇದೇವೇಳೆ ಬೆಂಗಳೂರಿನಲ್ಲಿ ಬಳಕೆಯಲ್ಲಿಲ್ಲದ 194 ಸ್ಥಳಗಳನ್ನು ಗುರುತಿಸಿ 'ಬಯಸಿದಂತೆ ಬಯಲು ' ಉಪ ಕ್ರಮದಡಿ ವಿಶ್ರಾಂತಿ ತಾಣ ನಿರ್ಮಾಣ ಮಾಡುವುದಾಗಿ ತಿಳಿಸಿದ್ದಾರೆ. ಜಿಬಿಎ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಥಳಗಳ ಪುನರುಜ್ಜೀವನಕ್ಕಾಗಿ ನಾಗರಿಕರಿಗೆ ಮುಕ್ತ ಅವಕಾಶ ಕಲ್ಪಿಸುವ ಉದ್ದೇಶದಿಂದ ನಗರದ ಪುರಭವನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬೆಂಗಳೂರಿನಲ್ಲಿ ಬಳಸಲ್ಪಡದ ಅನೇಕ ಜಾಗಗಳಿವೆ. ಆ ಸ್ಥಳಗಳ ಅಭಿವೃದ್ಧಿ ಸಂಬಂಧ ಸರಕಾರ, ಎನ್‌ಜಿಒ ಹಾಗೂ ಇತರೆ ಸಂಸ್ಥೆಗಳೊಂದಿಗೆ ಯೋಜನೆ ರೂಪಿಸಬೇಕಿದೆ. ಬಳಿಕ ಸ್ಥಳೀಯರ ಸಹಭಾಗಿತ್ವದಲ್ಲಿ ಆ ಪ್ರದೇಶಗಳನ್ನು ಆಕರ್ಷಣೀಯ ಸ್ಥಳಗಳನ್ನಾಗಿ ಪರಿವರ್ತಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ನಗರದಲ್ಲಿ ಸಂಚಾರ ದಟ್ಟಣೆ ತಗ್ಗಿಸುವ ಜತೆಗೆ ಸುರಕ್ಷಾ-75 ಯೋಜನೆಯಡಿ ಜಂಕ್ಷನ್‌ಗಳ ಅಭಿವೃದ್ಧಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಈಗ ಬಯಸಿದಂತೆ ಬಯಲು ಉಪಕ್ರಮದಡಿ ಬಳಕೆಯಲ್ಲಿಲ್ಲದ ಸ್ಥಳಗಳನ್ನು ಪುನರುಜ್ಜೀವನಗೊಳಿಸಲಾಗುತ್ತಿದೆ. ಇದರಿಂದ ಸ್ಥಳೀಯರು ಆ ಸ್ಥಳಗಳಿಗೆ ಭೇಟಿ ನೀಡಿ ವಿಶ್ರಾಂತಿ ಪಡೆಯ ಬಹುದಾಗಿದೆ ಎಂದರು. ಐದು ನಗರ ಪಾಲಿಕೆಗಳಲ್ಲೂ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಿ, ನಾಗರಿಕರು, ಸ್ಟಾರ್ಟ್‌ಅಪ್‌ಗಳು ಹಾಗೂ ಸಂಸ್ಥೆಗಳ ಸಲಹೆಗಳನ್ನು ಪಡೆಯಬೇಕು. ಕಾರ್ಪೊರೇಟ್-ಸಿಎಸ್‌ಆರ್ ಸಹಭಾಗಿತ್ವ ಮತ್ತು ಪ್ರಾಯೋಗಿಕ ಯೋಜನೆಗಳಿಗೆ ಅವಕಾಶ ಕಲ್ಪಿಸಿ, ಬಳಸಲ್ಪಡದ ಸಾರ್ವಜನಿಕ ಸ್ಥಳಗಳನ್ನು ಸುರಕ್ಷಿತ ಹಾಗೂ ನಾಗರಿಕ ಸ್ನೇಹಿ ಸಮುದಾಯ ಸ್ಥಳಗಳನ್ನಾಗಿ ಪರಿವರ್ತಿಸಬೇಕು. ಆ ಮೂಲಕ ವಾಸಯೋಗ್ಯ ನಗರ ನಿರ್ಮಾಣ ಸಾಧ್ಯ ಎಂದು ಹೇಳಿದರು.



### ವಿಶ್ರಾಂತಿ ತಾಣಗಳ ನಿರ್ಮಾಣ

**ಬೆಂಗಳೂರು ಮಹಾನಗರದಲ್ಲಿ ಸಾರ್ವಜನಿಕರು ವಿಶ್ರಾಂತಿ ಪಡೆಯುವ ಸಲುವಾಗಿ ವಿವಿಧೆಡೆ ಬಯಸಿದಂತೆ ಬಯಲು ಉಪಕ್ರಮದಡಿ ವಿಶ್ರಾಂತಿ ತಾಣಗಳನ್ನು ನಿರ್ಮಿಸಲಾಗುವುದು ಎಂದು ಮುಖ್ಯ ಆಯುಕ್ತ ಮಹೇಶ್ವರ ರಾವ್ ಅವರು ತಿಳಿಸಿದ್ದಾರೆ. ಇದಕ್ಕಾಗಿ ನಗರದಲ್ಲಿ ಬಳಕೆಯಲ್ಲಿ ಇಲ್ಲದ 194 ಸ್ಥಳಗಳನ್ನು ಗುರುಸಿತಲಾಗಿದೆ. ಬೆಂಗಳೂರು ಕೇಂದ್ರದಲ್ಲಿ 43, ಉತ್ತರದಲ್ಲಿ 49, ಪೂರ್ವದಲ್ಲಿ 21, ಪಶ್ಚಿಮದಲ್ಲಿ 31 ಮತ್ತು ದಕ್ಷಿಣದಲ್ಲಿ 50 ಜಾಗಗಳನ್ನು ಗುರುತಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.**



### ಪಾಲಿಕೆವಾರು ಗುರುತಿಸಿರುವ ಸ್ಥಳಗಳು

- ಬೆಂಗಳೂರು ಕೇಂದ್ರ - 43
- ಬೆಂಗಳೂರು ಉತ್ತರ - 49
- ಬೆಂಗಳೂರು ಪೂರ್ವ - 21
- ಬೆಂಗಳೂರು ಪಶ್ಚಿಮ - 31
- ಬೆಂಗಳೂರು ದಕ್ಷಿಣ - 50

**194 ಸ್ಥಳಗಳ ಪುನರುಜ್ಜೀವನಕ್ಕೆ ಕ್ರಮ:** ಬಯಸಿದಂತೆ ಬಯಲು ಉಪಕ್ರಮಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಸ್ಥಳೀಯ ನಾಗರಿಕರು, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘಗಳು, ನಗರ ವಿನ್ಯಾಸಕಾರರು, ವಾಸ್ತು ಶಿಲ್ಪಿಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳು 250ಕ್ಕೂ ಅಧಿಕ ಸ್ಥಳಗಳನ್ನು ಗುರುತಿಸಿದ್ದಾರೆ. ಈ ಪೈಕಿ ಅಂತಿಮವಾಗಿ 194 ಸ್ಥಳಗಳನ್ನು ಆಯ್ಕೆ ಮಾಡಿದ್ದು ಒಟ್ಟು 5 ನಗರ ಪಾಲಿಕೆಗಳ ಮೂಲಕ ಹಂತ ಹಂತವಾಗಿ ಯೋಜನೆ ಜಾರಿಗೊಳಿಸಲಾಗುತ್ತಿದೆ.

**25 ಸ್ಥಳಗಳಿಗೆ ಆರ್ಥಿಕ ಅನುಮೋದನೆ:** ರಾಷ್ಟ್ರೀಯ ಸ್ವಚ್ಛ ವಾಯು ಕಾರ್ಯಕ್ರಮದಡಿ 25 ಸ್ಥಳಗಳ ಅಭಿವೃದ್ಧಿಗೆ ತಗಲುವ ವೆಚ್ಚಕ್ಕೆ ಅನುಮೋದನೆ ನೀಡಲಾಗಿದೆ. ನೆರೆಹೊರೆಯ ಸಾರ್ವಜನಿಕ ಸ್ಥಳಗಳ ಸುಧಾರಣೆಗೆ ನಾಗರಿಕರ ಹೆಚ್ಚಿನ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸಲು ಉದ್ದೇಶಿಸಲಾಗಿದೆ.

**ಪಿಪಿಪಿ ಸೆಲ್ ಸ್ಥಾಪನೆ:** ಜಿಬಿಎ ಸಾರ್ವಜನಿಕ-ಖಾಸಗಿ ಸಹಭಾಗಿತ್ವದ ಯೋಜನೆಗಳಿಗೆ ಉತ್ತೇಜನ ನೀಡುತ್ತಿದೆ. ಇಂತಹ ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಪಿಪಿಪಿ ಸೆಲ್ ಸ್ಥಾಪಿಸಲಾಗಿದೆ ಎಂದು ಬಿ-ಸ್ಮೈಲ್‌ನ ತಾಂತ್ರಿಕ ನಿರ್ದೇಶಕ ಬಿ.ಎಸ್.ಪ್ರಹ್ಲಾದ್ ಅವರು ಮಾಹಿತಿ ನೀಡಿದರು.

# ಸೈಬರ್ ಅಪರಾಧ ಪ್ರಕರಣ ನಿಯಂತ್ರಣಕ್ಕೆ ವಿಶೇಷ ಕಾರ್ಯಾಚರಣೆ : ಡಿಜಿಪಿ



• ಉದಯವಾಹಿನಿ, ಬೆಂಗಳೂರು

ದೇಶಾದ್ಯಂತ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿದ್ದು, ನಿಯಂತ್ರಣಕ್ಕಾಗಿ ರಾಜ್ಯದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದ್ದು, ವಿಶೇಷ ದಾಳಿ ನಡೆಸಲಾಗುತ್ತದೆ ಎಂದು ಕರ್ನಾಟಕ ಸೈಬರ್ ಕಮಾಂಡ್ ಡಿಜಿಪಿ ಪ್ರಣವ್ ಮಹಾಂತಿ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಿನನಿತ್ಯ ಸೈಬರ್ ವಂಚಕರ ಜಾಲಕ್ಕೆ ಸಿಲುಕಿ ಅಮಾಯಕರು ಹಣ ಕಳೆದು ಕೊಳ್ಳುತ್ತಿದ್ದಾರೆ. ಜೊತೆಗೆ ಮೊಬೈಲ್‌ಗಳನ್ನು ಹ್ಯಾಕ್ ಮಾಡಿ ಕಿರುಕುಳ ನೀಡುತ್ತಿರುವ ಪ್ರಕರಣಗಳು ಹೆಚ್ಚಾಗಿದ್ದವು ಇದನ್ನು ಗಂಭೀರವಾಗಿ ಪರಿಗಣಿಸಿರುವ ಸೈಬರ್ ಕಮಾಂಡ್ ಕಳೆದ ಮೂರು ದಿನಗಳಿಂದ ರಾಜ್ಯದ ವಿವಿಧ ಭಾಗಗಳಲ್ಲಿನ 29ಕ್ಕೂ ಹೆಚ್ಚು ಜಿಲ್ಲೆಗಳಲ್ಲಿನ ಅನೇಕ ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಲಾಯಿತು ಎಂದು ಅವರು ವಿವರಿಸಿದರು. ಮ್ಯೂಲ್ ನೆಟ್‌ವರ್ಕ್ ಅನ್ನು ಟಾರ್ಗೆಟ್ ಮಾಡಿಕೊಂಡು ವಂಚನೆ ಮಾಡಲಾಗುತ್ತಿದೆ. ಮ್ಯೂಲ್ ಅಕೌಂಟ್‌ಗಳನ್ನು ಕಾಂಟ್ರಾಕ್ಟ್ ರೀತಿಯಲ್ಲಿ ಮಾರಾಟ ಮಾಡಲಾಗುತ್ತಿತ್ತು. ಯಾರಿಗೆ ಬ್ಯಾಂಕ್ ಅಕೌಂಟ್ ಬೇಕು ಅಂತಹ ವ್ಯಕ್ತಿಗಳಿಗೆ ಮ್ಯೂಲ್ ಅಕೌಂಟ್‌ಗಳನ್ನು ನೀಡಲಾಗುತ್ತಿದೆ. ಮೊದಲ ಭಾರಿಗೆ ಮ್ಯೂಲ್ ನೆಟ್‌ವರ್ಕ್‌ಗಳನ್ನು ರನ್ ಮಾಡುತ್ತಿದ್ದವರನ್ನು ಗುರುತಿಸುವ ಕೆಲಸ ಮಾಡಲಾಗುತ್ತಿದೆ ಎಂದರು.

ಈ ಮ್ಯೂಲ್ ಅಕೌಂಟ್‌ಗಳನ್ನು ಖರೀದಿಸಿ ಸೈಬರ್ ಅಫೆಂಡರ್‌ಗಳಿಗೆ ಮಾರಾಟ ಮಾಡುತ್ತಿದ್ದವರ ವಿರುದ್ಧ ಕಾರ್ಯಾಚರಣೆ ನಡೆಸಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಇದುವರೆಗೂ 17 ಎಫ್‌ಐಆರ್ ದಾಖಲಾಗಿದ್ದು, 13 ಆರೋಪಿಗಳನ್ನು ಬಂಧಿಸಲಾಗಿದೆ. ದಾಳಿಯ ವೇಳೆ 25 ಎಟಿಎಂ ಕಾರ್ಡ್‌ಗಳು, 13 ಚೆಕ್ ಪುಸ್ತಕಗಳು, 12 ಮೊಬೈಲ್ ಫೋನ್‌ಗಳು ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಡಿಜಿಪಿ ಅವರು ಹೇಳಿದರು. ಈ ಖಾತೆಗಳನ್ನು ಆನ್‌ಲೈನ್ ವಂಚನೆ, ಅಕ್ರಮ ಬೆಟ್ಟಿಂಗ್, ಡಿಜಿಟಲ್ ಅರೆಸ್ಟ್ ವಂಚನೆಗಳಂತಹ ಅನೇಕ ಅಕ್ರಮ ಹಣಕಾಸು ಚಟುವಟಿಕೆಗಳಿಗೆ ಬಳಸಲಾಗುತ್ತಿತ್ತು ಮುಂದೆಯೂ ಸಹ ಇದೆ ರೀತಿ ದಾಳಿ ನಡೆಯಲಿದೆ ಎಂದು ಅವರು ತಿಳಿಸಿದರು.


# ಮೆಟ್ರೋ ದರ ಏರಿಕೆಗೆ ರಾಜ್ಯ ಸರ್ಕಾರವೇ ಕಾರಣ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಪ್ರಯಾಣದರ ಏರಿಕೆಗೆ ರಾಜ್ಯ ಸರ್ಕಾರವೇ ಒತ್ತಡ ಹೇರಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ವರ್ಷ ಸ್ವಯಂ ಚಾಲಿತವಾಗಿ ಮೆಟ್ರೋ ಪ್ರಯಾಣದರ ಏರಿಕೆಯಾಗುವ ಸೂತ್ರ ರೂಪಿಸುವಂತೆ ದರ ನಿಗದಿ ಸಮಿತಿಯನ್ನು ರಾಜ್ಯ ಸರ್ಕಾರ ಕೋರಿದೆ ಎಂದರು. ದೇಶದ ದೆಹಲಿ, ಮುಂಬೈ, ಹೈದರಾಬಾದ್ ಹಾಗೂ ಚೆನ್ನೈ ನಗರಗಳಿಂದ ಬೆಂಗಳೂರಿನ ನಮ್ಮ ಮೆಟ್ರೋ ಪ್ರಯಾಣದರ ದುಬಾರಿಯಾಗಿದೆ. ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದ್ದು, ತನ್ನ ಮೇಲಿನ ಹೊರೆಯನ್ನು ಜನರ ಮೇಲೆ ಹೊರಿಸುತ್ತಿದೆ ಎಂದು ಅವರು ಟೀಕಿಸಿದರು.

ಸಾರ್ವಜನಿಕರ ಮಾಹಿತಿಗಾಗಿ ದರ ನಿಗದಿ ಸಮಿತಿಯ ವರದಿಯನ್ನು ನೀಡಿರಲಿಲ್ಲ. ಆ ವರದಿಯಲ್ಲಿ ನಗರಾಭಿವೃದ್ಧಿ ಇಲಾಖೆ, ಹಣಕಾಸು ಇಲಾಖೆ ಅಧಿಕಾರಿಗಳೇ ರಾಜ್ಯ ಸರ್ಕಾರ ಆರ್ಥಿಕ ಹೊರೆ ಭರಿಸುವ ಸ್ಥಿತಿಯಲ್ಲಿ ಇಲ್ಲ, ಹೀಗಾಗಿ ಮೆಟ್ರೋ ಪ್ರಯಾಣದ ದರ ಹೆಚ್ಚಳ ಮಾಡುವಂತೆ ಪ್ರಸ್ತಾಪಿಸಿದ್ದಾರೆ. 1126 ಮಂದಿ ಪ್ರಯಾಣದರ ಪರಿಷ್ಕರಣೆಗೆ ಸಂಬಂಧಿಸಿದಂತೆ ಅಭಿಪ್ರಾಯ ವ್ಯಕ್ತಪಡಿಸಿದ್ದು, ಶೇ.51ರಷ್ಟು ಮಂದಿ ಮೆಟ್ರೋ ಪ್ರಯಾಣದರ ವಿರೋಧಿಸಿದ್ದಾರೆ ಎಂದರು. ಪ್ರಯಾಣಿಕರಿಂದಲ್ಲದ ಪಾರ್ಕಿಂಗ್, ಬಾಡಿಗೆ, ಜಾಹೀರಾತು ಮೂಲಕ ಸಂಗ್ರಹಿಸುವ ಆದಾಯ ಕಡಿಮೆ ಆಗಿದ್ದು, ಪ್ರಯಾಣಿಕರಿಂದ ಸಂಗ್ರಹಿಸುವ ಆದಾಯ ಹೆಚ್ಚಳವಾಗಿದೆ. ಶ್ಯಾಡೋ ಕಾಸ್ಟ್ ಸಪೋರ್ಟ್ ಅನ್ನು ರಾಜ್ಯ ಸರ್ಕಾರ ಕಳೆದ ಎರಡು ವರ್ಷದಿಂದ ನಿಲ್ಲಿಸಿದೆ. ಆರ್ಥಿಕ ಪರಿಸ್ಥಿತಿ ಚೆನ್ನಾಗಿಲ್ಲದ ಕಾರಣ ಎಸ್‌ಸಿಎಸ್ ಮುಂದುವರೆಸಲಾಗದು, ವಾರ್ಷಿಕ ಶೇ.5ರಷ್ಟು ಪ್ರಯಾಣ ದರ ಹೆಚ್ಚಳಕ್ಕೆ ಕೋರಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಕಳೆದ ವರ್ಷ ಶೇ.105ರಷ್ಟು ದುಪ್ಪಟ್ಟು ಮೆಟ್ರೋ ಪ್ರಯಾಣದರ ಪರಿಷ್ಕರಣೆ ಮಾಡಲಾಗಿತ್ತು. ಅಧಿಕಾರಿಗಳು ನೀಡಿರುವ ಮಾಹಿತಿ ನೋಡಿದರೆ, ರಾಜ್ಯ ಸರ್ಕಾರ ಆರ್ಥಿವಾಗಿ ದಿವಾಳಿಯಾಗಿದೆ. ತನ್ನ ಲೋಪ ಮುಚ್ಚಿಕೊಳ್ಳಲು ಜನರನ್ನು ದಾರಿತಪ್ಪಿಸುತ್ತಿದೆ ಎಂದು ಅವರು ಆರೋಪಿಸಿದರು.

ಈ ವಿಚಾರದ ಬಗ್ಗೆ ಜೆಡಿಎಸ್ ವತಿಯಿಂದ ಬೆಂಗಳೂರಿನ ನಾಗರಿಕರಿಗೆ ಅರಿವು ಮೂಡಿಸಲು ಅಭಿಯಾನ ಹಮಿಕೊಳ್ಳಲಾಗುವುದು. ಈ ವಿಚಾರದಲ್ಲಿ ಇನ್ನೆರಡು ದಿನಗಳಲ್ಲಿ ನಿರ್ಧಾರ ಮಾಡುತ್ತೇವೆ ಎಂದರು.



# ಸಿಎಂಗೆ ದಾಖಲೆ ಸಮೇತ ಟಾಂಗ್ ಕೊಟ್ಟ ಸಂಸದ

• ಉದಯವಾಹಿನಿ, ಬೆಂಗಳೂರು



ಮೆಟ್ರೋದರ ಏರಿಕೆ ಬಗ್ಗೆ ಕೇಂದ್ರದತ್ತ ಬೊಟ್ಟು ಮಾಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಸದ ತೇಜಸ್ವಿ ಸೂರ್ಯ ದಾಖಲೆ ಸಮೇತ ಟಾಂಗ್ ಕೊಟ್ಟಿದ್ದಾರೆ. ಮೆಟ್ರೋ ದರ ಏರಿಕೆಯಿಂದ ಜನರಿಗೆ ತೊಂದರೆಯಾಗಿದೆ. ದರ ಹೆಚ್ಚಿಸುವುದು ರಾಜ್ಯ ಸರ್ಕಾರವಲ್ಲ, ಬದಲಾಗಿ ಕೇಂದ್ರ ಸರ್ಕಾರ ವಸತಿ ಹಾಗೂ ನಗರ ವ್ಯವಹಾರಗಳ ಸಚಿವಾಲಯದ ಮೂಲಕ ರಚಿಸಿದ ದರ ನಿಗದಿ ಕಮಿಟಿ ಎಂದು ಮುಖ್ಯಮಂತ್ರಿಗಳು ಟ್ವೀಟ್ (ಎಕ್ಸ್) ಮೂಲಕ ಹೇಳಿದ್ದರು. ಈ ಮೂಲಕ ಕೇಂದ್ರದತ್ತ ಬೊಟ್ಟು ಮಾಡಿದ್ದರು. ಇದಕ್ಕೆ ಟ್ವೀಟ್ ಮೂಲಕ ಸಂಸದ ತೇಜಸ್ವಿ ಸೂರ್ಯ ಅವರು ಶುಲ್ಕ ನಿಗದಿ ಸಮಿತಿಯು ಶಾಸನ ಬದ್ಧವಾಗಿರಬಹುದು. ಆದರೆ ಆ ಸಮಿತಿಗೆ ಶಿಫಾರಸು ಮಾಡುವುದು, ದರ ಭರಿಸುವ ಸಾಮರ್ಥ್ಯ, ಕೆಲವು ಆರ್ಥಿಕ ದೃಷ್ಟಿಕೋನಗಳು ರಾಜ್ಯ ಸರ್ಕಾರದಿಂದಲೇ ಶಿಫಾರಸು ಆಗಿರುತ್ತವೆ. ಯಾವುದೇ ಸುಳ್ಳುಗಳು ಈ ಸತ್ಯವನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದು ರಾಜ್ಯ ಸರ್ಕಾರದಿಂದ ಸಲ್ಲಿಕೆ ಆದ ಪತ್ರವನ್ನು ಪೋಸ್ಟ್ ಮಾಡಿ ತಿರುಗೇಟು ನೀಡಿದ್ದಾರೆ. ಮುಖ್ಯಮಂತ್ರಿಗಳೇ ನಿಮ ನೆಪಗಳನ್ನು ಕೇಳಿ ಸಾರ್ವಜನಿಕರು ಬೇಸತ್ತಿದ್ದಾರೆ. ನೀವು ಇದನ್ನು ಔಪಚಾರಿಕವಾಗಿ ತೆಗೆದು ಕೊಳ್ಳಲು ಕಾಯುತ್ತಿದ್ದಾಗ, ಬೆಂಗಳೂರಿಗರು ಸುಮಾರು ಒಂದು ವರ್ಷದಿಂದ ತೀವ್ರ ದರ ಏರಿಕೆ ಬಿಸಿ ಅನುಭವಿಸುತ್ತಲೇ ಇದ್ದಾರೆ.

ಈ ವಿಷಯದ ಬಗ್ಗೆ ನಿಮ ಗಮನ ಸೆಳೆಯಲು ನಾವು ಒಂದು ವರ್ಷ ನಿರಂತರ ಪ್ರಯತ್ನ ಮಾಡಿದ್ದೇನೆ. ನಿರಂತರವಾಗಿ ಸಾರ್ವಜನಿಕ ವಿರೋಧದ ಬಳಿಕ ನೀವು ಅಂತಿಮವಾಗಿ ಎಚ್ಚರಗೊಂಡಂತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಕರ್ನಾಟಕದ ಸ್ವಂತ ನಗರಾಭಿವೃದ್ಧಿ ಹಣಕಾಸು ಇಲಾಖೆಗಳು ಬಿಎಂಆರ್‌ಸಿಎಲ್ ಪತ್ರಗಳನ್ನು ಬರೆದಿವೆ. ಅದರಲ್ಲಿ ರಾಜ್ಯ ಸರ್ಕಾರದ ಆರ್ಥಿಕ ಹೊರೆ ಅನ್ನು ಕಡಿಮೆ ಮಾಡಲು ದರ ಪರಿಷ್ಕರಣೆಯನ್ನು ಕಡ್ಡಾಯ ಎಂದು ತಿಳಿಸಲಾಗಿದೆ. ಸರ್ಕಾರದ ಮೇಲಿನ ಹಣಕಾಸಿನ ಒತ್ತಡವನ್ನು ಕಡಿಮೆ ಮಾಡಲು ಮೆಟ್ರೋದರ ಏರಿಕೆ ಮಾಡುವ ಒತ್ತಾಯ ನಿಮ ಸರ್ಕಾರದಿಂದ ಆರಂಭವಾಯಿತು. ಈ ಮೆಟ್ರೋ ಪ್ರಯಾಣ ದುಬಾರಿ ವಿಚಾರದಲ್ಲಿ ದಯವಿಟ್ಟು ರಾಜ್ಯವು ಅಸಹಾಯಕ ಪ್ರೇಕ್ಷಕ ಎಂಬಂತೆ ನಟಿಸುವುದು ಬೇಡ ಎಂದು ತಿರುಗೇಟು ನೀಡಿದ್ದಾರೆ.



> **ಕನಿಷ್ಠಪಕ್ಷ ಈಗಲಾದರೂ ಕಾಯ್ದೆಯ ಹಿಂದೆ ಅಡಗಿ ಕೊಳ್ಳುವುದನ್ನು ನಿಲ್ಲಿಸಿ. ಫೆಬ್ರವರಿ 09ರಿಂದ ಜಾರಿಗೆ ಬರಲಿರುವ ದರ ಏರಿಕೆ ನಿರ್ಧಾರವನ್ನು ಹಿಂಪಡೆಯಬೇಕು. ಹೊಸ ಎಫ್‌ಎಫ್‌ಸಿಯನ್ನು ಪ್ರಾರಂಭಿಸಿ ಮತ್ತು ಸಮಯಕ್ಕೆ ಅನುಗುಣವಾಗಿ ದರ ತರ್ಕಬದ್ಧಗೊಳಿಬೇಕು. ಬೆಂಗಳೂರಿಗೆ ಹೊಣೆಗಾರಿಕೆ ಮತ್ತು ಕ್ರಮದ ಅಗತ್ಯವಿದೆ, ನಕಲಿ ಆಕ್ರೋಶವಲ್ಲ.**
>
> **- ತೇಜಸ್ವಿ ಸೂರ್ಯ, ಸಂಸದ**

# ತಾನೇ ಹೆಣೆದ ಬಲೆಗೆ ಬಿದ್ದರೇ ರಾಯ್..?

• ಉದಯವಾಹಿನಿ, ಬೆಂಗಳೂರು

ಆತಹತ್ಯೆಗೆ ಶರಣಾದ ರಿಯಲ್ ಎಸ್ಟೇಟ್ ಉದ್ಯಮಿ ಸಿ.ಜೆ.ರಾಯ್ ತನ್ನ ಸಾಮ್ರಾಜ್ಯ ನಿರ್ಮಿಸಿಕೊಂಡ ರೀತಿ ಯನ್ನು ಅವಲೋಕಿಸಿದರೆ ಎಂಥವರೂ ಬೆಚ್ಚಿ ಬೀಳಬೇಕು. ಮೊದಲು ಹೆಚ್‌ಪಿ ಕಂಪನಿಯಲ್ಲಿ ಕೆಲಸ ನಿರ್ವಹಿಸಿದ್ದ ರಾಯ್ ಕೃಷ್ಣನ್ ನಂಬೂದಿರಿ ಅವರ ಕ್ರಿಸ್ಟಲ್ ಗ್ರೂಪ್‌ನಲ್ಲಿ ರೆಸಾರ್ಟ್ ಮ್ಯಾನೇಜರ್ ಆಗಿ ಕೆಲಸಕ್ಕೆ ಸೇರಿದರು.

ಅಲ್ಲಿಂದೀಚೆಗೆ ನಂಬೂದಿರಿ ಅವರನ್ನು ರಾಯ್ ದೇವರಂತೆ ನಡೆಸಿಕೊಳ್ಳುತ್ತಿದ್ದರು. ಅವರ ಕಾಲಿಗೆ ಎರಗುತ್ತಿದ್ದರು. ಸಹಜವಾಗಿಯೇ ರಾಯ್ ನಂಬೂದಿರಿ, ಅವರ ಪತ್ನಿ ಲತಾ ಅವರ ಅತ್ಯಂತ ವಿಶ್ವಾಸಾರ್ಹ ವ್ಯಕ್ತಿಯಾದರು. ಕ್ರಿಸ್ಟಲ್ KRIS -TAL ಹೆಸರು ಕೃಷ್ಣನ್ ನಂಬೂದಿರಿ, ಲತಾ ಹೆಸರನ್ನು ತಿರುವು ಮುರುಗಾಗಿ ಟಾಲ್ ಎಂದು ಬರೆದು ಮೂಡಿದಂತಹುದಾಗಿತ್ತಾ.

ನಂಬೂದಿರಿ ಅವರು ಕೆಲ್ಟ್ರಾನ್‌ನಲ್ಲಿ ಎಲೆಕ್ಟ್ರಾನಿಕ್ಸ್ ಇಂಜಿನಿಯರ್ ಆಗಿ ಅನೇಕ ವರ್ಷ ಕಳೆದಿದ್ದರು. ಬಳಿಕ ತಾವು ಮಧ್ಯಪ್ರಾಚ್ಯದಲ್ಲಿ ಗಳಿಸಿದ ಸಂಪತ್ತನ್ನು ಬೆಂಗಳೂರಿನ ರಿಯಲ್ ಎಸ್ಟೇಟ್ ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿದರು. ಲತಾ ಅವರಿಗೆ ವೃತ್ತಿಪರ ಅನುಭವ ಇರಲಿಲ್ಲ. ನಂಬೂದಿರಿ ಅವರು ಕಂಪನಿಯ ಮುಖದಂತಿದ್ದು, ಅವರ ವಿಶಿಷ್ಟ ವ್ಯಕ್ತಿತ್ವವು ವಿಶೇಷವಾಗಿ ಬೆಂಗಳೂರಿನ ಮಲಯಾಳಿ ಸಮುದಾಯವನ್ನು ಸೆಳೆಯಿತು. ಕಂಪನಿ ಬೆಳೆಯಲಾರಂಭಿಸಿತು. ಲತಾ ಅವರು ಕಂಪನಿಯ ಹಣಕಾಸು ವ್ಯವಹಾರ ನೋಡಿಕೊಳ್ಳುತ್ತಿದ್ದರು.




ಕಂಪನಿಯ ವಾಣಿಜ್ಯ ಯೋಜನೆಗಳ ಮೇಲೆ ರಾಯ್ ಕಣ್ಣು ಹಾಕಿದರು. ಪ್ರಾಮಾಣಿಕರು, ನಿಷ್ಠರೂ ಎಂಬಂತೆ ಬಿಂಬಿಸಿಕೊಂಡಿದ್ದ ರಾಯ್ ಅವರು ಈ ಸ್ಥಾನಮಾನ ಗಳಿಸಿದ್ದು ಸಹಜವಾಗಿತ್ತು. ಅನತಿ ಸಮಯದಲ್ಲೇ ಯಾವುದೇ ಬಂಡವಾಳ ಹೂಡದೆಯೇ ಅವರನ್ನು ಕಂಪನಿಯ ಪಾಲುದಾರರನ್ನಾಗಿ ಮಾಡಲಾಯಿತು. ಮಾರಾಟದ ಮೇಲೆ ನಂಬೂದಿರಿ ಅವರ ತೀವ್ರ ಗಮನದಿಂದಾಗಿ ಕಂಪನಿ ವೇಗವಾಗಿ ಬೆಳೆದು 2003ರ ವೇಳೆಗೆ 100 ಕೋಟಿರೂ. ಕ್ಲಬ್ ಸೇರಿಕೊಂಡಿತು. ಹೀಗಿದ್ದರೂ ನಂಬೂದಿರಿ ಅವರು ಮಾರಾಟದಲ್ಲಿ ಪೂರ್ಣ ಗಮನ ಹರಿಸಿದ್ದರಿಂದ ಮತ್ತು ಲತಾ ಅವರ ಅನುಭವದ ಕೊರತೆಯಿಂದ ರಾಯ್ ಅನಧಿಕೃತ ಮಾರ್ಗಗಳಿಂದ ಅಪಾರ ಸಂಪತ್ತು ಗಳಿಸಲು ಅವಕಾಶವಾಯಿತು. ಇದು ಶೀಘ್ರವೇ ರಾಯ್ ಅವರ ಜೀವನ ಶೈಲಿಯನ್ನು ಬದಲಾಯಿಸಿತು. 2005ರ ಒಂದು ರಾತ್ರಿ ರಾಯ್ ಅವರನ್ನು ಕ್ಲಬ್ ಹೌಸ್‌ವೊಂದರ ಗೆಸ್ಟ್‌ರೂಂನಲ್ಲಿ ಪೊಲೀಸ್ ದಾಳಿಯ ವೇಳೆ ವಶಕ್ಕೆ ಪಡೆಯಲಾಯಿತು.

ಕೆಲವು ಹಣಕಾಸು ಅಕ್ರಮಗಳ ವಿವಾದದ ಹಿನ್ನೆಲೆಯಲ್ಲಿ ಅವರು ಶೀಘ್ರವೇ ದುಬೈಗೆ ತೆರಳಿದರು. ಅನೇಕ ಶ್ರೀಮಂತರಂತೆ ರಾಯ್ ಕೂಡ ಹಣ ನೀಡಿ ಯೂರೋಪ್‌ನಿಂದ ಡಾಕ್ಟರೇಟ್ ಗಳಿಸಿದರು ಡಾ. ರಾಯ್ ಆದರು. ಏತನಧ್ಯೆ ಕ್ರಿಸ್ಟಲ್ ಗ್ರೂಪ್ ಭಾರೀ ಸಾಲದ ಸುಳಿಗೆ ಸಿಲುಕಿತು. ನಂಬೂದಿರಿ, ಲತಾ ಅಕ್ಷರಶಃ ತಲೆಮರೆಸಿಕೊಳ್ಳುವಂತಾಯಿತು. ಬುಕ್ ಮಾಡಿದ ಫ್ಲಾಟ್‌ಗಳ ವಿತರಣೆಯಾಗದೆ ಗ್ರಾಹಕರು ದೂರುಗಳನ್ನು ಸಲ್ಲಿಸಿದ ಮೇರೆಗೆ ಲತಾ ಜೈಲು ಸೇರಬೇಕಾಯಿತು. ಇವತ್ತಿಗೂ ನಂಬೂದಿ ಎಲ್ಲಿದ್ದಾರೆಂದು ಹೆಚ್ಚಿನವರಿಗೆ ಗೊತ್ತಿಲ್ಲ. ಅವರು ಒಂದಲ್ಲಾ ಒಂದು ದಿನ ಬಂದೇ ಬರುತ್ತಾರೆ ಎಂದು ಕೆಲವರು ವಿಶ್ವಾಸ ವ್ಯಕ್ತಪಡಿಸುತ್ತಾರೆ.

# ಸೇನಾ ಕ್ಯಾಂಟೀನ್ ಮಾದರಿಯಲ್ಲಿ ಎಂಎಸ್‌ಐಎಲ್ ಸ್ಟೋರ್

• ಉದಯವಾಹಿನಿ, ಬೆಂಗಳೂರು



ಸರ್ಕಾರಿ ನೌಕರರಿಗೆ ಎಲ್ಲಾ ವಸ್ತುಗಳೂ ಸಬ್ಸಿಡಿ ದರದಲ್ಲಿ ಸಿಗುವಂತೆ ಮಾಡಲು ಸೇನಾ ಕ್ಯಾಂಟೀನ್ ಮಾದರಿಯಲ್ಲಿ ಎಂಎಸ್ ಐಎಲ್ ಸ್ಟೋರ್ ತೆರೆಯುವ ಚಿಂತನೆ ಇದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ತಿಳಿಸಿದರು. ಸರ್ಕಾರಿ ಸ್ವಾಮ್ಯದ ಮೈಸೂರು ಸೇಲ್ಸ್ ಇಂಟರನ್ಯಾಷನಲ್ ಲಿಮಿಟೆಡ್ ಸಂಸ್ಥೆಯು ಸುಗಮ, ಪಾರದರ್ಶಕ ಚಿಟ್ ಫಂಡ್ ವ್ಯವಹಾರದ ಅನುಕೂಲಕ್ಕೆ ಅಭಿವೃದ್ಧಿಪಡಿಸಿರುವ ತಂತ್ರಾಂಶ, ಮೊಬೈಲ್ ಆ್ಯಪ್ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತಂತ್ರಾಂಶ, ಮೊಬೈಲ್ ಆ್ಯಪ್ ಅನ್ನು ಸಿಎಂ ಸಿದ್ದರಾಮಯ್ಯ ಬಿಡುಗಡೆ ಮಾಡಿದರು.

ಎಂಎಸ್‌ಐಎಲ್ ಸ್ಟೋರ್ ತೆರೆಯುವ ಕುರಿತಂತೆ ಸಾಧಕಬಾಧಕಗಳನ್ನು ಅಧ್ಯಯನ ಮಾಡಲಾಗುತ್ತಿದೆ. ಇದರಿಂದ 20 ಲಕ್ಷ ಕುಟುಂಬಗಳಿಗೆ ಅನುಕೂಲ ಆಗಲಿದೆ ಎಂದೂ ಪಾಟೀಲ ಹೇಳಿದರು.

ಸುಗಮ ಮತ್ತು ಪಾರದರ್ಶಕ ವ್ಯವಹಾರಕ್ಕೆಂದೇ ಎಂಎಸ್‌ಐಎಲ್ ಚಿಟ್ಸ್ ತಂತ್ರಾಂಶ ಮತ್ತು ಮೊಬೈಲ್ ಆ್ಯಪ್ ಅಭಿವೃದ್ಧಿಪಡಿಸಲಾಗಿದೆ. ಸಂಸ್ಥೆಯು ಈಗ 27 ಶಾಖೆಗಳನ್ನು ಹೊಂದಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಿಗೂ ಇದನ್ನು ವಿಸ್ತರಿಸಲಾಗುವುದು. ಮುಖ್ಯವಾಗಿ ಗ್ರಾಮೀಣ ಭಾಗ ಮತ್ತು ಮಹಿಳೆಯರ ಉಳಿತಾಯದ ಮೇಲೆ ನಮ್ಮ ಗಮನವಿದೆ. ನಮ್ಮಲ್ಲಿ ಬ್ಯಾಂಕುಗಳಲ್ಲಿ ಕೊಡುವುದಕ್ಕಿಂತ ಹೆಚ್ಚಿನ ಲಾಭ ಇದರ ಮೂಲಕ ಸಿಗಲಿದೆ ಎಂದರು.

ಸುಗಮ ಚಿಟ್ ವ್ಯವಹಾರಕ್ಕಾಗಿ ಸಂಸ್ಥೆಯು ಏಜೆಂಟರನ್ನು ನೇಮಿಸಲಿದ್ದು, ಇದರಿಂದ 10 ಸಾವಿರಕ್ಕೂ ಹೆಚ್ಚು ಜನರಿಗೆ ಉದ್ಯೋಗ ಸಿಗಲಿದೆ. ಸ್ವಸಹಾಯ ಸಂಘಗಳ ಮಹಿಳೆಯರಿಗೆ ಇಲ್ಲಿ ವಿಶೇಷ ಉಳಿತಾಯ ಸ್ಕೀಮುಗಳನ್ನು ತರಲಾಗುವುದು. ಇದರಲ್ಲಿ ಈ ಸಂಘಗಳ ಸಖಿಯರೇ ಏಜೆಂಟರಾಗಿ ನೇಮಕಗೊಳ್ಳಲಿದ್ದಾರೆ. ಇವರಲ್ಲದೆ, ಹೋಟೆಲ್, ಕಿರಾಣಿ ಅಂಗಡಿಗಳನ್ನೂ ಏಜೆಂಟ್ ರೀತಿ ಕಾರ್ಯ ನಿರ್ವಹಿಸಲು ವ್ಯವಸ್ಥೆ ರೂಪಿಸಲಾಗುವುದು. ಸರ್ಕಾರಿ ನೌಕರರ ಹೂಡಿಕೆಗೆ ಆದ್ಯತೆ ನೀಡಲಾಗುವುದು. ಒಟ್ಟಿನಲ್ಲಿ ಮನೆ ಮನೆಗೂ ಎಂಎಸ್‌ಐಎಲ್ ಚಿಟ್ ತಲುಪಲಿದೆ. ಈ ನಿಟ್ಟಿನಲ್ಲಿ ನಮ್ಮ ಪ್ರಯತ್ನ ನಡೆಯಲಿದೆ ಎಂದರು.

# ಮೆಟ್ರೋ ದರ ಹೆಚ್ಚಳ ಜಟಾಪಟಿ

## ರಾಜಕೀಯ ಲಾಭ ಪಡೆಯಲು ಪರಸ್ಪರ ಹವಣಿಕೆ, ಕೇಂದ್ರ, ರಾಜ್ಯ ಸರ್ಕಾರಗಳು ಹಗ್ಗಜಗ್ಗಾಟ

• ಉದಯವಾಹಿನಿ, ಬೆಂಗಳೂರು

**90 ರೂಪಾಯಿ ಖರ್ಚು**

ಜನ ಸಾಮಾನ್ಯರ ತೀವ್ರ ವಿರೋಧದ ಬಳಿಕ ಮೇಟ್ರೋ ದರ ಹೆಚ್ಚಳದಲ್ಲಿ ಕೊಂಚ ಕಡಿಮೆ ಮಾಡಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಗ್ಗಜಗ್ಗಾಟದ ಮೂಲಕ ಮೇಟ್ರೋ ಪ್ರಯಾಣ ದರ ಹೆಚ್ಚಳ ಮಾಡಿ ಜನರ ಗಾಯದ ಮೇಲೆ ಬರೆ ಎಳೆಯಲು ಮುಂದಾಗಿದ್ದವು. ಬೆಂಗಳೂರಿನ ಮೆಟ್ರೋದಲ್ಲಿ ಒಂದು ಟರ್ಮಿನಲ್‌ನಿಂದ ಮತ್ತೊಂದು ಟರ್ಮಿನಲ್‌ಗೆ ಪ್ರಯಾಣಿಸಲು ಕನಿಷ್ಠ 90 ರೂಪಾಯಿ ಖರ್ಚು ಮಾಡಬೇಕಿದೆ. ಹೋಗಿ ಬರಲು ಪಾರ್ಕಿಂಗ್ ಶುಲ್ಕವೂ ಸೇರಿ ಸರಾಸರಿ 250 ರೂಪಾಯಿ ಖರ್ಚಾಗುವ ಸನ್ನಿವೇಶ ಸೃಷ್ಟಿಯಾಗಿತ್ತು. ಅಷ್ಟು ಹಣ ಕೊಡುವ ಬದಲು ಮೂರು ಜನ ಸೇರಿ ಆಟೋದಲ್ಲಿ ಪ್ರಯಾಣಿಸಿದರೆ ಇನ್ನೂ ಕಡಿಮೆ ಹಣ ವೆಚ್ಚವಾಗುವ ಅಂದಾಜುಗಳಿದ್ದವು. ಇತ್ತೀಚೆಗೆ ಹೈಕೋರ್ಟ್ ಆದೇಶದ ಮೇರೆಗೆ ಬೈಕ್ ಟ್ಯಾಕ್ಸಿ ಸೇವೆ ರಾಜಾರೋಷವಾಗಿ ಪುನರ್ ಆರಂಭಗೊಂಡಿತ್ತು. ಅದು ಎಲ್ಲದಕ್ಕಿಂತಲೂ ಅಗ್ಗ ಮತ್ತು ಮನೆಬಾಗಿಲಿಗೆ ಸೇವೆ ದೊರೆಯುತ್ತಿತ್ತು. ಹಾಗಾಗಿ ಜನ ಸರ್ಕಾರಕ್ಕೆ ಹಿಡಿ ಶಾಪ ಹಾಕಿ, ಮೆಟ್ರೋಕ್ಕೆ ವಿರುದ್ಧ ಮುಖ ಮಾಡಿದ್ದರು. ಬಿಎಂಟಿಸಿ ಸೇವೆಯನ್ನೂ ಅಧ್ವಾನ ಮಾಡಿ, ಸರ್ಕಾರ ಜನರಿಗೆ ಬೇರೆ ಆಯ್ಕೆಗಳಿಲ್ಲದಂತೆ ಮಾಡಿತ್ತು. ಅದಕ್ಕಾಗಿ ಮೆಟ್ರೋ ಪ್ರಯಾಣ ಜನಪ್ರಿಯತೆ ಗಳಿಸಿತ್ತು. ಆದರೆ ಅಲ್ಲಿ ವರ್ಷಕ್ಕೆ ಎರಡು ಬಾರಿ ಪ್ರಯಾಣ ದರ ಹೆಚ್ಚಳ ಮಾಡಿ ಜನರ ಸಹನೆ ಕೆಡಿಸಲಾಗುತ್ತಿದೆ. ಈಗಾಗಲೇ ಜನ ಮೆಟ್ರೋ ಪ್ರಯಾಣದಿಂದ ಹಿಮ್ಮುಖವಾಗಿದ್ದರು. ಫೆಬ್ರವರಿ 9ರಿಂದ ಶೇ.5ರಷ್ಟು ದರ ಹೆಚ್ಚಳವಾದ ಬಳಿಕ ಮತ್ತಷ್ಟು ಪ್ರಯಾಣಿಕರ ಸಂಖ್ಯೆ ತಗ್ಗುವ ಸಾಧ್ಯತೆ ಇತ್ತು. ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಮೆಟ್ರೋ ದರ ಹೆಚ್ಚಳ ಹೊಣೆಗಾರಿಕೆಯಿಂದ ನುಣುಚಿಕೊಳ್ಳುತ್ತಿವೆ. ಬಿಜೆಪಿಯ ಸಂಸದರು, ಕೇಂದ್ರ ಸರ್ಕಾರ ತನ್ನ ಪಾಲಿನ ಅನುದಾನವನ್ನು ಬಿಎಂಆರ್‌ಸಿಎಲ್‌ಗೆ ಬಿಡುಗಡೆ ಮಾಡುತ್ತಿದೆ. ಆದರೆ ರಾಜ್ಯ ಸರ್ಕಾರ ದಿವಾಳಿಯಾಗಿದ್ದು, ತನ್ನ ಪಾಲಿನ ಹಣವನ್ನು ಕಾಲಕಾಲಕ್ಕೆ ನೀಡುತ್ತಿಲ್ಲ. ಅದಕ್ಕಾಗಿ ನಿರ್ವಹಣಾ ವೆಚ್ಚವನ್ನು ಸರಿದೂಗಿಸಲು ಬಿಎಂಆರ್‌ಸಿಎಲ್ ಸಂಸ್ಥೆ ದರ ಹೆಚ್ಚಳ ಮಾಡುತ್ತಿದೆ ಎಂದು ವಾದಿಸುತ್ತಿದ್ದಾರೆ.





> **ಮೆಟ್ರೋ ದರ ಬಗ್ಗೆ ತೀರ್ಮಾನ ಮಾಡಲು ಪ್ರತ್ಯೇಕ ಸಮಿತಿ ಇದೆ. ಕೇಂದ್ರ ಸರ್ಕಾರದ ಕಾರ್ಯದರ್ಶಿ ಇದರ ಮುಖ್ಯಸ್ಥರು. ಮೆಟ್ರೋ ದರ ಏರಿಕೆ ವಿಚಾರವಾಗಿ ನಮ್ಮ ಅಭಿಪ್ರಾಯವನ್ನು ಕೇಳಿಲ್ಲ ಎಂದಿದ್ದಾರೆ. ನಾನು ಬೆಂಗಳೂರಿಗೆ ಮರಳಿದ ಬಳಿಕ ಈ ಬಗ್ಗೆ ಚರ್ಚೆ ಮಾಡುತ್ತೇನೆ. ಜನರಿಗೆ ತೊಂದರೆ ನೀಡಲು ನಮಗೆ ಇಷ್ಟವಿಲ್ಲ. ಆರ್ಥಿಕ ಸ್ಥಿತಿಗತಿ ಪರಿಶೀಲನೆ ಮಾಡುತ್ತೇನೆ ಎಂದು ಹೇಳುವ ಮೂಲಕ ಈಗ ಹೆಚ್ಚಳವಾಗಿರುವುದರಲ್ಲಿ ಕೊಂಚ ಪ್ರಮಾಣದಲ್ಲಿ ಕಡಿಮೆ ಮಾಡುವ ಸುಳಿವು ನೀಡಿದ್ದಾರೆ. ಬಿಜೆಪಿ ನಾಯಕರು ಇದರ ರಾಜಕೀಯ ಲಾಭ ಪಡೆಯುವ ಮುನ್ನವೇ ತಾವೇ ಸಕ್ರಿಯವಾಗಬೇಕು ಎಂಬ ತಂತ್ರಗಾರಿಕೆಯನ್ನು ಕಾಂಗ್ರೆಸ್ ಅನುಸರಿಸುತ್ತಿದೆ.**
>
> **-ಡಿ.ಕೆ.ಶಿವಕುಮಾರ್, ಡಿಸಿಎಂ**

### ಯಾವುದೇ ಮಾಹಿತಿಯನ್ನೂ ನೀಡಿಲ್ಲ

**ಬಿಎಂಆರ್‌ಸಿಎಲ್ ಮೆಟ್ರೋ ಪ್ರಯಾಣ ದರ ಹೆಚ್ಚಳ ಮಾಡಿರುವುದು ತಮ್ಮ ಗಮನಕ್ಕೆ ಬಂದಿಲ್ಲ. ನನಗೆ ಅಧಿಕೃತವಾಗಿ ಯಾವುದೇ ಮಾಹಿತಿಯನ್ನೂ ನೀಡಿಲ್ಲ ಎಂದು ಡಿ.ಕೆ.ಶಿವಕುಮಾರ್ ಹೇಳುತ್ತಿದ್ದಾರೆ. ಈಗಾಗಲೇ ಬೆಂಗಳೂರಿನಲ್ಲಿ ನೀರಿನ ಕರ, ಆಸ್ತಿ ತೆರಿಗೆ, ಬಸ್ ಪ್ರಯಾಣ ದರ ಹೀಗೆ ನಾನಾ ಹೆಚ್ಚಳಗಳಿಂದ ಜನ ಬೇಸತ್ತು ಹೋಗಿದ್ದಾರೆ. ಮುಂದಿನ ದಿನಗಳಲ್ಲಿ ನಡೆಯುವ ಗ್ರೇಟರ್ ಬೆಂಗಳೂರು ಹಾಗೂ ಇತರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಜನರ ಉತ್ತರ ಬೇರೆಯಾಗಿರಬಹುದು ಎಂಬ ಆತಂಕ ಸರ್ಕಾರವನ್ನು ಕಾಡುತ್ತಿದೆ. ಅದಕ್ಕಾಗಿ ಮೆಟ್ರೋ ದರ ಹೆಚ್ಚಳದಲ್ಲಿ ಸ್ವಲ್ಪ ಪ್ರಮಾಣದಲ್ಲಿ ಕಡಿಮೆ ಮಾಡಿ, ರಾಜ್ಯ ಸರ್ಕಾರ ಜನಪರ ಆಗಿದೆ ಎಂದು ಬಿಂಬಿಸಿಕೊಳ್ಳುವ ಯತ್ನಗಳು ನಡೆದಿವೆ.**

# ವಿಬಿ- ಜಿ ರಾಮ್ ಜಿ ಯೋಜನೆಯಿಂದ ಅಕ್ರಮಕ್ಕೆ ಕಡಿವಾಣ : ನಿರಂಜನ್ ಕುಮಾರ್

• ಉದಯವಾಹಿನಿ, ಗುಂಡ್ಲುಪೇಟೆ

ಮನರೇಗಾ ಬದಲಿಯಾಗಿ ಕೇಂದ್ರ ಸರ್ಕಾರ ಜಾರಿ ಮಾಡಲೊರಟಿರುವ ವಿಬಿ-ಜಿ ರಾಮ್ ಜಿ ಯೋಜನೆಯು ನೂತನ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಾಗಿದೆ ಇದರಿಂದ ಮನರೇಗಾದಲ್ಲಿ ನಡೆಯುತ್ತಿದ್ದ ಅಕ್ರಮಗಳಿಗೆ ಕಡಿವಾಣ ಹಾಕುವಲ್ಲಿ ಬಹುಮುಖ್ಯ ಪಾತ್ರವಹಿಸುತ್ತದೆ ಎಂದು ಮಾಜಿ ಶಾಸಕ ಬಿಜೆಪಿ ಚಾಮರಾಜನಗರ ಜಿಲ್ಲಾಧ್ಯಕ್ಷ ಸಿ.ಎಸ್. ನಿರಂಜನ್ ಕುಮಾರ್ ತಿಳಿಸಿದರು.

ಪಟ್ಟಣದ ಸಿಎಂಎಸ್ ಕಲ್ಯಾಣ ಮಂಟಪದಲ್ಲಿ ಗುಂಡ್ಲುಪೇಟೆ ಬಿಜೆಪಿ ವತಿಯಿಂದ ಆಯೋಜಿಸಿದ್ದ ವಿಕಸಿತ ಭಾರತ ಜಿ ರಾಮ್ ಜಿ ತಾಲ್ಲೂಕು ಸಮಾವೇಶದಲ್ಲಿ ಭಾಗಿಯಾಗಿ ಅವರು ಮಾತನಾಡಿದರು. ಕೇಂದ್ರ ಸರ್ಕಾರವು ದೂರದೃಷ್ಟಿಯನ್ನಿರಿಸಿ ಮನರೇಗಾ ಯೋಜನೆಯ ಹೆಸರನ್ನ ಬದಲಾಯಿಸಲು

☛ ಉದಯವಾಹಿನಿ ಚಿತ್ರ


ಮುಂದಾದ ಕಾರಣ ಕಾಂಗ್ರೆಸ್ಸಿನಿಂದ ಸುಖಾಸುಮ್ಮನೆ ಗೊಂದಲ ಸೃಷ್ಟಿಸುವ ಕೆಲಸ ನಿಯಮಿತವಾಗಿ ನಡೆಯುತ್ತಿದೆ, ಸರ್ಕಾರನಿಲ್ಲದೆ ಕೇಂದ್ರ ಸರ್ಕಾರದ ಕಡೆ ಬೊಟ್ಟು ಮಾಡಿ ತೋರಿಸಿ ಜನರನ್ನ ದಿಕ್ಕು ತಪ್ಪಿಸುವ ಕಾಯಕದಲ್ಲಿ ತೊಡಗಿದ್ದಾರೆ ಎಂದು ವ್ಯಂಗ್ಯವಾಡಿದರು. ಒಮ್ಮೆಲೇ ಮನರೇಗಾ ಬದಲಾವಣೆಯಾದಲ್ಲಿ ಕೆಲಸಕ್ಕೆ ಕತ್ತರಿ ಹಾಕಲಾಗುತ್ತದೆ, ಪ್ರಸ್ತುತ ನಿಗದಿಗೊಂಡಿರುವ ಅವಧಿ ಕಡಿಮೆಯಾಗಲಿದೆ ಎಂಬ ಸುಳ್ಳು ಸುದ್ದಿ ಪಸರಿಸುವುದರಲ್ಲಿ ನಿರತರಾಗಿದ್ದಾರೆ ಎಂದು ಕಿಡಿಕಾರಿದರು. ಸರ್ಕಾರ ವಿಶೇಷ ಅಧಿವೇಶನದಲ್ಲೂ ಕೇಂದ್ರ ಸರ್ಕಾರದ ಯೋಜನೆ ವಿರೋಧ ವ್ಯಕ್ತಪಡಿಸಿ ಜನರ ದಿಕ್ಕುತಪ್ಪಿಸುತ್ತಿದ್ದಾರೆ ಈ ಹಿನ್ನೆಲೆಯಲ್ಲಿ ಸಮಾವೇಶ ನಡೆಸಿ ಸಾಧಕ ಬಾಧಕಗಳ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದರು. ಮನರೇಗಾ ಯೋಜನೆಯಲ್ಲಿ ಕೇವಲ 100 ದಿನಗಳ ಕಾಲ ಕೆಲಸ ನೀಡಲಾಗುತ್ತಿತ್ತು ಆದರೆ ಬದಲಾದ ಯೋಜನೆಯಲ್ಲಿ 125 ದಿನಗಳ ಕಾಲ ವಿಸ್ತರಣೆ ಮಾಡಿದ್ದು ಫಲಾನುಭವಿಗಳಿಗೆ ಆರ್ಥಿಕ ಭದ್ರತೆಯನ್ನ ಒದಗಿಸುತ್ತದೆ ಈ ಯೋಜನೆಯು ಗ್ರಾಮೀಣಾಭಿವೃದ್ಧಿ ಮತ್ತು ಉದ್ಯೋಗಸೃಷ್ಟಿಯ ಮೂಲಕ ಆತ್ಮನಿರ್ಭರ ಭಾರತದ ಗುರಿಯನ್ನು ಹೊಂದಿದೆ, ಪಾರದರ್ಶಕ ಕಾಪಾಡುವ ನಿಟ್ಟಿನಲ್ಲಿ ಬಯೋಮೆಟ್ರಿಕ್ ಕಡ್ಡಾಯಗೊಳಿಸಿದೆ ಇದರಿಂದ ಅಕ್ರಮ ತಡೆಗೆ ಸಹಕಾರಿಯಾಗಲಿದೆ ಎಂದು ಮಾಜಿ ಎಂಎಲ್ಸಿ ಪ್ರೊ.ಮಲ್ಲಿಕಾರ್ಜುನಪ್ಪ ಮಾಹಿತಿ ನೀಡಿದರು. ಸಭೆಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಹದೇವಪ್ರಸಾದ್, ಎಸ್ಸಿ ಮೋರ್ಚಾ ಚಾ.ನಗರ ಜಿಲ್ಲಾಧ್ಯಕ್ಷ ಡಾ.ನವೀನ್ ಮೌರ್ಯ, ಎನ್. ಮಲ್ಲೇಶ್, ಎಲ್.ಸುರೇಶ್, ಸುನಿಲ್ ಮುದ್ದು, ನಮೋ ಮಂಜು, ನಂಜಪ್ಪ, ಶಿವಪ್ರಸಾದ್, ಅಗತಗೌಡನಹಳ್ಳಿ ಬಸವರಾಜು, ಮಾಡ್ರಹಳ್ಳಿ ಮಲ್ಲೇಶ್, ನಾಗೇಂದ್ರ, ಮಹೇಶ್ ಕಲ್ಲಹಳ್ಳಿ, ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು.

**ಅಕ್ರಮ ತಡೆಗೆ ಸಹಕಾರಿ**

# ರಸ್ತೆ ಪಕ್ಕದಲ್ಲಿ ಕಸದ ಗುಡ್ಡೆ; ಆಕ್ರೋಶ

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಕಿರಂಗೂರು- ಬಾಬುರಾಯನಕೊಪ್ಪಲು ಸಂಪರ್ಕ ರಸ್ತೆಯ ಪಕ್ಕದಲ್ಲಿ ರಾಶಿಗಟ್ಟಲೆ ಕಸದ ಗುಡ್ಡೆ ಬಿದ್ದಿದ್ದು ಸ್ಥಳೀಯ ಗ್ರಾಮ ಪಂಚಾಯಿತಿ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹೆಚ್ಚು ಜನ ದಟ್ಟಣೆ ಇರುವ ರಸ್ತೆಗೆ ಹೊಂದಿಕೊಂಡಂತೆ ಅಪಾರ ಪ್ರಮಾಣದ ತ್ಯಾಜ್ಯವನ್ನು ತಂದು ಸುರಿಯಲಾಗಿದೆ. ಮನೆಗಳು ಮಾತ್ರವಲ್ಲದೆ ಅಂಗಡಿ ಮತ್ತು ಹೋಟೆಲ್‌ಗಳ ತ್ಯಾಜ್ಯವನ್ನೂ ಇಲ್ಲಿ ಹಾಕಲಾಗುತ್ತಿದೆ. ಕಸ ಸಂಗ್ರಹಕ್ಕೆ ತೊಟ್ಟಿ ಇಟ್ಟಿಲ್ಲದ ಕಾರಣ ತ್ಯಾಜ್ಯವನ್ನು ನಾಯಿ, ಹಂದಿ, ಕೋಳಿಗಳು ಕೆದಕಿ ಮತ್ತಷ್ಟು ಚೆಲ್ಲಾಡುವಂತೆ ಮಾಡುತ್ತಿವೆ. ಕಳೆದ ಒಂದು ತಿಂಗಳಿನಿಂದ ಕಸದ ಗುಡ್ಡೆ ಹಾಗೇ ಬಿದ್ದಿದ್ದು ಈ ಮಾರ್ಗದಲ್ಲಿ ಓಡಾಡಿದರೆ ಗಬ್ಬು ವಾಸನೆ ಮೂಗಿಗೆ ಬಡಿಯುತ್ತಿದೆ. ರಸ್ತೆ ಪಕ್ಕದ ಮನೆಗಳಿಗೆ ಕಸ ತೂರಿಕೊಂಡು ಬರುತ್ತಿದೆ ಎಂದು ಸ್ಥಳೀಯ ಮುಖಂಡ ಫಿಲಿಫ್ ಸಮಸ್ಯೆ ತೋಡಿಕೊಂಡಿದ್ದಾರೆ.

ಕಿರಂಗೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭಾರತಿ ಚಿತ್ರಮಂದಿರದ ಎದುರು, ಬೆಂಗಳೂರು- ಮೈಸೂರು ಹೆದ್ದಾರಿ ಪಕ್ಕದಲ್ಲಿ ಕೂಡ ಪ್ಲಾಸ್ಟಿಕ್ ಇತರ ಕಸದ ರಾಶಿ ಬಿದ್ದಿದೆ. ತ್ಯಾಜ್ಯವನ್ನು ಸಕಾಲಕ್ಕೆ ವಿಲೇವಾರಿ ಮಾಡದೆ ಕಸದ ಗುಡ್ಡೆಗೆ ಬೆಂಕಿ ಹಚ್ಚಿ ಸುಡಲಾಗುತ್ತಿದೆ. ಇದರಿಂದ ಆಸುಪಾಸಿನ ಮನೆಗಳಿಗೆ ಕೆಟ್ಟ ಹೊಗೆ ವ್ಯಾಪಿಸುತ್ತಿದ್ದು ಜನರು ಉಸಿರಾಟದ ಸಮಸ್ಯೆ ಅನುಭವಿಸುವ ಸ್ಥಿತಿ ಬಂದಿದೆ. ಕಸ ವಿಲೇವಾರಿಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಪ್ರಜ್ಞಾವಂತರ ವೇದಿಕೆ ಸಂಚಾಲಕ ಹಾಗೂ ವಕೀಲ ಸಿ.ಎಸ್. ವೆಂಕಟೇಶ್ ಒತ್ತಾಯಿಸಿದ್ದಾರೆ. ಕಿರಂಗೂರು ಗ್ರಾ.ಪಂ.ನ ತ್ಯಾಜ್ಯ ವಿಲೇವಾರಿ ವಾಹನ ಹಲವು ದಿನಗಳಿಂದ ಕೆಟ್ಟು ನಿಂತಿದೆ. ಇದರಿಂದ ತ್ಯಾಜ್ಯ ವಿಲೇವಾರಿ ಮಾಡಲು ಸಮಸ್ಯೆಯಾಗಿದೆ. ಒಂದೆರಡು ದಿನಗಳಲ್ಲಿ ವಾಹನವನ್ನು ರಿಪೇರಿ ಮಾಡಿಸಿ ಕಸದ ಗುಡ್ಡೆಗಳನ್ನು ವಿಲೇವಾರಿ ಮಾಡಲಾಗುವುದು ಎಂದು ಕಿರಂಗೂರು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಗಂಗಾಧರ್ ತಿಳಿಸಿದ್ದಾರೆ.

☛ ಉದಯವಾಹಿನಿ ಚಿತ್ರ


## ಕೆರೆಗಳಿಗೆ ನೀರು ತುಂಬಿಸುವಂತೆ ಆಗ್ರಹಿಸಿ ಬಿಜೆಪಿಯಿಂದ ತಮಟೆ ಚಳುವಳಿ

# ಸರ್ಕಾರದ ವಿರುದ್ಧ ದಿಕ್ಕಾರದ ಘೋಷಣೆ

☛ ಉದಯವಾಹಿನಿ ಚಿತ್ರ


• ಉದಯವಾಹಿನಿ, ಗುಂಡ್ಲುಪೇಟೆ

ಕೆರೆಗಳಿಗೆ ನೀರು ತುಂಬಿಸುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ ಹಾಗೂ ಶಾಸಕ ಎಚ್.ಎಂ. ಗಣೇಶ್ ಪ್ರಸಾದ್ ಉಡಾಫೆ ಮನೋಭಾವ ಹೊಂದಿದ್ದಾರೆ ಎಂದು ಮಂಡಲದ ವತಿಯಿಂದ ತಹಶೀಲ್ದಾರ್ ಕಚೇರಿ ಮುಂಭಾಗ ತಮಟೆ ಚಳುವಳಿ ನಡೆಸುವ ಮೂಲಕ ವಿನೂತನವಾಗಿ ಪ್ರತಿಭಟನೆ ನಡೆಸಿದರು. ಪಟ್ಟಣದ ಸಿಎಂಎಸ್ ಕಲಾಮಂದಿರದಿಂದ ಹೊರಟ ಬಿಜೆಪಿ ಕಾರ್ಯಕರ್ತರು ಮಡಹಳ್ಳಿ ವೃತ್ತದ ಮೂಲಕ ಸಾಗಿ ತಮಟೆ ಚಳುವಳಿ ಆರಂಭಿಸಿ ಎಂಡಿಸಿಸಿ ಬ್ಯಾಂಕ್

ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಕೆಲಕಾಲ ರಸ್ತೆ ತಡೆ ನಡೆಸಿ ಸರ್ಕಾರದ ವಿರುದ್ಧ ದಿಕ್ಕಾರದ ಘೋಷಣೆಗಳನ್ನ ಕೂಗಿದರು. ಮಾಜಿ ಶಾಸಕ ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿ ಕೆರೆಗಳಿಗೆ ನೀರು ತುಂಬಿಸುವಂತೆ ಒತ್ತಾಯಿಸಿ ಚಲವಾದಿ ನಾರಾಯಣ ಸ್ವಾಮಿ, ಆರ್ ಅಶೋಕ್, ಸಂಸದ ಯದುವೀರ್ ಒಡೆಯರ್ ಹಲವು ನಾಯಕರೊಟ್ಟಿಗೆ ಹತ್ತು ಕಿಮೀ ಪಾದಯಾತ್ರೆ ನಡೆಸಲಾಗಿತ್ತು , ಇದಕ್ಕೂ ಮುಂಚೆಯೇ ರೈತರು ತಿಂಗಳುಗಟ್ಟಲೆ ಅಹೋರಾತ್ರಿ ಧರಣಿ ನಡೆಸಿದ್ದರೂ ಆದರೆ ಶಾಸಕರ ಇಚ್ಛಾಶಕ್ತಿ ಕೊರತೆಯಿಂದ ಕ್ಷೇತ್ರದ ರೈತಾಪಿ ವರ್ಗ ಸಂಕಷ್ಟಕ್ಕೆ ಸಿಲುಕುವಂತಾಗಿದೆ ಎಂದು ಕಿಡಿಕಾರಿದರು. ವಿಧಾನ ಪರಿಷತ್ ಮಾಜಿ ಸದಸ್ಯ ಡಾ.ಮಲ್ಲಿಕಾರ್ಜುನಪ್ಪ ಮಾತನಾಡಿ, ಯಂತ್ರಗಳ ದೋಷದ ಕಾರಣ ನೀಡಿ ಕೆರೆಗಳಿಗೆ ನೀರು ತುಂಬಿಸಲು ವಿಫಲ. ಕಳೆದ ಆರು ತಿಂಗಳಿಂದಲೂ ಮೋಟರ್ ದುರಸ್ತಿ ನೆಪ ಹೇಳುತ್ತಿರುವುದು ಖಂಡನೀಯ. ಶಾಸಕರು, ಸಂಸದರು, ಉಸ್ತುವಾರಿ ಸಚಿವರು, ಅಧಿಕಾರಿಗಳ ನಿರ್ಲಕ್ಷ್ಯ ವಹಿಸಿರುವುದರಿಂದ ಚಾಮರಾಜನಗರ ಮತ್ತು ಗುಂಡ್ಲುಪೇಟೆ ಸಮರ್ಪಕವಾಗಿ ನೀರು ತುಂಬಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ಈ ವೇಳೆ ಪ್ರತಿಭಟನಾಕಾರರು ತಹಶೀಲ್ದಾರ್ ತನ್ಮಯ್‌ರಿಗೆ ಮನವಿ ಸಲ್ಲಿಸಿ, ಕೆರೆಗಳಿಗೆ ಶೀಘ್ರ ನೀರು ತುಂಬಿಸುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಂಡಲ ಅಧ್ಯಕ್ಷ ಮಹದೇವಪ್ರಸಾದ್, ಪ್ರೊ.ಮಲ್ಲಿಕಾರ್ಜುನಪ್ಪ, ಜಿಲ್ಲಾ ಬಿಜೆಪಿ ಉಪಾಧ್ಯಕ್ಷ ಎನ್. ಮಲ್ಲೇಶ್, ಅರಕಲವಾಡಿ ನಾಗೇಂದ್ರ, ಎಲ್.ಸುರೇಶ್, ಲೋಕೇಶ್, ಪುರಸಭೆ ಮಾಜಿ ಸದಸ್ಯ ನಾಗೇಶ್, ಮಹದೇವ ಮಹದೇವಶೆಟ್ಟಿ, ಅಗತಗೌಡನಹಳ್ಳಿ ಬಸವರಾಜು, ಶ್ಯಾನಡ್ರಹಳ್ಳಿ ಮಲ್ಲಿಕಾರ್ಜುನ್, ಬಿಜೆಪಿ ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಡಾ.ನವೀನ್ ಮೌರ್ಯ, ತಾಪಂ ಮಾಜಿ ಸದಸ್ಯ ಕಬ್ಬಹಳ್ಳಿ ರೇವಣ್ಣ, ಮಾಡ್ರಹಳ್ಳಿ ನಾಗೇಂದ್ರ, ಹಂಗಳ ಬಸವೇಶ್, ಪ್ರಣಯ್, ಗರಗನಹಳ್ಳಿ ಮಹೇಂದ್ರ, ನಮೋ ಮಂಜು, ಅಂಕಹಳ್ಳಿ ಮಹೇಂದ್ರ, ಬೊಮ್ಮಲಾಪುರ ಗೋವಿಂದನಾಯಕ, ನಂದೀಶ್, ಮಾಡ್ರಹಳ್ಳಿ ಮಲ್ಲೇಶ್ ಸೇರಿದಂತೆ ಹಲವು ಮಂದಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಹಾಜರಿದ್ದರು.

### ಕಲ್ಲುಕಟ್ಟೆ ಕೆರೆಗೆ ನೀರು ತುಂಬಿಸುವಂತೆ ಸವಾಲು

**ನಾನು ಬಿಸಿನೆಸ್ ಮ್ಯಾನ್ ರಾಜಕಾರಣ ನನಗೆ ಅವಶ್ಯಕತೆ ಇಲ್ಲ ಎಂದು ಹೇಳುವ ಶಾಸಕ ಗಣೇಶಪ್ರಸಾದ್ ತಾಲ್ಲೂಕಿಗೆ ಅನಿವಾರ್ಯವಲ್ಲ. ನಾನು ಸೇರಿದಂತೆ ಕೆ.ಎಸ್.ನಾಗರತ್ನಮ್ಮ, ಶಿವರುದ್ರಪ್ಪ, ಮಹದೇವಪ್ರಸಾದ್ ಹಲವು ಮಂದಿ ತಾಲ್ಲೂಕು ಆಳಿದ್ದಾರೆ. ರೈತರ ಬಗ್ಗೆ ಕಾಳಜಿ ಇಲ್ಲದ ನಿಮ್ಮ ಅವಧಿಯಲ್ಲಿ ನೀರು ಬಿಡುವಲ್ಲಿ ವಿಫಲರಾಗಿದ್ದೀರಾ. ಆದ್ದರಿಂದ ಕಲ್ಲುಕಟ್ಟೆ ಕೆರೆಗೆ ಯಾವ ದಿನ ನೀರು ತುಂಬಿಸುತ್ತೀರಾ ಎಂದು ನೀವೇ ಹೇಳಿಕೆ ನೀಡಿ ಎಂದು ಸವಾಲ್ ಹಾಕಿದರು.**

### ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ

**ಎಸ್ಸಿಪಿ-ಟಿಎಸ್ಪಿ ಅನುದಾನ ದುರ್ಬಳಕೆ, ಬೇರೆ ರಾಜ್ಯದ ಚುನಾವಣೆಗೆ ಕರ್ನಾಟಕದಿಂದ ಹಣ ರವಾನೆ, ಗೃಹ ಇಲಾಖೆ ವೈಫಲ್ಯದಿಂದ ಕೂಡಿದೆ. ರಾಜ್ಯದಲ್ಲಿ ಡ್ರಗ್ ಮಾಫಿತಾ ಹೆಚ್ಚಿದ್ದು, ತಾಲ್ಲೂಕಿನಲ್ಲಿ ಡ್ರಗ್ ಮತ್ತು ಗಾಂಜಾ ಎಗ್ಗಿಲ್ಲದೆ ನಡೆಯುತ್ತಿದೆ. ಇದರ ಬಗ್ಗೆ ಪೊಲೀಸರು ನಿರ್ಲಕ್ಷ್ಯ ವಹಿಸಿದ್ದಾರೆ. ಪೊಲೀಸ್ ಠಾಣೆಯಲ್ಲಿ ಸಾರ್ವಜನಿಕರಿಗೆ ನ್ಯಾಯ ಸಿಗುತ್ತಿಲ್ಲ. ಗುಂಡ್ಲುಪೇಟೆಯಲ್ಲಿ ಪೊಲೀಸರು ಅಸಹಾಯಕರಾಗಿದ್ದು, ಹನುಮ ಜಯಂತಿ ವೇಳೆ ರಸ್ತೆ ತಡೆ ನಡೆಸಿದವರ ಮೇಲೆ ಕೇಸ್ ಹಾಕಿ ಶಾಸಕರ ಕೈಗೊಂಬೆಯಾಗಿ ಕೆಲಸ ಮಾಡುತ್ತಿದ್ದೀರಾ. ನೀವು ಏನು ಮಾಡುತ್ತಿದ್ದರೂ ನಡೆಯುತ್ತದೆ ಅಂದು ಕೊಂಡಿದ್ದೀರಾ. ಮುಂದೆ ಎಸ್ಪಿ, ಐಜಿ ಕಚೇರಿಗೆ ಮುತ್ತಿಗೆ ಹಾಕಬೇಕಾಗುತ್ತದೆ. ಪಡಿತರ ಅಕ್ಕಿ ಕಳ್ಳ ಸಾಗಣೆ, ಟಿಪ್ಪರ್ ಹಾವಳಿ, ಕೇರಳಕ್ಕೆ ಅಕ್ರಮವಾಗಿ ಕಲ್ಲು, ಎಂ.ಸ್ಯಾಂಡ್ ಸಾಗಣೆ ಅತೀ ವೇಗ ಚಾಲನೆ ಇದರ ಬಗ್ಗೆ ಪೊಲೀಸರು ಕಣ್ಮುಚ್ಚಿ ಕುಳಿತಿದ್ದಾರೆ ಎಂದು ದೂರಿದರು.**


# ಸಿಗದ ನಿರೀಕ್ಷಿತ ಅನುದಾನ; ಅಭಿವೃದ್ಧಿಗೆ ತೊಡಕು: ಶಾಸಕ ಬೇಸರ

• ಉದಯವಾಹಿನಿ, ಮಂಡ್ಯ

ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೆ.ಆರ್. ಪೇಟೆ ಕ್ಷೇತ್ರದ ಅಭಿವೃದ್ಧಿಗೆ ನೀಡಿದ್ದ ಸುಮಾರು 100 ಕೋಟಿ ಅನುದಾನವನ್ನು ಇಂದಿನ ಕಾಂಗ್ರೆಸ್ ಸರ್ಕಾರ ಯಾವುದೇ ಕಾರಣ ನೀಡದೆ ವಾಪಸ್ ಪಡೆದುಕೊಂಡಿದೆ. ಅನುದಾನ ಕೊರತೆಯಿಂದ ಜನರ ನಿರೀಕ್ಷೆಗೆ ತಕ್ಕಂತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಗುತ್ತಿಲ್ಲ ಎಂದು ಕೆ.ಆರ್. ಪೇಟೆ ಶಾಸಕ ಎಚ್.ಟಿ. ಮಂಜು ಅಸಮಾಧಾನ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಸಣ್ಣ ನೀರಾವರಿ, ಜಲಸಂಪನ್ಮೂಲ ಯೋಜನೆಗಳಿಗೆ ಸಂಬಂಧಿಸಿದ 60 ಕೋಟಿ, ಲೋಕೋಪಯೋಗಿ ಯೋಜನೆಗಳಿಗೆ ಸಂಬಂಧಿಸಿದ ಅನುದಾನಗಳನ್ನು ತಾಂತ್ರಿಕ ಮತ್ತು ಇತರೆ ಕಾರಣ ನೀಡಿ, ವಾಪಸ್ ಪಡೆಯಲಾಗಿದೆ. ಹೀಗಾಗಿ ಮಾಜಿ ಸಚಿವ ಕೆ.ಸಿ. ನಾರಾಯಣಗೌಡರು ಪದೇ ಪದೇ ಅನುದಾನ ತಂದೆ ಎಂಬ ಮಾತುಗಳನ್ನು ಆಡಬಾರದು ಎಂದು ಹೇಳಿದರು.

ನನ್ನ ಅವಧಿಯಲ್ಲಿ ಕೆ.ಆರ್. ಪೇಟೆ ಕ್ಷೇತ್ರಕ್ಕೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಕೆ.ಆರ್. ಪೇಟೆ ಕ್ಷೇತ್ರದ ನೀರಾವರಿ ಯೋಜನೆಗಳಿಗೆ ಹಣ ನೀಡುವಂತೆ ಮನವಿ ಮಾಡಿದ್ದರಿಂದ 100 ಕೋಟಿ ನೀಡಿದ್ದಾರೆ. ಲೋಕೋಪಯೋಗಿ ಇಲಾಖೆಗೆ 10 ಕೋಟಿ ಹಾಗೂ



ಮುಖ್ಯಮಂತ್ರಿ ವಿಶೇಷ ಅನುದಾನದಲ್ಲಿ 25 ಕೋಟಿ ಅನುದಾನ ಬಂದಿದೆ. ಆದರೆ ಕಾಂಗ್ರೆಸ್ ಶಾಸಕರ ಕ್ಷೇತ್ರಕ್ಕಿಂತ ಕಡಿಮೆ ಅನುದಾನ ಸಿಕ್ಕಿದೆ ಎಂದು ಹೇಳುವ ಮೂಲಕ ಅನುದಾನ ಬಿಡುಗಡೆಯಲ್ಲಿ ತಾರತಮ್ಯ ಆಗಿರುವುದನ್ನು ಪರೋಕ್ಷವಾಗಿ ಹೇಳಿದರು.

**ಸಂಘರ್ಷದ ಹೇಳಿಕೆ ಸಲ್ಲದು:** ಕೆ.ಆರ್.ಪೇಟೆಗೆ ನಿಖಿಲ್ ಕುಮಾರಸ್ವಾಮಿ ಬಂದ ಸಂದರ್ಭದಲ್ಲಿ 2028ಕ್ಕೂ ಮುನ್ನ ಸ್ಥಳೀಯ ಸಂಸ್ಥೆ ಚುನಾವಣೆ ಬರಲಿವೆ. ಹಾಗಾಗಿ ಅಭ್ಯರ್ಥಿ ಆಯ್ಕೆಗೂ ಮುನ್ನ ಚುನಾವಣೆಯತ್ತ ಗಮನಹರಿಸಿ ಎಂದ ಕಾರ್ಯಕರ್ತರಿಗೆ ಹೇಳಿದ್ದಾರೆಯೇ ಹೊರತು ನನ್ನನ್ನೇ ಮುಂದಿನ ಅಭ್ಯರ್ಥಿ ಎಂದು ಘೋಷಿಸಿಲ್ಲ ಎಂದು ಶಾಸಕ ಎಚ್.ಟಿ.ಮಂಜು ಸ್ಪಷ್ಟಪಡಿಸಿದರು.

ಪಕ್ಷ ಸಂಘಟನೆ ದೃಷ್ಟಿಯಿಂದ ನಿಖಿಲ್ ಹೇಳಿರುವ ಮಾತಿಗೆ ಅಪಾರ್ಥ ಕಲ್ಪಿಸುವುದು ಬೇಡ. ಮುಂದಿನ ವಿಧಾನಸಭಾ ಚುನಾವಣೆಗೆ ಅಭ್ಯರ್ಥಿಗಳ ಆಯ್ಕೆಯನ್ನು ಜೆಡಿಎಸ್-ಬಿಜೆಪಿಯ ವರಿಷ್ಠರು ತೀರ್ಮಾನಿಸಲಿದ್ದಾರೆ. ಮಾಜಿ ಸಚಿವ ಕೆ.ಸಿ. ನಾರಾಯಣಗೌಡ ಅವರ ಬಗ್ಗೆ ಅಪಾರ ಗೌರವವಿದೆ. ಅವರು ಇಲ್ಲಸಲ್ಲದ ಹೇಳಿಕೆಗಳನ್ನು ನೀಡಿ ಸಂಘರ್ಷಕ್ಕೆ ಎಡೆಮಾಡಿ ಕೊಡಬಾರದು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ರಮೇಶ್, ಟಿ.ಎ.ಪಿ.ಸಿ.ಎಂ.ಎಸ್ ಅಧ್ಯಕ್ಷ ಬಲದೇವ್, ಜಿಲ್ಲಾ ಯುವ ಜೆಡಿಎಸ್ ಘಟಕದ ಅಧ್ಯಕ್ಷ ಕಂಸಾಗರ ರವಿ, ತಾ.ಪಂ. ಮಾಜಿ ಸದಸ್ಯ ಮೋಹನ್, ಮಹದೇವ ಹಾಜರಿದ್ದರು.

### ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡಿಲ್ಲ

**ಬಿಜೆಪಿಯ ಯಾವೊಬ್ಬ ಕಾರ್ಯಕರ್ತರಿಗೆ ಜೆಡಿಎಸ್ ಶಾಲು ಹೊದಿಸಿ ಪಕ್ಷಕ್ಕೆ ಆಹ್ವಾನಿಸಿಲ್ಲ. ಪುರಸಭೆ ಮಾಜಿ ಸದಸ್ಯ ನಂದೀಶ್ ಅವರು ಹುಟ್ಟುಹಬ್ಬದ ದಿನದಂದು ನನ್ನ ಮನೆಗೆ ಬಂದಾಗ ಅವರನ್ನು ಶಾಲು ಹೊದಿಸಿ ಸನ್ಮಾನಿಸಿದ್ದೇನೆಯೇ ಹೊರತು ಜೆಡಿಎಸ್‌ಗೆ ಸೇರ್ಪಡೆ ಮಾಡಿಕೊಂಡಿಲ್ಲ ಎಂದು ಸ್ಪಷ್ಟಪಡಿಸಿದರು.**

# ದೊಡ್ಡಕೆರೆ, ಚಿಕ್ಕಕೆರೆ ಒಡಲಿಗೆ ಕಸ

• ಉದಯವಾಹಿನಿ, ಕುಣಿಗಲ್

ಪಟ್ಟಣದ ಚಿಕ್ಕಕೆರೆ ಮತ್ತು ದೊಡ್ಡಕೆರೆ ಏರಿ ಬಳಿ ಕಸ ಸಂಗ್ರಹ ಹೆಚ್ಚಾಗುತ್ತಿದೆ. ವಿಲೇವಾರಿಗೆ ಗಮನಹರಿಸದೆ ಕೆರೆಗೆ ಸರಿಸುವ ಪರಿಪಾಠ ಪ್ರಾರಂಭವಾಗಿದ್ದು, ಸಂಬಂಧಪಟ್ಟವರು ಗಮನ ಹರಿಸಲು ನಾಗರಿಕರು ಮನವಿ ಮಾಡಿದ್ದಾರೆ. ಪಟ್ಟಣದ ಉತ್ತರ ಮತ್ತು ದಕ್ಷಿಣ ಭಾಗಕ್ಕೆ ಕಳಸಪ್ರಾಯವಾಗಿರುವ ಚಿಕ್ಕಕೆರೆ ಮತ್ತು ದೊಡ್ಡಕೆರೆ ವ್ಯಾಪ್ತಿಯ ಪ್ರದೇಶಗಳು ಕಸ ಮತ್ತು ತ್ಯಾಜ್ಯಗಳ ಸಂಗ್ರಹ ಕೇಂದ್ರವಾಗುತ್ತಿದೆ. ಕಸ ಹೆಚ್ಚಾದಂತೆ ತೆರವುಗೊಳಿಸುವಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸದ ಕಾರಣ ಕಸ ಹೆಚ್ಚಾದಂತೆ ಕ್ರಮೇಣವಾಗಿ ಕಸ ಕೆರೆಗಳನ್ನು ಸೇರುತ್ತಿದೆ. ನೀರು ಕುಲುಷಿತಗೊಳ್ಳುವುದರ ಜತೆಗೆ ಜಲಚರಗಳಿಗೂ ಹಾನಿಯಾಗುತ್ತಿದೆ.

ತುಮಕೂರು ಕಡೆಗಳಿಂದ ಬರುವ ವಾಹನಗಳಿಗೆ ದೊಡ್ಡಕೆರೆ ವ್ಯಾಪ್ತಿಯ ಮತ್ತು ಮೈಸೂರು ಕಡೆಗಳಿಂದ ಬರುವ ವಾಹನಗಳಿಗೆ ತಾಲ್ಲೂಕಿನ ಪ್ರವೇಶದ್ವಾರದಲ್ಲಿರುವ ಸ್ವಾಗತ ಫಲಕದಡಿಯಲ್ಲಿಯೇ ಕಸದ ರಾಶಿಗಳು ಸ್ವಾಗತ ಕೋರುತ್ತಿದೆ. ದೊಡ್ಡಕೆರೆ ವ್ಯಾಪ್ತಿಯ ಏರಿ, ಕೋಡಿ ಮತ್ತು ನಾಲಾ ತೂಬುಗಳ ಪ್ರದೇಶದಲ್ಲಿ ಕಸದ ಜತೆಗೆ ಮದ್ಯದ ಖಾಲಿ ಬಾಟಲಿ, ಬಟ್ಟೆಗಳ ಮೂಟೆ ಮತ್ತು ದೇವರ ಹಳೆ ಫೋಟೊ ರಾಶಿ ಇದ್ದರೆ, ಚಿಕ್ಕಕೆರೆ ವ್ಯಾಪ್ತಿಯಲ್ಲಿ ಕೋಳಿ ತ್ಯಾಜ್ಯದ ಜತೆಗೆ ಕಸದ ರಾಶಿ ಕಂಡು ಬರುತ್ತಿದೆ. ನಾಗರಿಕರು ತಮಗೆ ಬೇಡದ ಬಟ್ಟೆಗಳನ್ನು ಗಂಟುಮೂಟೆ ಕಟ್ಟಿ ತಂದು ಎಸೆಯುತ್ತಿರುವುದು ಪೌರ ಕಾರ್ಮಿಕರಿಗೆ ಸಮಸ್ಯೆಯಾಗಿದೆ.

☛ ಉದಯವಾಹಿನಿ ಚಿತ್ರ


ಕುಣಿಗಲ್ ದೊಡ್ಡಕೆರೆ ನೀರನ್ನು ಪಟ್ಟಣದ ಜನತೆಗೆ ಕುಡಿಯಲು ನೀಡಲಾಗುತ್ತಿದೆ. ಮೊದಲೇ ಶುದ್ಧೀಕರಣದ ಸಮಸ್ಯೆಯಿಂದ ಜನತೆಗೆ ಕಲುಷಿತ ನೀರು ಸರಬರಾಜಾಗುತ್ತಿದ್ದು ಮತ್ತಷ್ಟು ಸಮಸ್ಯೆಗೆ ಕಾರಣವಾಗಿದೆ. ಕೆರೆ, ಏರಿ, ನಾಲೆ, ತೂಬು ಮತ್ತು ಕೋಡಿ ಪ್ರದೇಶಗಳು ಹಾಳಾಗುತ್ತಿದೆ. ಕೆರೆ ಪರಿಸರ ಸಂರಕ್ಷಣೆಗೆ ಗಮನಹರಿಸುವಂತೆ ಶಾಸಕ, ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಎಂದು ಬಜರಂಗ ದಳದ ಸಂಚಾಲಕ ಗಿರೀಶ್ ದೂರಿದರು.

ಎಲ್ಲರ ಗಮನ ದೊಡ್ಡಕೆರೆ ಮೇಲಿದೆ. ಅದರಷ್ಟೆ ಇತಿಹಾಸವಿರುವ ಚಿಕ್ಕಕೆರೆ ಬಹುತೇಕ ಒತ್ತುವರಿಯಾಗಿದೆ. ಜತೆಗೆ ಕಸ ಸೇರಿ ಇಡೀ ವಾತಾವರಣ ಕಳೆಗುಂದುತ್ತಿದ್ದು ಶಾಸಕರು ಸೇರಿದಂತೆ ಅಧಿಕಾರಿಗಳು ಕೆರೆಗಳ ಸಂರಕ್ಷಣೆ ಜತೆಗೆ ಸೌಂದರೀಕರಣಕ್ಕೆ ಗಮನಹರಿಸಿ ಕೆರೆಗಳ ಪಾವಿತ್ರ್ಯಕ್ಕೆ ಹೆಚ್ಚು ಒತ್ತು ನೀಡಬೇಕಿದೆ. ಇನ್ನೂ ಕೆಶಿಫ್ ವತಿಯಿಂದ ಚಿಕ್ಕಕೆರೆ ಏರಿ ಬಳಿ ನಿರ್ಮಾಣವಾಗಿದ್ದ ಸುಂದರ ಉದ್ಯಾನ ನಿರ್ವಹಣೆ ಕೊರತೆಯಿಂದಾಗಿ ಹಾಳಾಗುತ್ತಿದೆ. ಗಮನಹರಿಸಲು ಕುಂಬಾರ ಸಂಘದ ಅಧ್ಯಕ್ಷ ರಮೇಶ್ ಮನವಿ ಮಾಡಿದರು.

# ಕಾಡಾನೆ ಕಾರ್ಯಾಚರಣೆಗೆ 4 ಕಿ.ಮೀ. ಗೆ ಒಬ್ಬ ಸಿಬ್ಬಂದಿ

• ಉದಯವಾಹಿನಿ, ಚನ್ನಪಟ್ಟಣ

ಬೆಂಗಳೂರು ದಕ್ಷಿಣ ಜಿಲ್ಲೆಯ ಅರಣ್ಯ ಗಡಿಭಾಗದಲ್ಲಿ ಕಾಡಾನೆಗಳನ್ನು ಓಡಿಸುವ ಕಾರ್ಯಾಚರಣೆಗಾಗಿ ಸುಮಾರು 4 ಕಿಲೋಮೀಟರ್‌ಗೆ ಒಬ್ಬರಂತೆ 90 ಸಿಬ್ಬಂದಿಯನ್ನು ನೇಮಿಸಲಾಗಿದೆ. ಜೊತೆಗೆ ಡ್ರೋಣ್ ಬಳಸಿ ಕಾಡಾನೆ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ' ಎಂದು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಶಿವಶಂಕರ್ ಹೇಳಿದರು.

ತಾಲ್ಲೂಕಿನ ಅಮ್ಮಳ್ಳಿದೊಡ್ಡಿ ಗ್ರಾಮದ ಬಳಿಯ ರೈತರ ತೋಟದಲ್ಲಿ ಅರಣ್ಯ ಇಲಾಖೆ ಆಯೋಜಿಸಿದ್ದ ರೈತರು ಹಾಗೂ ಅಧಿಕಾರಿಗಳ ಸಭೆಯಲ್ಲಿ ರೈತರ ಅಹವಾಲು ಆಲಿಸಿ ಮಾತನಾಡಿದ ಅವರು, ಕಾಡಾನೆಗಳ ಉಪಟಳಕ್ಕೆ ಕಡಿವಾಣ ಹಾಕಿ, ಶಾಶ್ವತ ಪರಿಹಾರ ದೊರಕಿಸಲು ಸರ್ಕಾರ ಹಾಗೂ ಅರಣ್ಯ ಇಲಾಖೆ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತಿದೆ ಎಂದರು.


☛ ಉದಯವಾಹಿನಿ ಚಿತ್ರ

ಸಭೆಯಲ್ಲಿ ರೈತರು ಮಾಡಿರುವ ವಿವಿಧ ಒತ್ತಾಯ, ಬೇಡಿಕೆ ಜೊತೆಗೆ ಅಭಿಪ್ರಾಯಗಳನ್ನು ಪಟ್ಟಿಮಾಡಿ ಹಿರಿಯ ಅಧಿಕಾರಿಗಳ ಗಮನಕ್ಕೆ ತರಲಾಗುವುದು. ಶಾಶ್ವತ ಪರಿಹಾರ ದೊರಕಿಸಿಕೊಡುವ ನಿಟ್ಟಿನಲ್ಲಿ ಎಲ್ಲಾ ಬೇಡಿಕೆಗಳ ಅನುಷ್ಠಾನದ ಸಾಧ್ಯತೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಅಮ್ಮಳ್ಳಿದೊಡ್ಡಿ ಮಹೇಶ್ ಗೌಡ ಅವರು, ಕಾಡಾನೆಗಳ ದಾಳಿಯಿಂದ ಈ ಭಾಗದಲ್ಲಿ ರೈತರಿಗೆ ಆಗುತ್ತಿರುವ ನಷ್ಟ ಮತ್ತು ತೊಂದರೆಯನ್ನು ಅಧಿಕಾರಿಗಳ ಮುಂದೆ ಎಳೆಎಳೆಯಾಗಿ ತೆರೆದಿಟ್ಟರು. ಕಾಡಾನೆಗಳ ನಿಯಂತ್ರಣದ ಜೊತೆಗೆ ರೈತರ ಸಮಸ್ಯೆಗಳನ್ನು ಬಗೆಹರಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸುತ್ತೇವೆ. ಜೊತೆಗೆ ವಿಧಾನಸೌಧಕ್ಕೂ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಕಾಡಾನೆಗಳಿಂದ ಆದ ನಷ್ಟಕ್ಕೆ ಸರ್ಕಾರ ನೀಡುತ್ತಿರುವ ಪರಿಹಾರದ ಹಣ ಅಲ್ಪವಾಗಿದೆ. ನಷ್ಟ ಅನುಭವಿಸಿದ ರೈತರಿಗೆ ಸರ್ಕಾರ ಶೇ 75ರಷ್ಟು ಪರಿಹಾರ ಕೊಡಿಸಬೇಕು. ಇದರ ಬದಲು, ಕಾಡಾನೆ ಹಾವಳಿ ಇರುವ ಜಮೀನುಗಳನ್ನು ಇಲಾಖೆಯೇ ವಹಿಸಿಕೊಂಡು ವರ್ಷಕ್ಕೆ ಇಂತಿಷ್ಟು ಮೊತ್ತವನ್ನು ಬಾಡಿಗೆ ರೂಪದಲ್ಲಿ ಕೊಡಬೇಕು ಎಂದು ಸಭೆಯಲ್ಲಿದ್ದ ರೈತ ಮಹಿಳೆಯರು ಒತ್ತಾಯಿಸಿದರು.

# ಶೀಘ್ರದಲ್ಲೇ ಮತ್ತೊಂದು ಫ್ಲೈಓವರ್ ಕಾಣಿಕೆ

## ಎಪಿಎಂಸಿ ಗೇಟ್-1ರಿಂದ ರಿಂಗ್ ರಸ್ತೆ ಜಂಕ್ಷನ್ ದಾಟಿ ಎಪಿಎಂಸಿ 2ನೇ ಗೇಟ್‌ವರೆಗೆ ಫ್ಲೈಓವರ್

• ಉದಯವಾಹಿನಿ, ಮೈಸೂರು:

ಶೀಘ್ರದಲ್ಲೇ ಮೈಸೂರು ನಗರದಲ್ಲಿ ಮತ್ತೊಂದು ಫ್ಲೈಓವರ್ ತಲೆ ಎತ್ತಲಿದೆ. ಮೈಸೂರು-ನಂಜನಗೂಡು ನಡುವಿನ ರಾಷ್ಟ್ರೀಯ ಹೆದ್ದಾರಿ 766ರಲ್ಲಿ ಜೆ.ಪಿ.ನಗರ ಟಿ ಜಂಕ್ಷನ್ ಹಾಗೂ ಎಪಿಎಂಸಿ ಗೇಟ್ ಬಳಿ ಎರಡು ವೇಹಿಕಲ್ ಅಂಡರ್ ಪಾಸ್ ನಿರ್ಮಿಸಲಾಗುತ್ತಿದೆ. ಇದರ ಮುಂದುವರಿದ ಭಾಗವಾಗಿ ಎಪಿಎಂಸಿ ಗೇಟ್-1ರಿಂದ ರಿಂಗ್ ರಸ್ತೆ ಜಂಕ್ಷನ್ ದಾಟಿ ಎಪಿಎಂಸಿ 2ನೇ ಗೇಟ್ ವರೆಗೆ 22 ಕೋಟಿ ರೂ. ವೆಚ್ಚದಲ್ಲಿ ಫ್ಲೈಓವರ್ ನಿರ್ಮಿಸಲಾಗುತ್ತಿದೆ. ಪೊಲೀಸ್ ಇಲಾಖೆಯು ಎನ್‌ಎಚ್-766ನಲ್ಲಿ ಆಗಾಗ ಅಪಘಾತಗಳು ಸಂಭವಿಸಿ, ಮೃತ್ಯು ಕೂಪವಾಗಿ ಪರಿಣಮಿಸಿದ್ದ ಒಟ್ಟು 8 ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಅದನ್ನು ಸರಿಪಡಿಸಲು ಅಂಡರ್ ಪಾಸ್ ನಿರ್ಮಿಸಲು ವರದಿ ನೀಡಿತ್ತು.

☛ ಉದಯವಾಹಿನಿ ಚಿತ್ರ


**ಎಲ್ಲಿಂದ ಎಲ್ಲಿಗೆ? ವೆಚ್ಚ ಎಷ್ಟು?**

ಅದರಲ್ಲಿ ನಾಲ್ಕು ಕಡೆಗಳಲ್ಲಿ ಕೆಲಸ ಆರಂಭವಾಗಿ ಶೇ. 30ರಷ್ಟು ಕಾಮಗಾರಿ ಪೂರ್ಣವಾಗಿದೆ.

ಮೈಸೂರಿನ ಆಯ್ದ ಕಡೆಗಳಲ್ಲಿ ಫ್ಲೈಓವರ್ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಅದರಲ್ಲಿ ಮೈಸೂರಿನಿಂದ ನಂಜನಗೂಡು ಕಡೆಗೆ ಸಾಗುವ ರಸ್ತೆಯಲ್ಲಿಉತ್ತನಹಳ್ಳಿಗೆ ತೆರಳುವ ಟೋಲ್‌ಗೇಟ್ ಬಳಿ ಹಾಗೂ ನಂತರ ಸಿಗುವ ಎಪಿಎಂಸಿ ಮೊದಲ ಗೇಟ್ ಬಳಿಯ(ಜೆಪಿ ನಗರ ಜಂಕ್ಷನ್) ಟಿ-ಜಂಕ್ಷನ್‌ನಲ್ಲಿಒಟ್ಟು 20.42 ಕೋಟಿ ರೂ. ವೆಚ್ಚದಲ್ಲಿಕೈಗೆತ್ತಿಕೊಂಡಿರುವ ಅಂಡರ್ ಪಾಸ್ ನಿರ್ಮಾಣ ಕಾಮಗಾರಿಯೂ ಒಂದಾಗಿದೆ. ಅಂಡರ್‌ಪಾಸ್ ನಿರ್ಮಿಸಿದ ಉದ್ದೇಶವೂ ಈಡೇರುವುದಿಲ್ಲ. ಹಾಗಾಗಿ ಎಪಿಎಂಸಿ ಗೇಟ್-1ರಿಂದ ರಿಂಗ್ ರಸ್ತೆ ಜಂಕ್ಷನ್ ದಾಟಿ ಎಪಿಎಂಸಿ 2ನೇ ಗೇಟ್ ವರೆಗೆ ಫ್ಲೈ ಓವರ್ ನಿರ್ಮಿಸುವಂತೆ ಕಾಮಗಾರಿ ವೀಕ್ಷಿಸಿದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸಲಹೆ ನೀಡಿದ್ದರು. ಹಾಗಾಗಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಹೆಚ್ಚುವರಿಯಾಗಿ 22 ಕೋಟಿ ರೂ. ಯೋಜನೆಯ ಅಂದಾಜುಪಟ್ಟಿಗೆ ಅನುಮೋದನೆ ದೊರೆತಿದ್ದು, ಶೀಘ್ರವೇ ಕೆಲಸ ಆರಂಭವಾಗಲಿದೆ. 2024ರಲ್ಲಿ ನಂಜನಗೂಡು ರೈಲ್ವೆ ಫ್ಲೈಓವರ್ ಸಂಚಾರಕ್ಕೆ ಮುಕ್ತ ಆಗಿತ್ತು.ಈ ಫ್ಲೈಓವರ್ ದಕ್ಷಿಣದ ಕಾಶಿ ಎಂದೇ ಕರೆಯಲ್ಪಡುವ ನಂಜನಗೂಡಿಗೆ ಬರುವ ಅಪಾರ ಸಂಖ್ಯೆಯ ಭಕ್ತರಿಗೆ ಭಾರೀ ಅನುಕೂಲ ಕಲ್ಪಿಸಿದೆ. ಅಲ್ಲದೇ ಪ್ರವಾಸಿಗರು, ಅಂತಾರಾಜ್ಯ ಪ್ರಯಾಣಿಕರು ಹಾಗೂ ಸ್ಥಳೀಯರ ದಶಕದ ಬೇಡಿಕೆ ಕೂಡ ಈಡೇರಿದೆ.

ಈ ರೈಲ್ವೆ ಫ್ಲೈಓವರ್ ಮೂಲಕ ಪ್ರಯಾಣಿಕರು ಮೂಲಕ ನಾನಾ ಪ್ರೇಕ್ಷಣೀಯ ಸ್ಥಳಗಳಿಗೆ ಭೇಟಿ ನೀಡಬಹುದಾಗಿದ್ದು, ತಮಿಳುನಾಡು ಸೇರಿದಂತೆ ಅಂತಾರಾಜ್ಯಕ್ಕೆ ತೆರಳುವವರಿಗೆ ಭಾರೀ ಅನುಕೂಲ ಕಲ್ಪಿಸಿದೆ. ನಂಜನಗೂಡು ರೈಲ್ವೆ ಫ್ಲೈಓವರ್‌ನಿಂದಾಗಿ ಮೈಸೂರು-ಚಾಮರಾಜನಗರ ರೈಲು ಸಂಚಾರದಿಂದಾಗಿ ನಂಜನಗೂಡಿನ ಸುಜಾತಪುರಂ ರೈಲ್ವೇ ಗೇಟ್ ಬಳಿ ಆಗುತ್ತಿದ್ದ ಟ್ರಾಫಿಕ್ ಕಿರಿಕಿರಿ ತಪ್ಪಿಸಿದಂತಾಗಿದೆ.

### ನಗರವು ಬೆಳೆದಂತೆ ಟ್ರಾಫಿಕ್ ಕಿರಿಕಿರಿ

**ದಿನಗಳೆದಂತೆ ಕರ್ನಾಟಕ ರಾಜಧಾನಿ ಬೆಂಗಳೂರು ಆದಂತೆ ಆಗುತ್ತಿರುವ ಸಾಂಸ್ಕೃತಿಕ ರಾಜಧಾನಿ ಮೈಸೂರು, ಸಂಚಾರ ದಟ್ಟಣೆ ಕಿರಿಕಿರಿಯನ್ನು ಅನುಭವಿಸುತ್ತಿದೆ. ನಗರವು ಬೆಳೆದಂತೆ ಟ್ರಾಫಿಕ್ ಕಿರಿಕಿರಿ ಹೆಚ್ಚುತ್ತಿದ್ದು, ಇದಕ್ಕೆ ಪರಿಹಾರ ಮಾರ್ಗಗಳನ್ನು ಕಂಡುಕೊಳ್ಳಲಾಗುತ್ತಿದೆ. ಇದರ ಭಾಗವಾಗಿ ಮೈಸೂರಿನಲ್ಲಿ ಶೀಘ್ರದಲ್ಲೇ ಮತ್ತೊಂದು ಫ್ಲೈಓವರ್ ತಲೆಯೆತ್ತಲಿದೆ. ಮೈಸೂರು-ನಂಜನಗೂಡು ರಾಷ್ಟ್ರೀಯ ಹೆದ್ದಾರಿ ಬಳಿಯ ಎಪಿಎಂಸಿ ಗೇಟ್-1ರಿಂದ ರಿಂಗ್ ರಸ್ತೆ ಜಂಕ್ಷನ್ ದಾಟಿ ಎಪಿಎಂಸಿ 2ನೇ ಗೇಟ್‌ವರೆಗೆ, ಸುಮಾರು 22 ಕೋಟಿ ರೂ. ವೆಚ್ಚದಲ್ಲಿ ಫ್ಲೈಓವರ್ ನಿರ್ಮಾಣ ಕಾಮಗಾರಿ ನಡೆಯಲಿದೆ.**

### ಫ್ಲೈಓವರ್‌ಗೆ 22 ಕೋಟಿ ರೂ.ಅನುದಾನ

**ಹಾಲಿ ನಡೆಯುತ್ತಿರುವ ಈ ಕಾಮಗಾರಿಯು ರಿಂಗ್ ರಸ್ತೆ ಜಂಕ್ಷನ್ ಬಳಿ ಕೊನೆಗೊಳ್ಳುತ್ತದೆ. ಹೀಗೆ ಮಾಡಿದರೆ ಮೈಸೂರು ಕಡೆಯಿಂದ ನಂಜನಗೂಡು ಕಡೆಗೆ ಹೋಗುವ ವಾಹನಗಳಿಗೆ ಮತ್ತೊಮ್ಮೆ ಟ್ರಾಧಿಫಿಕ್ ಸಿಗ್ನಲ್‌ನಲ್ಲಿ ನಿಲುಗಡೆ ಮಾಡಬೇಕಾಗುತ್ತದೆ. ಇದರಿಂದ ಸಂಚಾರ ದಟ್ಟಣೆಯಾಗುತ್ತದೆ. 2019ರಲ್ಲಿ ಮೈಸೂರಿನ ಫ್ಲೈಓವರ್ ನಿರ್ಮಾಣದಲ್ಲಿ ಕಳಪೆ ಕಾಮಗಾರಿ ಆರೋಪ ಕೇಳಿಬಂದಿತ್ತು.**

## ಮಿನಿ ನ್ಯೂಸ್

### ಪ್ರೇಮಿಗಳ ದಿನದಂದು ನಂದಿ ಬೆಟ್ಟಕ್ಕೆ ಪ್ರವೇಶ ನಿರ್ಬಂಧ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಪ್ರೇಮಿಗಳ ದಿನದಂದು ಇತಿಹಾಸ ಪ್ರಸಿದ್ಧ ತಾಲ್ಲೂಕಿನ ನಂದಿ ಗಿರಿಧಾಮಕ್ಕೆ ಸಾವಿರಾರು ಸಂಖ್ಯೆಯಲ್ಲಿ ಪ್ರೇಮಿಗಳು ಆಗಮಿಸುವ ಸಾಧ್ಯತೆ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಫೆ.14ರಂದು ಪ್ರವೇಶ ನಿರ್ಬಂಧಿಸಲಾಗಿದೆ. ಪ್ರತಿನಿತ್ಯ ಸಾವಿರಾರು ಪ್ರವಾಸಿಗರು ನಂದಿ ಗಿರಿಧಾಮಕ್ಕೆ ಭೇಟಿ ನೀಡಿ ಪ್ರಕೃತಿ ಸೌಂದರ್ಯ ಸವಿಯುತ್ತಿದ್ದಾರೆ. ಅದರಲ್ಲೂ ವೀಕೆಂಡ್‌ನಲ್ಲಿ ಜನಜಾತ್ರೆಯೇ ಸೇರುತ್ತದೆ. ಪ್ರೇಮಿಗಳ ದಿನದಂದು ಹೆಚ್ಚಿನ ಸಂಖ್ಯೆಯಲ್ಲಿ ಪ್ರೇಮಿಗಳು ಆಗಮಿಸುವ ಸಾಧ್ಯತೆಯಿದ್ದು, ಮುಂಜಾಗ್ರತಾ ಕ್ರಮವಾಗಿ ಅಂದು ಬೆಳಗ್ಗೆ 6 ರಿಂದ ಸಂಜೆ 6ರವರೆಗೆ ಬೆಟ್ಟಕ್ಕೆ ಪ್ರವೇಶವನ್ನು ನಿರ್ಬಂಧಿಸಿ ಜಿಲ್ಲಾಡಳಿತ ಆದೇಶ ಹೊರಡಿಸಿದೆ.

### ಫೆ.9 ರಿಂದ 13ರವರೆಗೆ ಆರ್ಥಿಕ ಸಾಕ್ಷರತಾ ಸಪ್ತಾಹ

• ಉದಯವಾಹಿನಿ, ರಾಮನಗರ

ಸಾರ್ವಜನಿಕರಲ್ಲಿ ಬ್ಯಾಂಕಿಂಗ್ ವ್ಯವಹಾರ, ಆರ್ಥಿಕ ಶಿಸ್ತಿನ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಇದೇ ಫೆ. 9 ರಿಂದ 13 ರವರೆಗೆ ಜಿಲ್ಲೆಯಾದ್ಯಂತ ಐದು ದಿನಗಳ ಆರ್ಥಿಕ ಸಾಕ್ಷರತಾ ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಹಣಕಾಸು ಸೇವೆಗಳ ಇಲಾಖೆ, ಭಾರತೀಯ ರಿಸರ್ವ್ ಬ್ಯಾಂಕ್, ಜಿಲ್ಲಾ ಪಂಚಾಯತಿಯ ನಿರ್ದೇಶನದಂತೆ ಬೆಂಗಳೂರು ದಕ್ಷಿಣ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಈ ಕಾರ್ಯಕ್ರಮವನ್ನು ಆಯೋಜಿಸಿದ್ದು ಫೆ.9ರಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ಅವರು ಸಪ್ತಾಹದ ಪೋಸ್ಟರ್‌ಗಳನ್ನು ಬಿಡುಗಡೆ ಮಾಡುವ ಮೂಲಕ ಅಧಿಕೃತವಾಗಿ ಚಾಲನೆ ನೀಡಲಿದ್ದು ಜಿಲ್ಲೆಯಾದ್ಯಂತ 100 ಬ್ಯಾಂಕ್ ಶಾಖೆಗಳಲ್ಲಿ ಆರ್ಥಿಕ ಸಾಕ್ಷರತಾ ಸಪ್ತಾಹದ ಅಂಗವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಕೆವೈಸಿ ನಿಮ್ಮ ಗ್ರಾಹಕರನ್ನು ತಿಳಿಯಿರಿ ಎನ್ನುವುದು ಈ ಆರ್ಥಿಕ ಸಪ್ತಾಹದ ವಿಷಯವಾಗಿದ್ದು ಪ್ರಾಮುಖ್ಯತೆ, ಓವಿಡಿ ಅಧಿಕೃತವಾಗಿ ಮಾನ್ಯವಾದ ದಾಖಲಾತಿಗಳ ಬಗ್ಗೆ ವಿಚಾರಗಳು, ಮರು ಕೆವೈಸಿ, ವಿಡಿಯೋ ಕೆವೈಸಿ, ಸೆಂಟ್ರಲ್‌ಕೆವೈಸಿ, ಆಧಾರ್ ಓಟಿಪಿ ಹೀಗೆ ಹಲವಾರು ಬ್ಯಾಂಕಿನ ವಿಷಯಗಳ ಬಗ್ಗೆ ಮಾಹಿತಿಯನ್ನು ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಣಕಾಸು ಸಾಕ್ಷರತಾ ಕೇಂದ್ರಗಳು, ಸಿಎಫ್‌ಎಲ್‌ಸಿಗಳು, ಬ್ಯಾಂಕಿನ ವ್ಯವಹಾರ ಪ್ರತಿನಿಧಿಗಳು ಹಾಗೂ ಬ್ಯಾಂಕಿನ ಶಾಖೆಗಳು ಶಿಬಿರವನ್ನು ಏರ್ಪಡಿಸುವ ಮೂಲಕ ಪ್ರಚಾರವನ್ನು ನೀಡಲಿದ್ದಾರೆ ಎಂದು ಜಿಲ್ಲಾ ಮಾರ್ಗದರ್ಶಿ ಬ್ಯಾಂಕಿನ ಮುಖ್ಯ ಪ್ರಬಂಧಕರಾದ ಮೋಹನ್ ಕುಮಾರ್ ವೈ.ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಸ ಹಾಕಿದ ಜಾಗದಲ್ಲಿ ರಂಗೋಲಿ

• ಉದಯವಾಹಿನಿ, ಬಾಗೇಪಲ್ಲಿ

ಪಟ್ಟಣದ ಡಿವಿಜಿ ಮುಖ್ಯರಸ್ತೆ, ಡಾ.ಜಚನಿ ರಸ್ತೆ, ನ್ಯಾಷನಲ್ ಕಾಲೇಜಿನ ರಸ್ತೆಗಳ ಪಕ್ಕ ಕಸ ಹಾಕಿದ ಸ್ಥಳಗಳಲ್ಲಿ ಬಣ್ಣ ಬಣ್ಣದ ರಂಗೋಲಿ ಅರಳಿತ್ತು. ಜೊತೆಗೆ ಈ ಜಾಗದಲ್ಲಿ ಕಸ ಸುರಿಯಬಾರದು ಎಂಬ ನಾಮಫಲಕ ಅಳವಡಿಸಲಾಯಿತು. ಈ ಮೂಲಕ ಜನಸಾಮಾನ್ಯರು ಎಲ್ಲೆಂದರಲ್ಲಿ ಕಸ ಎಸೆಯಬಾರದು ಎಂಬ ಜಾಗೃತಿಯನ್ನು ಬಾಗೇಪಲ್ಲಿ ಪುರಸಭೆ ನಡೆಸಿಕೊಟ್ಟಿತು. ಕಸ ಸುರಿಯುವ ಜಾಗದಲ್ಲಿ ಪೌಡರ್ ಹಾಕಿ ಗಿಡ, ರೆಂಬೆ, ಟೈರುಗಳು ಮತ್ತು ಬಾಟಲಿಗಳಿಗೆ ಬಣ್ಣ ಬಳಿಯಲಾಗಿದೆ. ಕಸದ ರಾಶಿಯಿಂದ ದುರ್ನಾತ ಬೀರುತ್ತಿದ್ದ ಜಾಗದಲ್ಲಿ ಇದೀಗ ಬಣ್ಣಬಣ್ಣದ ರಂಗೋಲಿ ಚಿತ್ತಾರ ಮೂಡಿವೆ ಎಂದು ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಪುರಸಭೆ ಮುಖ್ಯಾಧಿಕಾರಿ ಎಂ.ಶ್ರೀನಿವಾಸ್ ಮಾತನಾಡಿ, ಈವರೆಗೆ ಕಸ ತುಂಬಿದ ಜಾಗಗಳನ್ನು ಈಗ ಅಲಂಕರಿಸಲಾಗಿದೆ. ಕಸ, ತ್ಯಾಜ್ಯ ಹಾಕದಂತೆ ಜನಜಾಗೃತಿ ಬ್ಯಾನರ್ ಹಾಕಲಾಗಿದೆ. ಹೋಟೆಲ್, ಬೀದಿಬದಿ ವ್ಯಾಪಾರಸ್ಥರು ಈ ಜಾಗಗಳಲ್ಲಿ ಕಸ ಹಾಕಬಾರದು. ಹಸಿ, ಒಣ ಕಸ ಬೇರ್ಪಡಿಸಿ, ಮನೆಗಳು, ಅಂಗಡಿಗಳ ಮುಂದೆ ಬರುವ ಪೌರಕಾರ್ಮಿಕರಿಗೆ ಕಸದ ಡಬ್ಬಿಗಳನ್ನು ವಿತರಿಸಬೇಕು. ಎಲ್ಲೆಂದರಲ್ಲಿ ಕಸ, ತ್ಯಾಜ್ಯ ಹಾಕಿದರೆ ಪರಿಸರಕ್ಕೆ ಧಕ್ಕೆ ಆಗಲಿದೆ ಸಂಕ್ರಾಮಿಕ ರೋಗಗಳು ಹರಡುತ್ತವೆ. ಬೀದಿನಾಯಿಗಳ ಕಾಟ ಹೆಚ್ಚುತ್ತದೆ. ಸಾರ್ವಜನಿಕರು ಪಟ್ಟಣದ ಉತ್ತಮ ಪರಿಸರಕ್ಕೆ ಸಹಕಾರ ನೀಡಬೇಕು ಎಂದು ತಿಳಿಸಿದರು.

### ಯೂರಿಯಾ ಅಕ್ರಮ ಮಾರಾಟ

• ಉದಯವಾಹಿನಿ, ಚಿಂತಾಮಣಿ

ನಗರದ ಚೇಳೂರು ರಸ್ತೆಯಲ್ಲಿರುವ ಅಂಗಡಿಯೊಂದರಲ್ಲಿ ರೈತರಿಗೆ ಯೂರಿಯಾ ಗೊಬ್ಬರ ವಿತರಿಸಲಾಗುತ್ತಿಲ್ಲ. ಸಲ್ಫರ್ ಗೊಬ್ಬರ ಖರೀದಿಸಿದರೆ ಮಾತ್ರವೇ ಯೂರಿಯಾ ನೀಡುವುದಾಗಿ ಅಂಗಡಿಯವರು ಹೇಳುತ್ತಿದ್ದಾರೆ ಎಂದು ತಾಲ್ಲೂಕಿನ ಕದಿರಪ್ಪನಾಯನಕೋಟೆ ಗ್ರಾಮದ ನಿವಾಸಿ ಬಿ. ಸುಧಾಕರರೆಡ್ಡಿ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರಿಗೆ ದೂರು ನೀಡಿದ್ದಾರೆ.

ಕಲ್ಪವೃಕ್ಷ ಫರ್ಟಿಲೈಸರ್ ಅಂಗಡಿಯವರು ರೈತರು ಯೂರಿಯಾ ಗೊಬ್ಬರದ ಮೂಟೆಯನ್ನು ಕೇಳಿದರೆ ಸಲ್ಫರ್ ಗೊಬ್ಬರವನ್ನು ತೆಗೆದುಕೊಂಡರೆ ಮಾತ್ರ ಯೂರಿಯಾ ನೀಡುವುದಾಗಿ ಒತ್ತಡ ಹೇರುತ್ತಿದ್ದಾರೆ ಎಂದು ತಾಲ್ಲೂಕಿನ ಕದಿರಪ್ಪನಾಯನಕೋಟೆ ಗ್ರಾಮದ ನಿವಾಸಿ ಬಿ.ಸುಧಾಕರರೆಡ್ಡಿ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರಿಗೆ ದೂರು ನೀಡಿದ್ದಾರೆ.

● ಸರ್ಕಾರದ ಆಡಳಿತ, ಒಂದು ಸಾವಿರ ದಿನ ಪೂರೈಸಿದ ಸಮಯದಲ್ಲಿ ಈ ಹಕ್ಕುಪತ್ರ ವಿತರಣೆ ಸಮಾವೇಶ

# ಸರ್ಕಾರದ ಸಾಧನಾ ಸಮಾವೇಶ ಫೆ. 14ರಂದು: ಸಚಿವ ಶಿವಾನಂದ ಪಾಟೀಲ

• ಉದಯವಾಹಿನಿ ಹಾವೇರಿ


ನಗರದಲ್ಲಿ ಫೆ. 13ರಂದು ನಡೆಯಬೇಕಿದ್ದ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ಸಾಧನಾ ಸಮಾವೇಶವನ್ನು, ಮುಖ್ಯಮಂತ್ರಿ ಸಮಯ ಸಿಗದಿದ್ದಕ್ಕೆ ಒಂದು ದಿನ ಮುಂದೂಡಿ ಫೆ. 14ರಂದು ಸಮಾವೇಶ ನಡೆಸಲು ದಿನ ನಿಗದಿಪಡಿಸಲಾಗಿದೆ.

**1.11 ಲಕ್ಷ ಫಲಾನುಭವಿಗಳಿಗೆ ಕಂದಾಯ ಇಲಾಖೆಯಿಂದ ಹಕ್ಕುಪತ್ರ**

ರಾಜ್ಯದ ಅಧಿಕಾರ ಚುಕ್ಕಾಣಿ ಹಿಡಿದಿರುವ ಕಾಂಗ್ರೆಸ್ ಸರ್ಕಾರ, 1,000 ದಿನಗಳ ಆಡಳಿತವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಸಂದರ್ಭದಲ್ಲಿ ಈ ಸಾಧನಾ ಸಮಾವೇಶ ಹಮ್ಮಿಕೊಳ್ಳಲಾಗುತ್ತಿದೆ. ಇದರ ಜೊತೆಯಲ್ಲಿ ಕಂದಾಯ ಇಲಾಖೆಯಿಂದ ರಾಜ್ಯದ ವಿವಿಧ ಜಿಲ್ಲೆಗಳ 1.23 ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆಯೂ ನಡೆಯಲಿದೆ.

ಸಮಾವೇಶ ನಡೆಯುವ ಅಜ್ಜಯ್ಯ ದೇವಸ್ಥಾನ ಬಳಿಯ ಜಾಗಕ್ಕೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ, ಸಿದ್ಧತೆ ಕೆಲಸಗಳನ್ನು ಪರಿಶೀಲಿಸಿದರು.

ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು ಫೆ. 13ರಂದು ವಿಶ್ವ ಡ್ಯಾಮ್‌ಗಳ ಸುರಕ್ಷಾ ವಿಭಾಗದ ಸಭೆ ಜರುಗಲಿದೆ. ಅದೇ ದಿನ ಹಂಪಿ ಉತ್ಸವ ಉದ್ಘಾಟನಾ ಸಮಾರಂಭವಿದೆ. ಎರಡೂ ಕಡೆಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪಾಲ್ಗೊಳ್ಳಲಿದ್ದಾರೆ. ಅಂದು ಅವರಿಗೆ ಹಾವೇರಿಗೆ ಬರಲು ಆಗುವುದಿಲ್ಲ. ಹೀಗಾಗಿ, ಹಾವೇರಿ ನಗರದಲ್ಲಿ ಜರುಗಬೇಕಿದ್ದ ಸಮಾವೇಶವನ್ನು ಫೆ. 14ರಂದು ನಡೆಸಲು ತೀರ್ಮಾನಿಸಲಾಗಿದೆ ಎಂದರು.


ಉದಯವಾಹಿನಿ ಚಿತ್ರ

ಸರ್ಕಾರದ ಆಡಳಿತ, ಒಂದು ಸಾವಿರ ದಿನ ಪೂರೈಸಿದ ಸಮಯದಲ್ಲಿ ಈ ಹಕ್ಕುಪತ್ರ ವಿತರಣೆ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಸಚಿವರು, ಶಾಸಕರು ಹಾಗೂ ಫಲಾನುಭವಿಗಳು ಭಾಗವಹಿಸಲಿದ್ದಾರೆ.

ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಡೆಸಲು ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಾಹಕ ಸಮಿತಿ. ಹಣಕಾಸು ಸಮಿತಿ, ಕಾನೂನು ಸುವ್ಯವಸ್ಥೆ ಮತ್ತು ಭದ್ರತಾ ಸಮಿತಿ ಮುಖ್ಯ ವೇದಿಕೆ ನಿರ್ಮಾಣ ಸಮಿತಿ, ಆಹಾರ ಮತ್ತು ಕುಡಿಯುವ ನೀರಿನ ಸಮಿತಿ, ಸಾರಿಗೆ ಮತ್ತು ಪಾರ್ಕಿಂಗ್ ವ್ಯವಸ್ಥೆ ಸಮಿತಿ, ಹೆಲಿಪ್ಯಾಡ್ ನಿರ್ಮಾಣ ಸಮಿತಿ, ಕಾರ್ಯಕ್ರಮ ನಿರ್ವಹಣಾ ಮತ್ತು ಮುಖ್ಯ ವೇದಿಕ ಶಿಷ್ಟಾಚಾರ ಸಮಿತಿ, ಫಲಾನುಭವಿಗಳ ಅಸನ ವ್ಯವಸ್ಥೆ ಸಮಿತಿ, ಸ್ವಚ್ಛತೆ ಮತ್ತು ನೈರ್ಮಲ್ಯ ಸಮಿತಿ, ವಸತಿ ಸಮಿತಿ ಆರೋಗ್ಯ ಸಮಿತಿ ಸೇರಿ 15 ಸಮಿತಿಗಳನ್ನು ರಚನೆ ಮಾಡಲಾಗಿದೆ' ಎಂದು ಹೇಳಿದರು.

**ಫಲಾನುಭವಿಗಳಿಗೆ 2550 ವಾಹನ ವ್ಯವಸ್ಥೆ**

**ಸಾಧನಾ ಸಮಾವೇಶದ ಕೇಂದ್ರಬಿಂದುಗಳು ಫಲಾನುಭವಿಗಳು. ಅವರನ್ನು ಹಾವೇರಿಯ ಸಮಾವೇಶ ಸ್ಥಳಕ್ಕೆ ಕರೆತರಲು ರಾಜ್ಯದಾದ್ಯಂತ 2550 ವಾಹನಗಳ ವ್ಯವಸ್ಥೆ ಮಾಡಲಾಗಿದೆ ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು. ಕೆಎಸ್‌ಆರ್‌ಟಿಸಿ ವಾಕರಸಾಸಂ ಕೆಕೆಆರ್‌ಟಿಸಿ ಕಡೆಯಿಂದ 2140 ಬಸ್‌ಗಳು 195 ಖಾಸಗಿ ಬಸ್‌ಗಳು 215 ಶಾಲಾ-ಕಾಲೇಜು ಬಸ್‌ಗಳನ್ನು ಬಳಸಿಕೊಳ್ಳಲಾಗುತ್ತಿದೆ. ಈ ವಾಹನಗಳ ನಿಲುಗಡೆಗೆ ಪ್ರತ್ಯೇಕ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಸಂಚಾರ ದಟ್ಟಣೆ ಉಂಟಾಗದಂತೆಯೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.**

**ಹಾವೇರಿ ಜಿಲ್ಲೆ ಸಾಧನೆ:** ಕಂದಾಯ ಇಲಾಖೆ ದಾಖಲೆಗಳನ್ನು ಕಾಗದ ರಹಿತವಾಗಿ ಡಿಜಿಟಲೀಕರಣ ಮಾಡುವುದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರ ಕನಸಾಗಿತ್ತು. ಈಗಾಗಲೇ ದಾಖಲೆಗಳ ಸರಳೀಕರಣ ಮಾಡಲಾಗಿದೆ. ಕಳೆದ ಬಾರಿ ಹೊಸಪೇಟೆಯಲ್ಲಿ 1.11 ಲಕ್ಷ ಫಲಾನುಭವಿಗಳಿಗೆ ಕಂದಾಯ ಇಲಾಖೆಯಿಂದ ಹಕ್ಕುಪತ್ರಗಳನ್ನು ನೀಡಲಾಗಿದೆ. ಈ ಬಾರಿ ಹಾವೇರಿ ಸಮಾವೇಶದಲ್ಲಿ 1.23 ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವ ಗುರಿಯಿದೆ. ಹಾವೇರಿ ಜಿಲ್ಲೆಯಲ್ಲಿಯೇ 20 ಸಾವಿರಕ್ಕೂ ಅಧಿಕ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಇದು ಜಿಲ್ಲೆ ವಿಶೇಷ ಸಾಧನೆ ಎಂದರು. ಸರ್ಕಾರಿ ಜಮೀನಿನಲ್ಲಿ ಮನೆ ಕಟ್ಟಿಕೊಂಡವರಿಗೆ ಹಕ್ಕುಪತ್ರದ ಮೂಲಕ ಇ-ಸ್ವತ್ತು ನೀಡಲಾಗುತ್ತಿದೆ. ದೇಶದಲ್ಲೇ ಇದು ಎರಡನೇ ಕಾರ್ಯಕ್ರಮವಾಗಿದೆ. ಬೇರೆ ರಾಜ್ಯಗಳಿಗೆ ಇದು ಮಾದರಿ. ಜನ ಸಾಮಾನ್ಯರಿಗೆ ಬದುಕುವ ಹಕ್ಕು ನೀಡಲಾಗುತ್ತಿದೆ ಎಂದು ತಿಳಿಸಿದರು.

## ಶಿಕ್ಷಣ ಮಕ್ಕಳ ವಿದ್ಯಾರ್ಜನೆಗೆ ಸೀಮಿತವಾಗದೇ ಸಮಗ್ರ ವಿಕಾಸಕ್ಕೆ ಕಾರಣವಾಗಲಿ

• ಉದಯವಾಹಿನಿ ಶಹಾಬಾದ್

ಶಿಕ್ಷಣ ಮಕ್ಕಳ ವಿದ್ಯಾರ್ಜನೆಗೆ ಮಾತ್ರ ಸೀಮಿತವಾಗಿರದೆ ಅವರಲ್ಲಿನ ಪ್ರತಿಭೆ ಹೊರಹಾಕಿ ವಿಕಾಸ ಹೊಂದಲು ಸಯಾಯ ಮಾಡುವುದು ಶಿಕ್ಷಣದ ಮಹತ್ತರ ಉದ್ದೇಶವಾಗಿದೆ ಎಂದು ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕರಾದ ಮರಿಯಪ್ಪ ಹಳ್ಳಿ ಹೇಳಿದರು.

ಅವರು ನಗರದ ಇಂಗಿನಶೆಟ್ಟಿ ಸಭಾಗೃಹದಲ್ಲಿ ನಡೆದ ಚವ್ಹಾಣ್ ಶಿಕ್ಷಣ ಹಾಗೂ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಶ್ರೀಮತಿ ನಾಗಮ್ಮ ಚನ್ನಪ್ಪ ಇಂಗಿನಶೆಟ್ಟಿ ಶಾಲೆ, ನಂದಗೋಕುಲ ಶಾಲೆ, ವಿಜಯ ಕಂಪ್ಯೂಟರ್ ತರಬೇತಿ ಕೇಂದ್ರ, ಸಂಯುಕ್ತಾಶ್ರಯದಲ್ಲಿ ಚಿಣ್ಣರ ಹಬ್ಬ ಸಾಂಸ್ಕೃತಿಕ ಉತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು. ಮಕ್ಕಳಲ್ಲಿರುವ ಪ್ರತಿಭೆ ಮತ್ತು ಕಲಾಸಕ್ತಿಯನ್ನು ಹೊರಹಾಕಲು ಅವಕಾಶ ನೀಡಿದಾಗ ಮಾತ್ರ ಅವರಲ್ಲಿ ಆತ್ಮಸ್ಥೈರ್ಯ ಮತ್ತು ಆತ್ಮವಿಶ್ವಾಸ ಇಮ್ಮಡಿಯಾಗಿ ಸಾಧನೆ ಮಾಡುತ್ತಾರೆ. ಪರೀಕ್ಷೆ ಮತ್ತು ಅಂಕಕ್ಕಾಗಿ ಮಾತ್ರ ಅಧ್ಯಯನ ಸೀಮಿತವಾಗಿದ್ದು, ವಿದ್ಯಾರ್ಥಿಗಳು ಆ ಮಿತಿಯನ್ನು ದಾಟಿ ಜ್ಞಾನಕ್ಕಾಗಿ ಓದು ಎಂಬ ನಿಟ್ಟಿನಲ್ಲಿ ಬೆಳೆಯಬೇಕು.


ಉದಯವಾಹಿನಿ ಚಿತ್ರ

ಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ರೀತಿ-ನೀತಿಗಳು ಮತ್ತು ಮಾನವೀಯ ಮೌಲ್ಯಗಳು ಮರೆಯಾಗುತ್ತಿವೆ. ಮಕ್ಕಳಲ್ಲಿ ಈ ಗುಣಗಳನ್ನು ಬೆಳೆಸುವ ಪಠ್ಯಕ್ರಮ ರೂಪುಗೊಳ್ಳಬೇಕಾಗಿದೆ ಎಂದರು. ಸರಕಾರ ನೌಕರರ ಸಂಘದ ತಾಲ್ಲೂಕ ಅಧ್ಯಕ್ಷ ಶಿವಪುತ್ರ ಕರಣಿಕ, ಸಮೂಹ ಸಂಪನ್ಮೂಲ ವ್ಯಕ್ತಿ ಸತ್ಯನಾರಾಯಣ ವಿಶ್ವಕರ್ಮ ಮಾತನಾಡಿ ಇಂದಿನ ಆಧುನಿಕ ಯುಗದಲ್ಲಿ ಕೇವಲ ಪಠ್ಯಗಳ ಜತೆ ಪಠ್ಯೇತರ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳಲು ಮಕ್ಕಳನ್ನು ಪ್ರೇರೇಪಿಸಬೇಕು.

**ಶಾಲೆಯಲ್ಲಿಯ ವಿದ್ಯೆ ಕಲಿಕೆಯಲ್ಲಿ ಸರ್ವತೋಮುಖ ಅಭಿವೃದ್ಧಿ ಅಡಗಿದೆ. ಈ ನಿಟ್ಟಿನಲ್ಲಿ ಪ್ರತಿವರ್ಷ ಮಕ್ಕಳಿಗೆ ವಿವಿಧ ಸ್ಪರ್ಧೆಯ ಮೂಲಕ ಚಿಣ್ಣರ ಹಬ್ಬ ಆಯೋಜಿಸಿ, ಕಲಿಕೆಯೊಂದಿಗೆ ಅವರಲ್ಲಿ ಹುದುಗಿರುವ ಪ್ರತಿಭೆಯನ್ನು ಹೊರತರಲಾಗುವುದು. ಈ ನಿಟ್ಟಿನಲ್ಲಿ ಶಿಕ್ಷಕರು ಉತ್ತಮ ಕಾರ್ಯನಿರ್ವಹಿಸುತ್ತಿದ್ದಾರೆ.**
**-ನಾಗೇಂದ್ರ, ಬೇಲೂರ**

ಹೀಗಾದಾಗ ಮಾತ್ರ ವಿದ್ಯಾರ್ಥಿ ಪರಿಪೂರ್ಣ ವ್ಯಕ್ತಿತ್ವ ಹೊಂದಲು ಸಾಧ್ಯ ಎಂದು ಹೇಳಿದರು.

ನಗರಸಭೆ ಸದಸ್ಯ ಡಾ.ಅಹ್ಮದ ಪಟೇಲ್, ಮಾತನಾಡಿದರು. ಉದ್ಯಮಿ ಅಣವೀರ ಇಂಗಿನಶೆಟ್ಟಿ ಅಧ್ಯಕ್ಷತೆ ವಹಿಸಿದರು. ಅಡತ ಹಾಗೂ ದಾಲ್‌ಮಿಲ್ ಸಂಘದ ಅಧ್ಯಕ್ಷರಾದ ಪ್ರಶಾಂತ ಮರಗೋಳ, ಎಪಿಎಮ್‌ಸಿ ಸದಸ್ಯರಾದ ವಿಶ್ವರಾಧ್ಯ ಬಿರಾಳ, ಉದ್ಯಮಿಗಳಾದ ಶಿವಕುಮಾರ ಇಂಗಿನಶೆಟ್ಟಿ, ಅನಿಲ ಜಾನ್ ,ಜಯಶ್ರೀ ಅಕ್ಕಾ, ವೇದಿಕೆಯಲ್ಲಿದ್ದರು.

## ಪ್ರತ್ಯೇಕ ಹಾಲು ಒಕ್ಕೂಟ ಇನ್ನೂ ದೂರ

• ಉದಯವಾಹಿನಿ ಚಿಕ್ಕಮಗಳೂರು

ಜಿಲ್ಲೆಯ ಹೈನುಗಾರಿಕೆ ಉತ್ತೇಜನಕ್ಕೆ ಪ್ರತ್ಯೇಕ ಹಾಲು ಒಕ್ಕೂಟ ಬೇಕು ಎಂಬ ಕೂಗು ಹಲವು ವರ್ಷಗಳಿಂದ ಇದೆ. ಬಜೆಟ್‌ನಲ್ಲಿ ಘೋಷಣೆಯಾಗಲಿದೆ ಎಂದು ಪ್ರತಿವರ್ಷ ನಿರೀಕ್ಷೆ ಮಾಡಿ ರೈತರು ನಿರಾಶರಾಗುತ್ತಿದ್ದಾರೆ. ಆದರೆ, ಸದ್ಯಕ್ಕೆ ಈ ಬೇಡಿಕೆ ಈಡೇರುವ ಲಕ್ಷಣಗಳು ಕಾಣಿಸುತ್ತಿಲ್ಲ. ಒಂದು ವರ್ಷದಿಂದ ಎನ್‌ಡಿಸಿಬಿ ವರದಿಗಾಗಿ ಸರ್ಕಾರ ಕಾಯುತ್ತಿದೆ. ಕರ್ನಾಟಕ ಹಾಲು ಮಹಾ ಮಂಡಲದ ಅಡಿಯಲ್ಲಿ 16 ಒಕ್ಕೂಟಗಳಿವೆ. ಹಾಸನ, ಚಿಕ್ಕಮಗಳೂರು ಹಾಗೂ ಕೊಡಗು ಸೇರಿ ಮೂರು ಜಿಲ್ಲೆಗಳನ್ನು ಒಳಗೊಂಡು ಹಾಸನ ಹಾಲು ಒಕ್ಕೂಟ ಇದೆ.

1977ರಲ್ಲಿ ಆರಂಭವಾದ ಈ ಒಕ್ಕೂಟವು ದಿನನಿತ್ಯ 15 ಲಕ್ಷ ಲೀಟರ್‌ನಷ್ಟು ಹಾಲು ಸಂಗ್ರಹ ಮಾಡಲಾಗುತ್ತಿದೆ. ಹಾಸನ ಒಕ್ಕೂಟದಿಂದ ಬೇರ್ಪಡಿಸಿ ಜಿಲ್ಲೆಗೆ ಹೊಂದಿಕೊಂಡಿರುವ ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕನ್ನು ಸೇರಿಸಿಕೊಂಡು ಚಿಕ್ಕಮಗಳೂರು ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ರಚಿಸಬೇಕು ಎಂಬುದು ಜಿಲ್ಲೆಯ ರೈತರ ಬೇಡಿಕೆ. 2025ರ ಜನವರಿಯಲ್ಲಿ ಜಿಲ್ಲೆಗೆ ಭೇಟಿ ನೀಡಿದ್ದ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ಅವರಿಗೂ ಜಿಲ್ಲೆಯ ಜನಪ್ರತಿನಿಧಿಗಳು ಮನವಿ ಮಾಡಿದ್ದರು. ಗ್ರಾಮೀಣ ಮಟ್ಟದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಗಳಿಲ್ಲದೆ ತೊಂದರೆಯಾಗಿದೆ. ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಬೇಕು. ಇದರಿಂದ ಹೈನುಗಾರಿಕೆಯನ್ನೇ ನಂಬಿರುವ ರೈತರಿಗೆ ಅನುಕೂಲ ಆಗಲಿದೆ.

ಕಡೂರು, ಚಿಕ್ಕಮಗಳೂರು ಹಾಗೂ ಅರಸೀಕೆರೆ ಒಳಗೊಂಡು ಪ್ರತ್ಯೇಕ ಒಕ್ಕೂಟ ರಚನೆಗೆ ಅವಕಾಶ ಇದೆ. ಇದನ್ನು ಪರಿಗಣಿಸಬೇಕು ಎಂದು ಮನವಿ ಮಾಡಿದ್ದರು. ಆದರೆ, ಜಿಲ್ಲೆಯಲ್ಲಿ ಪ್ರತಿನಿತ್ಯ 1.50 ಲಕ್ಷ ಲೀಟರ್ ಮಾತ್ರ ಹಾಲು ಸಂಗ್ರಹವಾಗುತ್ತಿದೆ. ಅದು ಕೂಡ ಚಿಕ್ಕಮಗಳೂರು, ಕಡೂರು, ಅಜ್ಜಂಪುರ, ತರೀಕೆರೆ ತಾಲ್ಲೂಕಿನ ಬಯಲು ಸೀಮೆಯ ಭಾಗದಲ್ಲಿ ಹೆಚ್ಚು ಹಾಲು ಉತ್ಪಾದನೆಯಾಗುತ್ತಿದೆ. ಮಲೆನಾಡು ಭಾಗದಲ್ಲಿ ಹಾಲು ಉತ್ಪಾದನೆ ಕಡಿಮೆ ಇದೆ. ಸ್ಥಳೀಯ ಮಲೆನಾಡು ಗಿಡ್ಡ ತಳಿಯ ಹಸುಗಳ ಸಾಕಾಣಿಕೆ ಹೆಚ್ಚಾಗಿದ್ದು, ಜರ್ಸಿ ಹಸುಗಳನ್ನು ಸಾಕಾಣಿಕೆ ಮಾಡುವುದು ವಿರಳ. ಅಲ್ಲದೇ ಮಲೆನಾಡಿನಿಂದ ನಿತ್ಯ ಹಾಲು ಸಂಗ್ರಹ, ಸಾಗಣೆ ಬಗ್ಗೆ ಕೆಎಂಎಫ್ ಆಲೋಚನೆ ನಡೆಸಿದೆ.

## ಗರ್ಭಕೋಶದ ಕ್ಯಾನ್ಸರ್ ಸನಿಯಂತ್ರಣಕ್ಕೆ ಹೊಸ ಲಸಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿಕ್ಕಮಗಳೂರು

ಗರ್ಭಕೋಶದ ಕ್ಯಾನ್ಸರ್ ನಿಯಂತ್ರಣಕ್ಕೆ ಹೊಸದಾಗಿ ಲಸಿಕೆ ಕಂಡು ಹಿಡಿಯಲಾಗಿದೆ. ವೈದ್ಯರ ಸಲಹೆ ಪಡೆದು 9 ರಿಂದ 12 ವರ್ಷದೊಳಗಿನ ಹೆಣ್ಣು ಮಕ್ಕಳು ಈ ಲಸಿಕೆ ಪಡೆಯಬೇಕು ಎಂದು ಎಂದು ಮಲ್ಲೇಗೌಡ ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಚಂದ್ರಶೇಖರ ಸಾಲಿಮಠ ತಿಳಿಸಿದರು.

ಅಖಿಲ ಭಾರತ ತೇರಾಪಂಥ್ ಮಹಿಳಾ ಮಂಡಳದ ಚಿಕ್ಕಮಗಳೂರು ಘಟಕದಿಂದ ನಗರದ ತೇರಾಪಂಥ್ ಸಭಾ ಭವನದಲ್ಲಿ ವಿಶ್ವ ಕ್ಯಾನ್ಸರ್ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಕ್ಯಾನ್ಸರ್ ತಪಾಸಣಾ ಶಿಬಿರದಲ್ಲಿ ಅವರು ಮಾತನಾಡಿದರು. ಕೇವಲ ಎರಡು ಡೋಸ್ ಲಸಿಕೆ ಪಡೆದರೆ ಸಾಕಾಗುತ್ತದೆ. 9ರಿಂದ 12ವರ್ಷದೊಳಗೆ ಲಸಿಕೆ ಪಡೆಯಲಾಗದಿದ್ದರೆ ಯುವತಿಯರು 15 ವರ್ಷದ ನಂತರವೂ ಲಸಿಕೆ ಪಡೆಯಬಹುದು. ಆದರೆ, ಅವರು ಹೆಚ್ಚುವರಿಯಾಗಿ 2 ಡೋಸ್ ಲಸಿಕೆ ಪಡೆಯಬೇಕಾಗುತ್ತದೆ. ಇದರಿಂದ ಲಾಭ ಹೆಚ್ಚು ಎಂದು ಹೇಳಿದರು.

40 ರಿಂದ 45 ವರ್ಷ ವಯೋಮಾನದ ಮಹಿಳೆಯರಲ್ಲಿ ಹಾರ್ಮೋನ್ ವ್ಯತ್ಯಾಸವಾಗುವ ಕಾರಣ ಕಡ್ಡಾಯವಾಗಿ ವರ್ಷಕ್ಕೊಮ್ಮೆ ವೈದ್ಯಕೀಯ ಪರೀಕ್ಷೆ ಮಾಡಿಸಿಕೊಳ್ಳುವುದು ಒಳ್ಳೆಯದು. ಸಂಸ್ಕರಿಸಿದ ಆಹಾರಗಳಿಂದ ದೇಹದಲ್ಲಿ ಬೇರೆ ಬೇರೆ ಸಮಸ್ಯೆಗಳು ಕಾಣಿಸಿಕೊಂಡು ಕ್ಯಾನ್ಸರ್ ಆಗಿ ಪರಿಣಮಿಸಬಹುದು. ಶ್ರಮ ರಹಿತ ಜೀವನ ಶೈಲಿಯಿಂದಲೂ ಆರೋಗ್ಯ ಸಮಸ್ಯೆ ಉಂಟಾಗುತ್ತಿದೆ ಎಂದರು. ತೇರಾಪಂಥ್ ಸಭಾ ಅಧ್ಯಕ್ಷ ಮಹೇಂದ್ರ ಡೋಶಿ ಮಾತನಾಡಿ, ಕ್ಯಾನ್ಸರ್‌ನಿಂದ ಮುಕ್ತರನ್ನಾಗಿಸುವ ಉದ್ದೇಶದಿಂದ ಶಿಬಿರ ಆಯೋಜಿಸಲಾಗಿದೆ ಎಂದರು. ಡಾ.ಪಾಂಡುರಂಗ, ಡಾ.ಸೌಮ್ಯ, ತೇರಾಪಂಥ್ ಮಹಿಳಾ ಮಂಡಲ ಅಧ್ಯಕ್ಷೆ ಸಂತೋಷ್ ಗಾದಿಯಾ, ಉಪಾಧ್ಯಕ್ಷರಾದ ನರಿತಾ ಗಾದಿಯಾ, ಲಲಿತಾ ಡೋಸಿ, ಶೋಭಾ ಗಾದಿಯಾ ಭಾಗವಹಿಸಿದ್ದರು.

## ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಳಕ್ಕೆ ಕೈಜೋಡಿಸಿದ ಗ್ರಾ.ಪಂ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮುಂಡಗೋಡ

**ತಾಲ್ಲೂಕಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಿಸುವ ಉದ್ದೇಶದಿಂದ ಶಿಕ್ಷಣ ಇಲಾಖೆಯೊಂದಿಗೆ ಕೈಜೋಡಿಸಿ, ಮಕ್ಕಳ ಓದಿಗೆ ಪಾಲಕರು ಸಹಕರಿಸುವಂತೆ ಮನವಿ ಮಾಡಲಾಗುತ್ತಿದೆ. ಪ್ರತಿದಿನ ಎರಡು ಗಂಟೆ ಮೊಬೈಲ್ ಬಳಕೆಯ ನಿಯಂತ್ರಣ, ಟಿವಿ ಬಂದ್ ಮಾಡಿ ಮಕ್ಕಳಿಗೆ ಓದುವಂತ ವಾತಾವರಣ ನಿರ್ಮಿಸುವಂತೆ ಜಾಗೃತಿ ಮೂಡಿಸಲಾಗುತ್ತಿದೆ. ಸಭೆ, ಸಮಾರಂಭಗಳು ಇದ್ದರೇ, ನಿಗದಿತ ಅವಧಿಗೆ ಧ್ವನಿವರ್ದಕ ಬಳಸಿ, ಮಕ್ಕಳ ಓದಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಕ್ರಮ ಕೈಗೊಳ್ಳುವಂತೆ ಸಾರ್ವಜನಿಕರಲ್ಲಿ ಧ್ವನಿ ವರ್ದಕದ ಮೂಲಕ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಸಾರ್ವಜನಿಕರು ಸಹಕರಿಸಬೇಕು. -ಟಿ.ವೈ.ದಾಸನಕೊಪ್ಪ ತಾಲ್ಲೂಕು ಪಂಚಾಯಿತಿ ಇಒ**

ತಾಲ್ಲೂಕಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಿಸುವ ನಿಟ್ಟಿನಲ್ಲಿ, ಶಿಕ್ಷಣ ಇಲಾಖೆಯು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ವಿನೂತನ ಕ್ರಮಗಳನ್ನು ಜಾರಿ ಮಾಡಿದೆ. ಪ್ರತಿದಿನ ರಾತ್ರಿ 7ಗಂಟೆಯಿಂದ 9ಗಂಟೆವರೆಗೆ ಪಾಲಕರು ಮನೆಯಲ್ಲಿ ಟಿವಿ ಹಾಗೂ ಮೊಬೈಲ್ ಬಳಸದಂತೆ ಧ್ವನಿವರ್ಧಕದ ಮೂಲಕ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ತಿಳಿಸುವ ಕೆಲಸವನ್ನು ತಾಲ್ಲೂಕು ಆಡಳಿತ ಕೈಗೊಂಡಿದೆ.

1ರಿಂದ 9ನೆ ತರಗತಿ ಹಾಗೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ವಾರ್ಷಿಕ ಪರೀಕ್ಷೆ ಸಮಯ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ, ಮಕ್ಕಳಲ್ಲಿ ಓದುವ ಹವ್ಯಾಸವನ್ನು ಬಲಗೊಳಿಸಲು ಹಾಗೂ ಸಮಯ ವ್ಯರ್ಥ ಮಾಡದೇ ಮನೆಯಲ್ಲಿ ಕುಳಿತು ಓದುವಂತೆ ನೆರವಾಗಲು, ಪಾಲಕರು, ಪ್ರತಿದಿನ ರಾತ್ರಿ ಎರಡು ತಾಸುಗಳವರೆಗೆ ಟಿ.ವಿ ಬಂದ್ ಮಾಡುವುದು ಹಾಗೂ ಮೊಬೈಲ್ ಬಳಕೆಯನ್ನು ಮನೆಯಲ್ಲಿ ಮಾಡದಂತೆ ಮನವಿ ಮಾಡಲಾಗುತ್ತಿದೆ. ಮಕ್ಕಳೂ ಸಹ ಮೊಬೈಲ್ ಗೀಳಿಗೆ ಅಂಟಿಕೊಳ್ಳದಂತೆ, ಎಚ್ಚರಿಕೆ ವಹಿಸಿ, ಅವರಿಗೆ ಓದಲು ಪೂರಕ ವಾತಾವರಣ ನಿರ್ಮಿಸುವಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.

ಎಸ್‌ಎಸ್‌ಎಲ್‌ಸಿ ಮಕ್ಕಳ ಫಲಿತಾಂಶ ಹೆಚ್ಚಳಕ್ಕೆ ವಿನೂತನ ರೀತಿಯಲ್ಲಿ ಪ್ರೇರಣೆ ನೀಡುತ್ತಿರುವ ಗ್ರಾಮ ಪಂಚಾಯಿತಿಯವರ ಕಾರ್ಯಕ್ಕೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಧ್ವನಿವರ್ದಕದ ಮೂಲಕ ಜಾಗೃತಿ ಮೂಡಿಸುತ್ತಿರುವುದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.

ಪರೀಕ್ಷೆಗಳು ಹತ್ತಿರವಾಗುತ್ತಿದ್ದಂತೆ ಮೊಬೈಲ್ ಮೂಲಕ ಮನೆಪಾಠದ ಅಭ್ಯಾಸಗಳನ್ನು ಹೆಚ್ಚೆಚ್ಚು ನೀಡುತ್ತಿರುವುದಕ್ಕೆ ಶಿಕ್ಷಕರು ಕಡಿವಾಣ ಹಾಕಬೇಕು. ಆದಷ್ಟು, ತರಗತಿಯಲ್ಲಿಯೇ ಬರೆದುಕೊಳ್ಳುವಂತೆ ಮಾಡಬೇಕು. ಇಲ್ಲವಾದರೆ, ಮನೆಪಾಠದ ನೆಪ ಮಾಡಿಯಾದರೂ, ಮಕ್ಕಳು ಮೊಬೈಲ್ ಹಿಡಿದುಕೊಂಡು ಕಾಲ ಕಳೆಯುತ್ತಾರೆ ಎಂದು ಹಲವು ಪಾಲಕರು ಹೇಳುತ್ತಾರೆ.

## ರೂ.1.13 ಕೋಟಿ ಸರ್ಕಾರಕ್ಕೆ ಪಾವತಿಸಲು ಆದೇಶ

• ಉದಯವಾಹಿನಿ ಶಿಕಾರಿಪುರ

ತಾಲ್ಲೂಕಿನ ಅಮಟೆಕೊಪ್ಪ ಗ್ರಾಮ ಪಂಚಾಯಿತಿಯಲ್ಲಿ ಮನರೇಗಾ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ 195 ಕಾಮಗಾರಿಗಳನ್ನು ಅನುಷ್ಠಾನಕ್ಕೆ ತಂದಿರುವ ಕಾರಣಕ್ಕೆ ಕಾಮಗಾರಿ ಸಮಯದಲ್ಲಿದ್ದ ಪ್ರಭಾರ ಪಿಡಿಒ ಆಗಿದ್ದ ಗ್ರೇಡ್-1 ಕಾರ್ಯದರ್ಶಿ ಹಾಗೂ ನಾಲ್ವರು ಅಧ್ಯಕ್ಷರು ಸೇರಿಕೊಂಡು ಒಟ್ಟು ರೂ. 1.13 ಕೋಟಿ ಹಣವನ್ನು ಸರ್ಕಾರಕ್ಕೆ ಪಾವತಿಸಬೇಕು ಎಂದು ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಆದೇಶಿಸಿದ್ದಾರೆ.

ಮನರೇಗಾ ಯೋಜನೆ ಅಡಿ 2022ರಿಂದ 2025ರವರೆಗೆ ಮೂರು ವರ್ಷಗಳಲ್ಲಿ ಅಮಟೆಕೊಪ್ಪ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 417 ವೈಯಕ್ತಿಕ ಕಾಮಗಾರಿಗಳನ್ನು ಅನುಷ್ಠಾನಕ್ಕೆ ತರಲಾಗಿದ್ದು, ಅದರಲ್ಲಿ 195 ಕಾಮಗಾರಿಗಳಿಗೆ ಮನರೇಗಾ ಯೋಜನೆ ಮಾರ್ಗಸೂಚಿ ಪ್ರಕಾರ ಕ್ರಿಯಾ ಯೋಜನೆ ಸಿದ್ಧಪಡಿಸಿ ಅನುಮೋದನೆ ಪಡೆಯದೆ ಕೆಲಸ ಮಾಡಲಾಗಿದೆ ಎಂದು ಆ ಸಮಯದಲ್ಲಿದ್ದ ಪಿಡಿಒ ಶಿವಪ್ಪ ಎಚ್ ಮತ್ತು ನಾಲ್ವರು ಅಧ್ಯಕ್ಷೆಯರಾದ ಮಂಜಮ್ಮ ಶಿವಪ್ಪ, ಮಂಜುಳಾ ಸಿದ್ದಪ್ಪ, ಶಿಲ್ಪಾ ಸಿ ಚಂದ್ರಶೇಖರ್ ಹಾಗೂ ಸುಧಾ ಸಿ.ಆರ್. ಪ್ರಭು ಅವರ ವಿರುದ್ಧ ಆರೋಪ ಕೇಳಿಬಂದಿದ್ದು, ನಾಲ್ವರು ಅಧ್ಯಕ್ಷರು ರೂ. 56.08 ಲಕ್ಷ ಹಾಗೂ ಗ್ರೇಡ್- 1 ಕಾರ್ಯದರ್ಶಿ ರೂ. 56.08 ಲಕ್ಷ ಹಾಗೂ ಭೌತಿಕವಾಗಿ ಕಾಮಗಾರಿ ಅನುಷ್ಠಾನ ಮಾಡದಿರುವ ಆರೋಪದ ಮೇಲೆ ಹೆಚ್ಚುವರಿಯಾಗಿ ರೂ. 84, 688 ಪಾವತಿಸುವಂತೆ ಆದೇಶ ನೀಡಲಾಗಿದೆ.


ಉದಯವಾಹಿನಿ ಚಿತ್ರ

ನರೇಗಾ ಯೋಜನೆಗಳಿಗೆ ಕ್ರಿಯಾ ಯೋಜನೆ ಅನುಮೋದನೆ ಪಡೆಯದೆ ಇದ್ದರೆ ಆ ಅವಧಿಯ ಅಧ್ಯಕ್ಷರು, ಪಿಡಿಒ ತಲಾ ಶೇ 50ರಷ್ಟು ಹಣವನ್ನು ಸರ್ಕಾರಕ್ಕೆ ಪಾವತಿಸಬೇಕು ಎನ್ನುವ ನಿಯಮ ಇದೆ. ಅದರ ಪ್ರಕಾರ ವಸೂಲಾತಿಗೆ ಆದೇಶ ನೀಡಲಾಗಿದೆ. ಅನುಮತಿ ಪಡೆಯದ ಮನರೇಗಾದ 195 ಕಾಮಗಾರಿಯಲ್ಲಿ 180ಕ್ಕೂ ಹೆಚ್ಚು ಅಡಿಕೆ ತೋಟ ಅಭಿವೃದ್ಧಿಗೇ ನೀಡಲಾಗಿದ್ದು, ಇನ್ನುಳಿದವು ಕೊಟ್ಟಿಗೆ ನಿರ್ಮಾಣ ಸೇರಿ ಇತರೆ ಕಾಮಗಾರಿಗಳದ್ದಾಗಿದೆ. ಜನರಿಂದ ಹಣ ಪಡೆದು ಹಳೆಯ ತೋಟಗಳಿಗೂ ಅನುದಾನ ನೀಡಲಾಗಿದೆ. ಪ್ರಕರಣದಲ್ಲಿ ಭಾಗಿಯಾಗಿರುವ ಗ್ರೇಡ್-1 ಕಾರ್ಯದರ್ಶಿ ಈ ಹಿಂದೆ ಲೋಕಾಯುಕ್ತ ಪ್ರಕರಣದಲ್ಲಿ ಅಮಾನತುಗೊಂಡಿದ್ದರು. ಪುನಃ ಇದೇ ತಾಲ್ಲೂಕಿನಲ್ಲಿ ಅವರು ಸೇವೆ ಸಲ್ಲಿಸುತ್ತಿದ್ದಾರೆ. ಅನಕ್ಷರಸ್ಥ ಅಧ್ಯಕ್ಷರಿಗೆ ಮಾಹಿತಿ ನೀಡದೆ ಪ್ರಕರಣ ನಡೆದಿರಬಹುದು' ಎನ್ನುವುದು ಗ್ರಾಮದ ಹಲವರ ಆರೋಪವಾಗಿದೆ.


# ಹೆಚ್ಚುವರಿ ಅನುದಾನಕ್ಕೆ ನಿಂತ ಉಳಗಾ ಸೇತುವೆ: ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಕೆ

● 8 ವರ್ಷ ಕಳೆದರೂ ಮುಗಿಯದ ಕಾಮಗಾರಿ: ಸುತ್ತು ಬಳಸಿ ಸಂಚರಿಸುವ ಪಡಿಪಾಟಲು

• ಉದಯವಾಹಿನಿ ಕಾರವಾರ

ಕಾಮಗಾರಿ ಆರಂಭಗೊಂಡು 8 ವರ್ಷ ಕಳೆದರೂ ತಾಲ್ಲೂಕಿನ ಉಳಗಾ-ಕೆರವಡಿ ಸೇತುವೆ ಕಾಮಗಾರಿ ಮುಗಿದಿಲ್ಲ. ಒಂದೆಡೆ ಸುಲಭ ಸಂಪರ್ಕಕ್ಕೆ ಸೇತುವೆ ಸಂಚಾರ ಮುಕ್ತಗೊಳ್ಳಬಹುದು ಎಂಬ ನಿರೀಕ್ಷೆಯಲ್ಲಿ ಗ್ರಾಮಸ್ಥರಿದ್ದರೆ, ಸರ್ಕಾರದಿಂದ ಹೆಚ್ಚುವರಿ ಅನುದಾನ ಬಿಡುಗಡೆಯ ನಿರೀಕ್ಷೆಯಲ್ಲಿ ಗುತ್ತಿಗೆ ಕಂಪನಿ ಕಾದು ಕುಳಿತಿದೆ.

2018ರಲ್ಲಿ ಉಳಗಾ-ಕೆರವಡಿ ಗ್ರಾಮಗಳನ್ನು ಸಂಪರ್ಕಿಸಲು ಅನುಕೂಲ ಆಗುವಂತೆ ಸೇತುವೆ ನಿರ್ಮಿಸಲು ರಾಜ್ಯ ಸರ್ಕಾರ ರೂ.25 ಕೋಟಿ ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿತ್ತು. ಕಾಮಗಾರಿ ಆರಂಭಗೊಂಡಿತಾದರೂ ಅರ್ಧಕ್ಕೆ ಕೆಲಸ ನಿಂತು ವರ್ಷಗಳೇ ಕಳೆದಿದೆ. ಬರೋಬ್ಬರಿ ಆರು ವರ್ಷಗಳ ಬಳಿಕ ಕಳೆದ ವರ್ಷ ಕಾಮಗಾರಿ ಪುನರಾರಂಭಗೊಂಡಿತಾದರೂ, ಕೆಲವೇ ದಿನಗಳಲ್ಲಿ ಪುನಃ ಸ್ಥಗಿತಗೊಂಡಿದೆ. ಸೇತುವೆ ನಿರ್ಮಾಣಕ್ಕೆ ಒತ್ತಾಯಿಸಿ ಗ್ರಾಮದ ಹಿರಿಯರು ಹಲವು ವರ್ಷಗಳಿಂದ ಹೋರಾಟ ನಡೆಸಿದ್ದರು. ಎಂಟು ವರ್ಷಗಳ ಹಿಂದೆ ಸೇತುವೆ ಮಂಜೂರಾದಾಗ ಖುಷಿಪಟ್ಟಿದ್ದರು. ಆದರೆ, ಈವರೆಗೂ ಕಾಮಗಾರಿ ಮುಗಿದಿಲ್ಲ. ಕಾಳಿ ನದಿ ದಾಟಲು ಬಾರ್ಜ್ ಬಳಸಿಯೇ ಸಾಗಬೇಕಾಗುತ್ತಿದೆ. ದೊಡ್ಡ ವಾಹನ ಸಾಗಲು ಸಾಧ್ಯವಾಗುತ್ತಿಲ್ಲ. ರಾತ್ರಿ ವೇಳೆ ನದಿಯ ಎರಡು ಬದಿಯ ಗ್ರಾಮಸ್ಥರು ನದಿಯ ಇನ್ನೊಂದು ಬದಿ ತಲುಪಲು 25ರಿಂದ 30 ಕಿ.ಮೀ ಸುತ್ತು ಬಳಸಿ ಸಾಗಬೇಕಾಗುತ್ತಿದೆ ಎಂದು ಬೇಳೂರು ಗ್ರಾಮಸ್ಥ ಸೂರಜ್ ನಾಯ್ಕ ಸಮಸ್ಯೆ ವಿವರಿಸಿದರು.


ಉದಯವಾಹಿನಿ ಚಿತ್ರ

**2018ರಲ್ಲಿ ಕೆರವಡಿ-ಉಳಗಾ ಸೇರಿದಂತೆ ಜಿಲ್ಲೆಯ 6 ಸೇತುವೆಗಳ ನಿರ್ಮಾಣಕ್ಕೆ ಏಕಕಾಲಕ್ಕೆ ಮಂಜೂರಾತಿ ಸಿಕ್ಕಿತ್ತು. ಉಳಿದ ಸೇತುವೆ ಕಾಮಗಾರಿಗಳು ಬಹುಪಾಲು ಮುಗಿದಿದ್ದು ಸಣ್ಣಪುಟ್ಟ ಕೆಲಸಗಳು ಉಳಿದುಕೊಂಡಿವೆ. ಕೆರವಡಿ-ಉಳಗಾ ಸೇತುವೆಗೆ ರೂ.6 ಕೋಟಿ ಸೇರಿದಂತೆ 6 ಸೇತುವೆ ಸೇರಿ ಹೆಚ್ಚುವರಿ ರೂ.20 ಕೋಟಿಯಷ್ಟು ಅನುದಾನಕ್ಕೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಕೆಯಾಗಿದೆ. ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆ ಕಂಪನಿಗೆ ಸೂಚನೆ ನೀಡಿದ್ದರೂ ಅನುದಾನಕ್ಕೆ ಮಂಜೂರಾತಿ ಸಿಗವವರೆಗೆ ಕೆಲಸ ಕೈಗೆತ್ತಿಕೊಳ್ಳಲು ಒಪ್ಪದ ಹಿನ್ನೆಲೆಯಲ್ಲಿ ವಿಳಂಬವಾಗಿದೆ ಎಂದು ಕೆಆರ್‌ಡಿಸಿಎಲ್ ಕಾರ್ಯನಿರ್ವಾಹಕ ಎಂಜಿನಿಯರ್ ರಿಜ್ವಾನ್ ಸೊಪ್ಪಿನ ತಿಳಿಸಿದರು.**

**ಹೆಚ್ಚುವರಿ ಅನುದಾನಕ್ಕೆ ಬೇಡಿಕೆ**

**ಹಲವು ವರ್ಷಗಳಿಂದ ಹೋರಾಟ**

ಸೇತುವೆ ನಿರ್ಮಾಣವಾದರೆ ಉಳಗಾ, ಹಳಗಾ ಸೇರಿದಂತೆ ಹತ್ತಾರು ಗ್ರಾಮಗಳ ಯುವಕರಿಗೆ ಕೈಗಾಕ್ಕೆ ಸಾಗಲು ಸುಲಭವಾಗಲಿದೆ. ಕೆರವಡಿ, ದೇವಳಮಕ್ಕಿ ಭಾಗದವರಿಗೆ ಜೊಯಿಡಾ ಭಾಗಕ್ಕೆ ಸಾಗಲು ದೂರ ಕಡಿಮೆ ಆಗುತ್ತದೆ. ವಿದ್ಯಾರ್ಥಿಗಳು, ಉದ್ಯೋಗಿಗಳಿಗೆ ಇದು ಹೆಚ್ಚು ಅನುಕೂಲವಾಗಲಿದೆ' ಎಂದರು. ಸೇತುವೆ ಕಾಮಗಾರಿ ಪೂರ್ಣಗೊಳಿಸಲು ಕಳೆದ ವರ್ಷ ಕೆಲಸ ಸಾಗಿತ್ತು. 7 ಕಂಬಗಳ ನಿರ್ಮಾಣ ಪೂರ್ಣಗೊಂಡಿದೆ. ಮೂರು ಕಂಬಗಳ ಮೇಲೆ 9 ಅಡ್ಡಲಾಗಿ ಕಾಂಕ್ರೀಟ್ ತೊಲೆಗಳನ್ನು ಅಳವಡಿಸಿ, ಸ್ಲ್ಯಾಬ್ ನಿರ್ಮಿಸುವ ಕೆಲಸ ಮಾತ್ರ ಉಳಿದಿದೆ. ಅವಧಿಗೆ ಮುನ್ನವೇ ಮುಂಗಾರು ಆರಂಭಗೊಂಡಿದ್ದರಿಂದ ಈ ಕೆಲಸ ಸ್ಥಗಿತಗೊಂಡಿತ್ತು. ಬಳಿಕ ತಾಂತ್ರಿಕ ಅಡಚಣೆಗಳು ಎದುರಾಗಿ ಕೆಲಸ ಸ್ಥಗಿತಗೊಂಡಿತು ಎಂದು ಸೇತುವೆ ನಿರ್ಮಾಣದ ಜವಾಬ್ದಾರಿ ಹೊತ್ತಿರುವ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ (ಕೆಆರ್‌ಡಿಸಿಎಲ್) ಕಾರ್ಯನಿರ್ವಾಹಕ ಎಂಜಿನಿಯರ್ ರಿಜ್ವಾನ್ ಸೊಪ್ಪಿನ ಪ್ರತಿಕ್ರಿಯಿಸಿದರು.

**ಕೆರವಡಿ-ಉಳಗಾ ಸೇತುವೆ ಕಾಮಗಾರಿ ವಿಳಂಬವಾಗಲು ಈ ಹಿಂದಿನ ಬಿಜೆಪಿ ಸರ್ಕಾರ ನೇರ ಹೊಣೆ. ನಾನೇ ಮಂಜೂರು ಮಾಡಿಸಿದ್ದ ಸೇತುವೆಗೆ ಈಗ ಹೆಚ್ಚುವರಿ ಅನುದಾನ ಮಂಜೂರು ಮಾಡಿಸಿಕೊಂಡು ಪೂರ್ಣಗೊಳಿಸುವೆ.**
**-ಸತೀಶ ಸೈಲ್, ಶಾಸಕ**

---

ಉದಯವಾಹಿನಿ

## ಪ್ರಾದೇಶಿಕ

ಭಾನುವಾರ
08 ಫೆಬ್ರವರಿ 2026

05

## ಮಿನಿ ನ್ಯೂಸ್

### ಬ್ಯಾಂಕಿನಿಂದ 5 ಲಕ್ಷ ರೂ.ಡ್ರಾ ಮಾಡಿಕೊಂಡು ಸ್ಟಾಫ್‌ನರ್ಸ್‌ಗೆ ವಂಚನೆ

• ಉದಯವಾಹಿನಿ ಕಲಬುರಗಿ

ಅಪರಿಚಿತ ವ್ಯಕ್ತಿಯೊಬ್ಬ ಬ್ಯಾಂಕಿನಿಂದ 5 ಲಕ್ಷ ರೂ.ಡ್ರಾ ಮಾಡಿಕೊಂಡು ಇಲ್ಲಿನ ಜಯದೇವ ಆಸ್ಪತ್ರೆಯ ಸ್ಟಾಫ್ ನರ್ಸ್ ಒಬ್ಬರಿಗೆ ವಂಚನೆ ಮಾಡಿರುವ ಘಟನೆ ಬೆಳಕಿಗೆ ಬಂದಿದೆ. ಜಯದೇವ ಆಸ್ಪತ್ರೆಯಲ್ಲಿ ಸ್ಟಾಫ್‌ನರ್ಸ್ ಆಗಿರುವ ಪದ್ಮಾ ಗೌತಮ್ ಮಂದೇವಾಲ್ ಎಂಬುವವರೆ ವಂಚನೆಗೆ ಒಳಗಾಗಿದ್ದು, ಅವರು ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಜಯದೇವ ಆಸ್ಪತ್ರೆಯಲ್ಲಿ ಸ್ಟಾಫ್‌ನರ್ಸ್ ಆಗಿರುವ ಪದ್ಮಾ ಮಂದೇವಾಲ್ ಅವರು ಲಕ್ಷ್ಮೀ ನಗರದ ನಿವಾಸಿಯಾಗಿದ್ದು, ಗಂಜ್ ಏರಿಯಾದಲ್ಲಿರುವ ಕೆನರಾ ಬ್ಯಾಂಕ್‌ನಲ್ಲಿ ಇವರ ಸಂಬಳ ಜಮೆಯಾಗುತ್ತದೆ. ಇವರ ಬ್ಯಾಂಕ್ ಖಾತೆಯಲ್ಲಿ 5,28,539 ರೂ.ಜಮೆ ಇದ್ದವೆನ್ನಲಾಗಿದ್ದು, ಜ.12 ರಂದು ಇವರ ಬ್ಯಾಂಕ್ ಖಾತೆಯಿಂದ 5 ಲಕ್ಷ ರೂ.ಡ್ರಾ ಆಗಿರುವುದು ಅವರ ಗಮನಕ್ಕೆ ಬಂದು ಬ್ಯಾಂಕಿಗೆ ಹೋಗಿ ವಿಚಾರಿಸಿದ್ದಾರೆ. ಆಗ ಬ್ಯಾಂಕ್ ಸಿಬ್ಬಂದಿ ಮುಖಕ್ಕೆ ಮಾಸ್ಕ್ ಧರಿಸಿದ್ದ 25 ರಿಂದ 30 ವರ್ಷ ವಯಸ್ಸಿನ ವ್ಯಕ್ತಿಯೊಬ್ಬ ಬಂದಿದ್ದು, 5 ಲಕ್ಷ ಹಣ ಮೌಲ್ಯ ಬರೆದ ಅದರ ಕೆಳಗಡೆ ಮತ್ತು ಹಿಂಭಾಗದಲ್ಲಿ ರುಜು ಮಾಡಿದ ಚೆಕ್ ಕೊಟ್ಟಿದ್ದು, ಅದನ್ನು ಪರಿಶೀಲಿಸಿದಾಗ ಖಾತೆಯ ದಾಖಲಾತಿಯಲ್ಲಿರುವ ರುಜು ಮತ್ತು ಚೆಕ್ ಮೇಲೆ ಇರುವ ರುಜು ಹೊಂದಾಣಿಕೆಯಾಗಿದ್ದರಿಂದ ಆತನ ಆಧಾರ್ ಕಾರ್ಡ್ ಮತ್ತು ಮೊಬೈಲ್ ನಂಬರ್ ಪಡೆದು ಹಣ ಡ್ರಾ ಮಾಡಿಕೊಡಲಾಗಿದೆ ಎಂದು ತಿಳಿಸಿದ್ದಾರೆ.

### ಬೀದಿ ನಾಯಿಗಳ ನಿಯಂತ್ರಣಕ್ಕೆ ಎಸ್. ಯು.ಸಿ.ಐ ನಿಯೋಗ ಮನವಿ

• ಉದಯವಾಹಿನಿ ವಿಜಯಪುರ

ನಗರದಲ್ಲಿ ಕಣ್ಣು ನೊಣ ಹಾಗೂ ಬೀದಿ ನಾಯಿಗಳ ನಿಯಂತ್ರಣಕ್ಕೆ ಒತ್ತಾಯಿಸಿ ಮಹಾನಗರ ಪಾಲಿಕೆ ಆಯುಕ್ತರಿಗೆ ಎಸ್‌ಯುಸಿಐ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಸಮಿತಿಯಿಂದ ಮನವಿ ಪತ್ರ ಸಲ್ಲಿಸಲಾಯಿತು. ಪಾಲಿಕೆ ಅಭಿವೃದ್ಧಿ ವಿಭಾಗದ ಉಪ ಆಯುಕ್ತರು ಮನವಿ ಸ್ವೀಕರಿಸಿ, ಈಗಾಗಲೇ ಬೀದಿ ನಾಯಿಗಳಿಗೆ ಸಂತಾನೋತ್ಪತ್ತಿ ಹರಣ ಶಸ್ತ್ರ ಚಿಕಿತ್ಸೆ ಸುಮಾರು 8000 ನಾಯಿಗಳಿಗೆ ಏಜೆನ್ಸಿ ಮೂಲಕ ಮಾಡಿಸಲಾಗಿದೆ.

ಇನ್ನುಳಿದ ನಾಯಿಗಳಿಗೆ ಈ ತಿಂಗಳ ಒಳಗಾಗಿ ಟೆಂಡರ್ ಕರೆದು ಶಸ್ತ್ರ ಚಿಕಿತ್ಸೆಗೆ ಕ್ರಮ ಕೈಗೂಳ್ಳಲಾಗುವುದು. ಬಿಡಾಡಿ ದನಗಳನ್ನು ರಸ್ತೆ ಮೇಲೆ ಬರದ ಹಾಗೆ ಕ್ರಮ ಕೈಗೊಳ್ಳಲಾಗುವುದು. ಕಳೆದ 15 ದಿನಗಳಿಂದ ಸಾರ್ವಜನಿಕರಿಗೆ, ಶಾಲಾ , ಕಾಲೇಜ ವಿದ್ಯಾರ್ಥಿಗಳ, ಮಕ್ಕಳಿಗೂ ಪೀಡಿಸುತ್ತಿರುವ ಕಣ್ಣು ನೊಣಗಳ ಹಾವಳಿ ಕುರಿತು ಚರ್ಚಿಸಲಾಯಿತು. ಈ ಸಮಸ್ಯೆಯನ್ನು ಸಂಬಂಧದಪಟ್ಟ ಆರೋಗ್ಯಾಧಿಕಾರಿಗಳಿಗೆ ಫಾಗಿಂಗ್ ಮಾಡಿ ನಿಯಂತ್ರಿಸಲು ಸೂಚಿಸುತ್ತೇನೆ, ಎಂದು ಭರವಸೆ ನೀಡಿದರು.

### ದೇಶ ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಪ್ರಮುಖ

• ಉದಯವಾಹಿನಿ ಕಿತ್ತೂರು ಚನ್ನಮ್ಮ

ಬಾಲ್ಯ ಹಂತದಲ್ಲಿ ಶಿಕ್ಷಣದ ಗುಣಮಟ್ಟವನ್ನು ವೃದ್ದಿಸುವುದು ಬಹಳ ಅವಶ್ಯ. ದೇಶ ಸಮಾಜದ ಅಭಿವೃದ್ಧಿ ಹೊಂದಬೇಕಾದರೆ ಇಂದು ಶಿಕ್ಷಣವೇ ಪ್ರಮುಖವಾಗಿದೆ ಎಂದು ಶಾಸಕ ಬಾಬಾಸಾಹೇಬ ಪಾಟೀಲ ಹೇಳಿದರು. ಜಿಪಂ ಬೆಳಗಾವಿ, ಶಾಲಾ ಶಿಕ್ಷಣ ಇಲಾಖೆ ಬೆಳಗಾವಿ ದಕ್ಷಿಣ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಚ.ಕಿತ್ತೂರು ಇವರುಗಳ ಸಂಯುಕ್ತ ಆಶ್ರಯಲ್ಲಿ ರಾಣಿ ಚನ್ನಮ್ಮ ಸ್ಮಾರಕ ಭವನಲ್ಲಿ ಪರೀಕ್ಷೆ ಒಂದು ಹಬ್ಬ ಸಂಭ್ರಮಿಸಿ ಪಾಲಕರ ಚಿತ್ತ ಶತಕದತ್ತ ಎಂಬ ಘೋಷಣೆಯಡಿ ಹಮ್ಮಿಕೊಂಡಿದ್ದ ತಾಯಂದಿರ, ಪಾಲಕರ-ಪೋಷಕರ ಸಭೆ ಉದ್ಘಾಟಿಸಿ ದೀಪ ಬೆಳಗಿಸಿ ಅವರು ಮಾತನಾಡಿದರು.

ಶಿಕ್ಷಕ ಕೆ.ಜಿಗಡಾದ ರೈತಗೀತೆ ಹಾಡಿದರು. ತಹಶೀಲ್ದಾರ ಕಲ್ಲನಗೌಡ ಪಾಟೀಲ, ಸಿಪಿಐ ಶಿವಾನಂದ ಗುಡಗನಟ್ಟಿ, ಪತ್ರಕರ್ತ ಪ್ರದೀಪ ಮೇಲಿನಮನಿ, ಅವರು ಸೇರಿದಂತೆ ಹಲವರು ಮಾತನಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ವೈ. ತುಬಾಕದ ಸ್ವಾಗತಿಸಿದರು. ಶಿಕ್ಷಕ ಸೋಮಶೇಖರ ಹಲಸಗಿ ವಂದಿಸಿದರು. ಶಿಕ್ಷಕಿ ಪೂಜೇರಿ ಮೇಡಂ ನಿರೂಪಿಸಿದರು.

### ಬೋಧನಾ ಗುಣಮಟ್ಟ ಪರಿಶೀಲನೆ

• ಉದಯವಾಹಿನಿ ಲಕ್ಷೇಶ್ವರ

ತಾಲ್ಲೂಕಿನ ಬೆಳ್ಳಟ್ಟಿ ಗ್ರಾಮದ ಯೋಗಿ ವೇಮನ ಪ್ರೌಢಶಾಲೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಎನ್. ಹೆಚ್. ನಾಯಕ ಅವರು ಭೇಟಿ ನೀಡಿ ವರ್ಗದ ಕೋಣೆಗಳಲ್ಲಿ ಮಕ್ಕಳ ಬರವಣಿಗೆ ಓದು ಕಲಿಕಾ ಮಟ್ಟ ಮತ್ತು ಬೋಧನಾ ಗುಣಮಟ್ಟಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮಕ್ಕಳ ವಿಷಯಗಳ ನೋಟುಬುಕ್ಕುಗಳನ್ನು ಪರಿಶೀಲಿಸಿ ಯಾವ ರೀತಿ ಟಿಪ್ಪಣಿಗಳನ್ನು ಮಾಡಲಾಗಿದೆ ಬರವಣಿಗೆಗೆ ಶೈಲಿ ಮತ್ತು ಓದು ಶಬ್ದಗಳ ಉಚ್ಚಾರ ಮತ್ತಿತರ ವಿಷಯಗಳನ್ನು ಪರಿಶೀಲನೆ ಮಾಡಿದರು. ಈ ಸಂದರ್ಭದಲ್ಲಿ ಅವರು ಶಿಕ್ಷಕರಿಗೆ ಮಕ್ಕಳಿಗೆ ಪರೀಕ್ಷಾ ಸಮಯದಲ್ಲಿ ಉತ್ತಮ ಬರವಣಿಗೆಯನ್ನು ಬರುವ ನಿಟ್ಟಿನಲ್ಲಿ ಹೆಚ್ಚಿನ ಕಾಳಜಿ ವಹಿಸುವಂತೆ ಸೂಚಿಸಬೇಕು ಎಂದು ಹೇಳಿದರು. ಪ್ರತಿಯೊಬ್ಬ ಶಿಕ್ಷಕರು ವಿದ್ಯಾರ್ಥಿಗಳನ್ನು ವೈಯಕ್ತಿಕವಾಗಿ ವಿಚಾರಿಸಿ ಅವರು ಯಾವ ವಿಷಯದಲ್ಲಿ ಕಲಿಕಾ ಹಿಂದುಳಿವಿಕೆದೆ ಎಂಬುದನ್ನು ಗಮನಿಸಿ ಯುದ್ಧೋಪಾದಿಯಲ್ಲಿ ಸಿದ್ಧಗೊಳಿಸುವಂತೆ ಸೂಚಿಸಿದರು.

### ಸಂಜೆ ಮೊಬೈಲ್, ಟಿವಿ ಬಳಸಬೇಡಿ: ಶಿಕ್ಷಕರಿಂದ ಪೋಷಕರಿಗೆ ಸಲಹೆ

• ಉದಯವಾಹಿನಿ ಬಾದಾಮಿ

ಮಕ್ಕಳ ಅಧ್ಯಯನಕ್ಕಾಗಿ ಮನೆಯಲ್ಲಿ ಪ್ರತಿನಿತ್ಯ ರಾತ್ರಿ 7ರಿಂದ 9ಗಂಟೆವರೆಗೆ ಮನೆಯಲ್ಲಿ ಟಿ.ವಿ. ಮೊಬೈಲ್ ಬಳಸಬೇಡಿ ಎಂದು ಶಿಕ್ಷಕರು ಪೋಷಕರಿಗೆ ಸಲಹೆ ನೀಡಿದರು. ಜಿ.ಎಂ. ಕಲ್ಯಾಣಶೆಟ್ಟಿ ಪ್ರೌಢಶಾಲೆಯ ಶಿಕ್ಷಕರು ಚಿಕ್ಕಮುಚ್ಚಳಗುಡ್ಡ ಗ್ರಾಮದ ಮನೆಗಳಿಗೆ ಭೇಟಿ ನೀಡಿ, ಎಸ್ಸೆಸ್ಸೆಲ್ಸಿ ಪರೀಕ್ಷೆ ಸಮೀಪ ಇರುವುದರಿಂದ ವಿದ್ಯಾರ್ಥಿಗಳ ಓದಿನ ಕಡೆಗೆ ಕಾಳಜಿ ವಹಿಸಿ ಎಂದು ಪೋಷಕರಿಗೆ ಸಲಹೆ ವ್ಯಕ್ತಪಡಿಸಿದರು. ಶಾಲೆಯಿಂದ ಶಿಕ್ಷಕರು ನಿಮ್ಮ ಮೊಬೈಲ್‌ಗೆ ಯಾವುದೇ ಮ್ಯಾಸೇಜ್ ಕಳಿಸುವುದಿಲ್ಲ. ಮಕ್ಕಳನ್ನು ಓದಲು ಹಚ್ಚಿ, ಪರೀಕ್ಷೆಯಲ್ಲಿ ಉತ್ತೀರ್ಣರಾಗುವಂತೆ ಪ್ರೇರೇಪಿಸಿ ಎಂದು ಶಿಕ್ಷಕ ಬಿ.ಎಲ್. ಹೂಲಿ ಹೇಳಿದರು. ಪರೀಕ್ಷೆ ಮುಗಿಯುವವರೆಗೆ ಟಿ.ವಿ ಮತ್ತು ಮೊಬೈಲ್ ಬಳಕೆ ಮಾಡುವುದಿಲ್ಲ. ಮಕ್ಕಳಿಗೂ ಕೊಡುವುದಿಲ್ಲ ಎಂದು ಪೋಷಕರು ಭರವಸೆ ನೀಡಿದರು. ಶಿಕ್ಷಕ ಎಂ.ಆರ್. ಪಾಟೀಲ ಮತ್ತು ಸಿಬ್ಬಂದಿ ಗ್ರಾಮಕ್ಕೆ ಭೇಟಿ ನೀಡಿದರು.


ಉದಯವಾಹಿನಿ ಚಿತ್ರ

## ಬಾಂಬ್ ದಾಳಿಕೋರನ ಕುರಿತು ಪತ್ತೆ

**ಇಸ್ಲಾಮಾಬಾದ್:** ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನ ಹೊರವಲಯದಲ್ಲಿರುವ ತರ್ಲೈನ್‌ನಲ್ಲಿರುವ ಇಮಾಮ್‌ಬರ್ಗಾ ಕಸ್ರ್-ಎ-ಖಾದಿಜತುಲ್ ಕುಬ್ರಾದಲ್ಲಿ ಪ್ರಾರ್ಥನೆಯ ಸಮಯದಲ್ಲಿ ನಡೆದ ಆತ್ಮಹತ್ಯಾ ದಾಳಿಯಲ್ಲಿ ಕನಿಷ್ಠ 69 ಜನರು ಸಾವನ್ನಪ್ಪಿದ್ದಾರೆ ಮತ್ತು 169 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ವರದಿ ಪ್ರಕಾರ, ಪ್ರಾರ್ಥನೆ ಮುಗಿದ ಕೂಡಲೇ ಸ್ಫೋಟ ಸಂಭವಿಸಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಭೀತಿ ಇದೆ.

ಆತ್ಮಹತ್ಯಾ ಬಾಂಬ್ ದಾಳಿಯಲ್ಲಿ ತನಿಖಾ ಸಂಸ್ಥೆಗಳು ಪ್ರಮುಖ ಸುಳಿವು ದೊರಕಿದೆ.ಅಧಿಕಾರಿಗಳ ಪ್ರಕಾರ, ದಾಳಿ ನಡೆಸಿದ ಶಂಕಿತನನ್ನು ಗುರುತಿಸಲಾಗಿದೆ. ದಾಳಿಕೋರ ಪೇಶಾವರ ನಿವಾಸಿ ಎಂದು ತನಿಖೆಯಿಂದ ತಿಳಿದುಬಂದಿದೆ. ಆತನ ಹೆಸರು ಯಾಸಿರ್ ಖಾನ್ ಎಂದು ಹೇಳಲಾಗಿದೆ. ಪ್ರಾಥಮಿಕ ತನಿಖೆಗಳ ಪ್ರಕಾರ, ಆತ ಸುಮಾರು ಐದು ತಿಂಗಳ ಕಾಲ ಅಫ್ಘಾನಿಸ್ತಾನದಲ್ಲಿ ವಾಸಿಸುತ್ತಿದ್ದ, ಅಲ್ಲಿ ಭಯೋತ್ಪಾದಕ ತರಬೇತಿ ಪಡೆಯುತ್ತಿದ್ದ.

ಸ್ಥಳೀಯ ಮಾಧ್ಯಮ ವರದಿಗಳ ಪ್ರಕಾರ, ಆತ ಇತ್ತೀಚೆಗೆ ಪಾಕಿಸ್ತಾನಕ್ಕೆ ಮರಳಿದ್ದ. ದಾಳಿಯನ್ನು ಯಾವಾಗ ಮತ್ತು ಹೇಗೆ ಯೋಜಿಸಲಾಗಿತ್ತು ಎಂಬುದನ್ನು ಅಧಿಕಾರಿಗಳು ಈಗ ತನಿಖೆ ಮೂಲಕ ಪತ್ತೆ ಹಚ್ಚಲು ಪ್ರಯತ್ನಿಸುತ್ತಿದ್ದಾರೆ. ಆತ ಯಾರೊಂದಿಗೆ ಸಂಪರ್ಕದಲ್ಲಿದ್ದನೆಂದು ಅವರು ತನಿಖೆ ನಡೆಸುತ್ತಿದ್ದಾರೆ. ಇಡೀ ಜಾಲವನ್ನು ಬಯಲು ಮಾಡಲಾಗುತ್ತಿದೆ. ತನಿಖೆಯ ಆಪ್ತ ಮೂಲಗಳು ಹೇಳುವಂತೆ ಯಾಸಿರ್ ಖಾನ್ ಹಲವಾರು ಬಾರಿ ಅಫ್ಘಾನಿಸ್ತಾನಕ್ಕೆ ಪ್ರಯಾಣಿಸಿದ್ದಾನೆ.

ಅವನು ಅಫ್ಘಾನಿಸ್ತಾನದ ಕುನಾರ್ ಪ್ರಾಂತ್ಯದಲ್ಲಿರುವ ಮನ್ಸೂರ್ ಇಸ್ತಿಷ್ಹಾದಿ ತರಬೇತಿ ಪಡೆದಿದ್ದಾನೆ. ಸಲಾಫಿ ಸಿದ್ಧಾಂತದಿಂದ ಪ್ರಭಾವಿತರಾಗಿದ್ದಾನೆಂದು ನಂಬಲಾಗಿದೆ. ಗಡಿಯಾಚೆ ವಾಸಿಸುತ್ತಿರುವಾಗ ಭಯೋತ್ಪಾದಕ ಚಟುವಟಿಕೆಗಳಿಗಾಗಿ ತರಬೇತಿ ನೀಡಲಾಗುತ್ತಿತ್ತು ಎಂದು ಅಧಿಕಾರಿಗಳು ಶಂಕಿಸಿದ್ದಾರೆ. ಅವರು ಇಸ್ಲಾಮಿಕ್ ಸ್ಟೇಟ್ ಖೊರಾಸನ್ ಪ್ರಾಂತ್ಯನೊಂದಿಗೆ ಸಂಪರ್ಕ ಹೊಂದಿರಬಹುದೇ ಎಂದು ತನಿಖಾ ಸಂಸ್ಥೆಗಳು ತನಿಖೆ ನಡೆಸುತ್ತಿವೆ. ಪಾಕಿಸ್ತಾನದ ಆಂತರಿಕ ಖಾತೆ ರಾಜ್ಯ ಸಚಿವ ತಲಾಲ್ ಚೌಧರಿ ಕೂಡ ದಾಳಿಕೋರನ ಗುರುತನ್ನು ದೃಢಪಡಿಸಿದ್ದಾರೆ.

ಈ ಮಾಹಿತಿಯನ್ನು ವಿಧಿವಿಜ್ಞಾನ ತನಿಖೆಗಳ ಮೂಲಕ ಪಡೆಯಲಾಗಿದೆ ಎಂದು ಅವರು ಹೇಳಿದ್ದಾರೆ. ಸ್ಫೋಟ ಸ್ಥಳದಿಂದ ವಶಪಡಿಸಿಕೊಂಡ ಅವಶೇಷಗಳ ವೈಜ್ಞಾನಿಕ ವಿಶ್ಲೇಷಣೆಯು ದಾಳಿಕೋರನ ಗುರುತು ಮತ್ತು ಅವನ ಚಟುವಟಿಕೆಗಳನ್ನು ಬಹಿರಂಗಪಡಿಸಿದೆ.

### ಗುಪ್ತಚರ ಮತ್ತು ಜಾರಿ ಸಂಸ್ಥೆಗಳು ವರದಿ ಮಾಡಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ

# ಉ.ಪ್ರದೇಶದಲ್ಲಿ ಆಸ್ತಿ ಖರೀದಿ: ಮಾರಾಟಕ್ಕೆ ಪ್ಯಾನ್ ಕಡ್ಡಾಯ

**ಲಖ್ನೋ:** ನೇಪಾಳದ ಸೂಕ್ಷ್ಮ ಗಡಿ ಜಿಲ್ಲೆಗಳಲ್ಲಿ, ಬೇನಾಮಿ ವಹಿವಾಟುಗಳನ್ನು ಹತ್ತಿಕ್ಕುವ ಮತ್ತು ಶಂಕಿತ ವಿದೇಶಿ ನಿಧಿಯ ರಿಯಲ್ ಎಸ್ಟೇಟ್ ವ್ಯವಹಾರಗಳನ್ನು ಪತ್ತೆಹಚ್ಚುವ ಉದ್ದೇಶದಿಂದ ಉತ್ತರ ಪ್ರದೇಶ ಸರ್ಕಾರ ರಾಜ್ಯಾದ್ಯಂತ ಆಸ್ತಿ ಖರೀದಿ ಮತ್ತು ಮಾರಾಟಕ್ಕೆ ಪ್ಯಾನ್ ಕಾರ್ಡ್‌ಗಳನ್ನು ಕಡ್ಡಾಯಗೊಳಿಸಿದೆ. ಭಾರತ-ನೇಪಾಳ ಗಡಿಗೆ ಸಮೀಪವಿರುವ ಪ್ರದೇಶಗಳಲ್ಲಿ ವಿದೇಶಿ ಹಣವನ್ನು ಬಳಸಿಕೊಂಡು ಆಸ್ತಿಗಳನ್ನು ಖರೀದಿಸಲಾಗುತ್ತಿದೆ ಎಂಬ ವರದಿಯನ್ನು ಗುಪ್ತಚರ ಮತ್ತು ಜಾರಿ ಸಂಸ್ಥೆಗಳು ವರದಿ ಮಾಡಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

**ಗುಪ್ತಚರ ಮತ್ತು ಜಾರಿ ಸಂಸ್ಥೆಗಳು ವರದಿ**

ಅಂತಹ ಹೂಡಿಕೆಗಳನ್ನು ಹಣವನ್ನು ಲೇವಣಿ ಮಾಡಲು, ಮಾಲೀಕತ್ವವನ್ನು ಮರೆಮಾಚಲು ಮತ್ತು ಕೆಲವು ಸಂದರ್ಭಗಳಲ್ಲಿ ಭಯೋತ್ಪಾದನೆಗೆ ಸಂಬಂಧಿಸಿದ ಚಟುವಟಿಕೆಗಳನ್ನು ಬೆಂಬಲಿಸಲು ಬಳಸಲಾಗುತ್ತಿದೆ ಎಂದು ಅಧಿಕಾರಿಗಳು ಶಂಕಿಸಿದ್ದಾರೆ. ಇದನ್ನು ಬಿಗಿಗೊಳಿಸಲು, ಪ್ರತಿ ಆಸ್ತಿ ವಹಿವಾಟಿಗೆ ಖರೀದಿದಾರರು ಮತ್ತು ಮಾರಾಟಗಾರರು ಇಬ್ಬರೂ ಪ್ಯಾನ್ ವಿವರಗಳನ್ನು ಸಲ್ಲಿಸುವುದನ್ನು ಖಚಿತಪಡಿಸಿಕೊಳ್ಳಲು ರಾಜ್ಯವು ಎಲ್ಲಾ ಜಿಲ್ಲಾಡಳಿತಗಳಿಗೆ ನಿರ್ದೇಶನ ನೀಡಿದೆ. ಈ ಹಿಂದೆ, ಗಡಿಯ ಸಮೀಪವಿರುವ ಹೆಚ್ಚಿನ ಅಪಾಯದ ವಲಯಗಳಲ್ಲಿ ಈ ನಿಯಮವನ್ನು ಹೆಚ್ಚಾಗಿ ಜಾರಿಗೊಳಿಸಲಾಗಿತ್ತು. ಈಗ, ಇದನ್ನು ಇಡೀ ರಾಜ್ಯಕ್ಕೆ ವಿಸ್ತರಿಸಲಾಗಿದೆ. ಇದರಲ್ಲಿ ನೇಪಾಳದ ಪಕ್ಕದಲ್ಲಿರುವ ಏಳು ಜಿಲ್ಲೆಗಳಾದ ಗೋರಖ್‌ಪುರ, ಮಹಾರಾಜ್‌ಗಂಜ್, ಸಿದ್ಧಾರ್ಥನಗರ, ಬಲರಾಂಪುರ್, ಶ್ರಾವಸ್ತಿ, ಬಹ್ರೈಚ್ ಮತ್ತು ಲಖೀಂಪುರ ಖೇರಿ ಮತ್ತು ಉತ್ತರ ಪ್ರದೇಶದ ಎಲ್ಲಾ ಇತರ ಜಿಲ್ಲೆಗಳು ಸೇರಿವೆ. ಯಾವುದೇ ಪತ್ರವನ್ನು ಪ್ರಕ್ರಿಯೆಗೊಳಿಸುವ ಮೊದಲು ಪ್ಯಾನ್ ವಿವರಗಳನ್ನು ಕಡ್ಡಾಯಗೊಳಿಸಲು ಆನ್‌ಲೈನ್ ನೋಂದಣಿ ವ್ಯವಸ್ಥೆಯನ್ನು ಸಹ ಮಾರ್ಪಡಿಸಲಾಗಿದೆ.

ಅಜಮ್‌ಗಢ ಮತ್ತು ಶ್ರಾವಸ್ತಿಯಲ್ಲಿ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ, ಅಲ್ಲಿ ಅವರು ಇಂಡೋ-ನೇಪಾಳ ಗಡಿಯ ಬಳಿ ಮತ್ತೊಂದು ಮದರಸಾವನ್ನು ತೆರೆದಿದ್ದರು. ಪ್ರಕರಣವು ವಿದೇಶಿ ದೇಣಿಗೆಯನ್ನು ಒಳಗೊಂಡಿದ್ದರಿಂದ, ಜಾರಿ ನಿರ್ದೇಶನಾಲಯ ಮಧ್ಯಪ್ರವೇಶಿಸಿತು. ಖಾನ್‌ಗೆ ಸಂಬಂಧಿಸಿದ ಬಹು ಖಾತೆಗಳಿಗೆ ಸುಮಾರು 4 ಕೋಟಿ ರೂ.ಗಳನ್ನು ವರ್ಗಾಯಿಸಲಾಗಿದೆ ಎಂದು ಜಾರಿ ನಿರ್ದೇಶನಾಲಯ ಪತ್ತೆ ಮಾಡಿದೆ. ಈ ಹಣವನ್ನು ಅವರ ಕುಟುಂಬವು ಖಲೀಲಾಬಾದ್, ಸಂತ ಕಬೀರ್ ನಗರದಲ್ಲಿ ಮದರಸಾ ಸ್ಥಾಪಿಸಲು ಮತ್ತು ಅವರ ಪತ್ನಿ, ಮಗ ಮತ್ತು ಸೊಸೆಯ ಹೆಸರಿನಲ್ಲಿ ಆಸ್ತಿಯನ್ನು ಖರೀದಿಸಲು ಬಳಸಿದೆ




ಎಂದು ಆರೋಪಿಸಲಾಗಿದೆ. ಏಜೆನ್ಸಿಯು 18 ಖಾತೆಗಳಿಂದ ಸುಮಾರು 94.27 ಲಕ್ಷ ರೂ.ಗಳನ್ನು ಸ್ಥಗಿತಗೊಳಿಸಿತು ಮತ್ತು ಸಂಬಂಧಿತ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿದೆ.ವಿದೇಶಿ ಹಣವನ್ನು ಅಕ್ರಮವಾಗಿ ವರ್ಗಾಯಿಸಲು ಮತ್ತು ಗಡಿ ಜಿಲ್ಲೆಗಳಲ್ಲಿ ಸದ್ದಿಲ್ಲದೆ ಪ್ರಭಾವ ಬೀರಲು ಆಸ್ತಿ ವ್ಯವಹಾರಗಳನ್ನು ಹೇಗೆ ಬಳಸಬಹುದು ಎಂಬುದನ್ನು ಇಂತಹ ಪ್ರಕರಣಗಳು ಬಹಿರಂಗಪಡಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರತಿಯೊಂದು ಆಸ್ತಿ ಒಪ್ಪಂದದಲ್ಲೂ ಪ್ಯಾನ್ ಕಾರ್ಡ್‌ಗಳನ್ನು ಕಡ್ಡಾಯಗೊಳಿಸುವ ಮೂಲಕ, ಸರ್ಕಾರವು ಅಧಿಕಾರಿಗಳಿಗೆ ಸ್ಪಷ್ಟ ಆರ್ಥಿಕ ಹಾದಿಯನ್ನು ಸೃಷ್ಟಿಸಲು ಬಯಸಿದೆ. ಪ್ಯಾನ್-ಲಿಂಕ್ಡ್ ವಹಿವಾಟುಗಳೊಂದಿಗೆ, ಆದಾಯ ತೆರಿಗೆ ಇಲಾಖೆಯು ಅಸಾಮಾನ್ಯ ಖರೀದಿ ಮಾದರಿಗಳನ್ನು ಪತ್ತೆಹಚ್ಚಬಹುದು, ಆದಾಯ ಮೂಲಗಳನ್ನು ಪರಿಶೀಲಿಸಬಹುದು ಮತ್ತು ದೊಡ್ಡ ಪ್ರಮಾಣದ ಖರೀದಿಗಳು ಘೋಷಿತ ಗಳಿಕೆಗೆ ಹೊಂದಿಕೆಯಾಗದ ಪ್ರಕರಣಗಳನ್ನು ಗುರುತಿಸಬಹುದು. ಇದು ಏಜೆನ್ಸಿಗಳಿಗೆ ನಿರ್ದಿಷ್ಟ ಜಿಲ್ಲೆಗಳಲ್ಲಿ ವಿದೇಶಿ ಹಣಕಾಸಿನ ಸಂಪರ್ಕಗಳು, ಬೇನಾಮಿ ಮಾಲೀಕತ್ವ ಮತ್ತು ಕ್ಲಸ್ಟರ್ಡ್ ಖರೀದಿಗಳನ್ನು ಸುಲಭವಾಗಿ ಪತ್ತೆಹಚ್ಚಲು ಅನುವು ಮಾಡಿಕೊಡುತ್ತದೆ. ಗಡಿಯಾಚೆಗಿನ ಹಣಕಾಸು ಮತ್ತು ಭದ್ರತಾ ಅಪಾಯಗಳಿಗೆ ಗುರಿಯಾಗುವ ಪ್ರದೇಶಗಳಲ್ಲಿ, ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಗಟ್ಟಲು, ಬೇನಾಮಿ ಆಸ್ತಿ ವ್ಯವಹಾರಗಳನ್ನು ತಡೆಯಲು ಮತ್ತು ರಿಯಲ್ ಎಸ್ಟೇಟ್ ವಹಿವಾಟುಗಳ ಮೇಲೆ ಕಣ್ಗಾವಲು ಬಲಪಡಿಸಲು ಈ ನಿಯಮವು ಕಾರ್ಯನಿರ್ವಹಿಸುತ್ತದೆ ಎಂದು ಸರ್ಕಾರ ನಿರೀಕ್ಷಿಸುತ್ತದೆ.

**ಏಜೆನ್ಸಿಗಳಿಂದ ಪತ್ತೆ**

**ಆಸ್ತಿ ಖರೀದಿಯ ಮೂಲಕ ಕಾರ್ಯನಿರ್ವಹಿಸುತ್ತಿರುವ ವಿದೇಶಿ ಹಣಕಾಸು ಜಾಲಗಳ ತನಿಖೆಯ ನಂತರ ನೀತಿಯ ಒತ್ತಡ ಬಂದಿತು. ಕಳೆದ ವರ್ಷ, ಯುಪಿ ಭಯೋತ್ಪಾದನಾ ನಿಗ್ರಹ ದಳ ಲಂಡನ್‌ನಲ್ಲಿ ವರ್ಷಗಳಿಂದ ವಾಸಿಸುತ್ತಿದ್ದ ಮತ್ತು ಬ್ರಿಟಿಷ್ ಪೌರತ್ವವನ್ನು ಪಡೆದಿದ್ದ ಸಂತ ಕಬೀರ್ ನಗರದ ನಿವಾಸಿ ಮೌಲಾನಾ ಶಂಸುಲ್ ಹುದಾ ಖಾನ್ ಅವರನ್ನು ತನಿಖೆಗೆ ಒಳಪಡಿಸಲಾಗಿದೆ. ಎಟಿಎಸ್ ಸಂಶೋಧನೆಗಳ ಪ್ರಕಾರ, ಖಾನ್ ಪಾಕಿಸ್ತಾನಕ್ಕೆ ಹಲವು ಬಾರಿ ಪ್ರಯಾಣಿಸಿದ್ದಾರೆ ಮತ್ತು ಶಂಕಿತ ಸಂಘಟನೆಗಳ ಸಭೆಗಳಲ್ಲಿ ಭಾಗವಹಿಸಿದ್ದಾರೆ. ಪಾಕಿಸ್ತಾನ ಮತ್ತು ಕೆನಡಾಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಭಯೋತ್ಪಾದಕ ಗುಂಪುಗಳೊಂದಿಗೆ ಸಂಭಾವ್ಯ ಸಂಪರ್ಕವನ್ನು ಏಜೆನ್ಸಿಗಳು ಪತ್ತೆಹಚ್ಚಿವೆ.**

## ಮಿನಿ ನ್ಯೂಸ್

### ಪ್ರಯಾಣಿಕರ ಮೇಲೆ ಹರಿದ ಕಂಟೇನರ್; 6 ಜನ ಸ್ಥಳದಲ್ಲೇ ಸಾವು

**ಮಥುರಾ:** ಯಮುನಾ ಎಕ್ಸ್‌ಪ್ರೆಸ್‌ವೇಯಲ್ಲಿ ಅತಿವೇಗದ ಚಾಲನೆ ಮತ್ತು ನಿಯಮ ಉಲ್ಲಂಘನೆಯ ಪರಿಣಾಮವಾಗಿ ಮತ್ತೊಂದು ಭೀಕರ ರಸ್ತೆ ಅಪಘಾತ ಸಂಭವಿಸಿದೆ. ಆರು ಮಂದಿ ದುರ್ಮರಣಕ್ಕೀಡಾದ ಘಟನೆ ಶನಿವಾರ ಬೆಳಗಿನ ಜಾವ 2:45 ರ ಸುಮಾರಿಗೆ ನಡೆದಿದೆ. ಸುರಿರ್ ಪೊಲೀಸ್ ಠಾಣೆ ವ್ಯಾಪ್ತಿಯ ಮೈಲ್‌ಸ್ಟೋನ್ 88 ಬಳಿ ಈ ದುರಂತ ನಡೆದಿದ್ದು, ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ. ದೆಹಲಿಯಿಂದ ಕಾನ್ಪುರಕ್ಕೆ ತೆರಳುತ್ತಿದ್ದ ಖಾಸಗಿ ಬಸ್ ಬೆಳಗಿನ ಜಾವ ಸುಮಾರು 2:45 ರ ಸುಮಾರಿಗೆ ಎಕ್ಸ್‌ಪ್ರೆಸ್‌ವೇಯಲ್ಲಿ ಸಂಚರಿಸುತ್ತಿತ್ತು. ಪ್ರಯಾಣದ ಮಧ್ಯೆ, ಪ್ರಯಾಣಿಕರು ಶೌಚಾಲಯ ಬಳಸಲು ಬಸ್ ನಿಲ್ಲಿಸಲಾಗಿದೆ. ಇನ್ನು ಚಾಲಕ ಹಸಿರು ವಲಯದಲ್ಲಿ ಬಸ್ ನಿಲ್ಲಿಸುವ ಬದಲು ರಸ್ತೆಯಲ್ಲೇ ನಿಲ್ಲಿಸಿದ್ದ. ಈ ವೇಳೆ ಹಿಂದಿನಿಂದ ವೇಗವಾಗಿ ಬಂದ ಕಂಟೇನರ್ ಬಸ್‌ಗೆ ಡಿಕ್ಕಿ ಹೊಡೆದು ಕೆಳಗೆ ನಿಂತಿದ್ದ ಪ್ರಯಾಣಿಕರ ಮೇಲೆ ಹರಿದಿದೆ. ಡಿಕ್ಕಿ ಎಷ್ಟು ಭೀಕರವಾಗಿತ್ತೆಂದರೆ ಆರು ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮತ್ತೊಬ್ಬ ಗಂಭೀರವಾಗಿ ಗಾಯಗೊಂಡಿದ್ದು, ಆತನನ್ನು ತಕ್ಷಣವೇ ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ.

### ಹೋಂವರ್ಕ್ ಮಾಡದ ಮಗುವಿಗೆ ನೂರವೈತ್ತು ಬಾರಿ ಥಳಿಸಿದ ಶಿಕ್ಷಕ

**ಲಕ್ನೋ:** ಹೋಂವರ್ಕ್ ಪೂರ್ಣಗೊಳಿಸದ ಕಾರಣಕ್ಕೆ ಎರಡನೇ ತರಗತಿ ಮಗುವಿಗೆ ಬಾಸುಂಡೆ ಬರುವವರೆಗೂ ನೂರವೈತು ಬಾರಿ ಥಳಿಸಿದ ಆರೋಪ ಶಿಕ್ಷಕನ ವಿರುದ್ಧ ಕೇಳಿ ಬಂದಿದೆ. ಉತ್ತರ ಪ್ರದೇಶದ ಗೊಂಡಾ ಜಿಲ್ಲೆಯ ಕರ್ನೈಲಗಂಜ್ ಪ್ರದೇಶದ ಖಾಸಗಿ ಶಾಲೆಯೊಂದರಲ್ಲಿ ಘಟನೆ ನಡೆದಿದೆ. ಎಂಆರ್‌ಜಿ ಶಾಲೆಯ ಇಂಗ್ಲಿಷ್ ಶಿಕ್ಷಕ ಪ್ರಖರ್ ಸಿಂಗ್ ಎಂಬಾತ ಮಗುವಿನ ಮೇಲೆ ಹಲ್ಲೆ ನಡೆಸಿದ್ದಾನೆ ಆರೋಪಿಸಲಾಗಿದೆ. ಹೋಂವರ್ಕ್ ಪೂರ್ಣಗೊಳಿಸದ ಕಾರಣದಿಂದ ಶಿಕ್ಷಕರು ಕೋಪಗೊಂಡು ಮಗುವಿನ ಕಾಲುಗಳ ಮೇಲೆ ಪದೇ ಪದೆ ಹೊಡೆದಿದ್ದಾರೆ. ಇದರಿಂದ ಮಗುವಿನ ಕಾಲುಗಳಲ್ಲಿ ಗಾಯದ ಗುರುತುಗಳು, ಊತ ಮತ್ತು ತೀವ್ರ ನೋವು ಉಂಟಾಗಿದೆ ಎಂದು ತಿಳಿದುಬಂದಿದೆ.

ಮಗು ಮನೆಗೆ ತಲುಪಿದಾಗ ಕುಂಟುತ್ತಾ ಬಂದಿದ್ದು, ದೇಹದ ಮೇಲಿನ ಗಾಯದ ಗುರುತುಗಳನ್ನು ನೋಡಿ ಕುಟುಂಬಸ್ಥರು ಆಘಾತಗೊಂಡರು. ಮಗುವಿನ ತಂದೆ ಶಾಲಾ ಆಡಳಿತ ಮಂಡಳಿಯನ್ನು ಸಂಪರ್ಕಿಸಿ ನಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಈ ದೂರದ ಮೇಲೆ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 115 (2), 351 (3) ಮತ್ತು 352ರ ಅಡಿಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಕರ್ನೈಲಗಂಜ್ ಸರ್ಕಲ್ ಆಫೀಸರ್ ಅಭಿಷೇಕ್ ದಬಾಚಾ ತಿಳಿಸಿದ್ದಾರೆ.

### ಗ್ರೀನ್‌ಲ್ಯಾಂಡ್‌ನಲ್ಲಿ ಕಾನ್ಸುಲೇಟ್ ಕಚೇರಿ ತೆರೆಯಲು ಮುಂದಾದ ಕೆನಡಾ, ಫ್ರಾನ್ಸ್

**ನೂಕ್:** ಆರ್ಕಟಿಕ್ ದ್ವೀಪ ರಾಷ್ಟ್ರದ ಮೇಲೆ ಅಮೆರಿಕವು ತನ್ನ ಹಿಡಿತ ಸಾಧಿಸಲು ಯತ್ನ ತೀವ್ರಗೊಳಿಸಿರುವ ಬೆನ್ನಲ್ಲೇ, ನ್ಯಾಟೊ ಮಿತ್ರ ರಾಷ್ಟ್ರವಾದ ಗ್ರೀನ್‌ಲ್ಯಾಂಡ್‌ನ ಬೆಂಬಲ ಸೂಚಿಸುವ ಭಾಗವಾಗಿ ಕಾನ್ಸುಲೇಟ್ ಕಚೇರಿಗಳನ್ನು ತೆರೆಯಲು ಕೆನಡಾ ಹಾಗೂ ಫ್ರಾನ್ಸ್ ನಿರ್ಧರಿಸಿವೆ. ಕೆನಡಾ ವಿದೇಶಾಂಗ ಸಚಿವೆ ಅನಿತಾ ಆನಂದ್ ಅವರು ನೂಕ್‌ಗೆ ಪ್ರಯಾಣ ಬೆಳೆಸಿದ್ದು, ಅಲ್ಲಿ ಸ್ಥಾಪಿಸಿರುವ ಕಾನ್ಸುಲೇಟ್ ಕಚೇರಿ ಉದ್ಘಾಟಿಸಲಿದ್ದಾರೆ. ಅನಿತಾ ಅವರ ಜೊತೆಗೆ ಕೆನಡಾದ ಗವರ್ನರ್ ಜನರಲ್ ಮೇರಿ ಸೈಮನ್ ಕೂಡ ಜೊತೆಗಿದ್ದರು.

ಜೀನ್ ನೊಯಲ್ ಅವರು ಗ್ರೀನ್‌ಲ್ಯಾಂಡ್‌ನ ಕಾನ್ಸುಲ್ ಜನರಲ್ ಆಗಿ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ ಎಂದು ಫ್ರಾನ್ಸ್‌ನ ವಿದೇಶಾಂಗ ಸಚಿವಾಲಯವು ತಿಳಿಸಿದೆ. ಆ ಮೂಲಕ ಯುರೋಪ್‌ನ ರಾಷ್ಟ್ರವೊಂದು ಮೊದಲ ಬಾರಿಗೆ ಇಲ್ಲಿ ಕಾನ್ಸುಲೇಟ್ ಜನರಲ್ ಕಚೇರಿ ತೆರೆದಂತಾಗಿದೆ.

ಗ್ರೀನ್‌ಲ್ಯಾಂಡ್ ಜೊತೆಗೆ ಸಾಂಸ್ಕೃತಿಕ, ವೈಜ್ಞಾನಿಕ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ಸಹಕಾರದ ಜೊತೆಗೆ ರಾಜಕೀಯ ಬಲಪಡಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದೆ. ಗ್ರೀನ್‌ಲ್ಯಾಂಡ್‌ನಲ್ಲಿ ಕಾನ್ಸುಲೇಟ್ ಕಚೇರಿ ಆರಂಭಿಸಲು 2024ರಲ್ಲೇ ಕೆನಡಾ ನಿರ್ಧರಿಸಿತ್ತು. ಆದರೆ ಇಡೀ ದೇಶವನ್ನು ವಶಕ್ಕೆ ಪಡೆಯುವ ಕುರಿತು ಟ್ರಂಪ್ ನೀಡಿದ್ದ ಹೇಳಿಕೆ ಹಾಗೂ ನವೆಂಬರ್‌ನಲ್ಲಿ ಉಂಟಾದ ಪ್ರತಿಕೂಲ ಹವಾಮಾನದಿಂದ ಕಚೇರಿ ಆರಂಭಿಸುವ ಪ್ರಕ್ರಿಯೆ ವಿಳಂಬವಾಗಿತ್ತು.

### ಅಗ್ನಿ-3 ಬ್ಯಾಲಿಸ್ಟಿಕ್ ಕ್ಷಿಪಣಿ ಯಶಸ್ವಿ ಪರೀಕ್ಷೆ

**ಭುವನೇಶ್ವರ:** ಒಡಿಶಾದ ಚಾಂಡಿಪುರದಲ್ಲಿರುವ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್‌ನಿಂದ ಅಗ್ನಿ-3 ಮಧ್ಯಮ ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿಯನ್ನು ಯಶಸ್ವಿಯಾಗಿ ಪರೀಕ್ಷಿಸಲಾಯಿತು. ಪರೀಕ್ಷೆಯ ಎಲ್ಲಾ ಕಾರ್ಯಾಚರಣೆ ಮತ್ತು ತಾಂತ್ರಿಕ ನಿಯತಾಂಕಗಳು ಸಂಪೂರ್ಣವಾಗಿ ನಿರೀಕ್ಷೆಯಂತೆ ಇದ್ದವು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕ್ಷಿಪಣಿ ಉಡಾವಣೆಯನ್ನು ಕಾರ್ಯತಂತ್ರದ ಪಡೆಗಳ ಕಮಾಂಡ್‌ನ ಮೇಲ್ವಿಚಾರಣೆಯಲ್ಲಿ ನಡೆಸಲಾಯಿತು. ಅಗ್ನಿ-3 ಪರಮಾಣು ಸಾಮರ್ಥ್ಯದ ಕ್ಷಿಪಣಿಯಾಗಿದ್ದು, ಸುಮಾರು 3,000 ರಿಂದ 3,500 ಕಿಲೋಮೀಟರ್ ವ್ಯಾಪ್ತಿಯನ್ನು ಹೊಂದಿದೆ. ಇದು ಭಾರತವು ಶತ್ರು ರಾಷ್ಟ್ರಗಳ ಒಳಭಾಗದಲ್ಲಿರುವ ಪ್ರಮುಖ ಗುರಿಗಳನ್ನು ಗುರಿಯಾಗಿಸಿಕೊಂಡು ಕಾರ್ಯಾಚರಣೆ ಮಾಡಲು ಅನುವು ಮಾಡಿಕೊಡುತ್ತದೆ.

**ಪಾಕಿಸ್ತಾನ ಮತ್ತು ಚೀನಾಕ್ಕೆ ಪ್ರಮುಖ ಬೆದರಿಕೆ?:** ಅಗ್ನಿ-3 ರ 3,000-3,500 ಕಿಮೀ ವ್ಯಾಪ್ತಿಯು ಪಾಕಿಸ್ತಾನ ಮತ್ತು ಚೀನಾದ ಒಳಭಾಗವನ್ನು ಒಳಗೊಂಡಿದೆ. ಇದರಲ್ಲಿ ಎಲ್ಲ ಪ್ರಮುಖ ಪಾಕಿಸ್ತಾನಿ ನಗರಗಳು, ಬೀಜಿಂಗ್ ಮತ್ತು ಶಾಂಘೈನಂತಹ ಚೀನಾದ ನಗರಗಳು ಸೇರಿವೆ. ಹೀಗಾಗಿ ಭಾರತವು ಎರಡೂ ದೇಶಗಳಲ್ಲಿ ಪ್ರಮುಖ ಗುರಿಗಳನ್ನು ತನ್ನ ವ್ಯಾಪ್ತಿಯಲ್ಲಿ ಹೊಂದಿದೆ. ಈ ಕ್ಷಿಪಣಿ ಚೀನಾಕ್ಕಿಂತ ಪಾಕಿಸ್ತಾನಕ್ಕೆ ಹೆಚ್ಚು ಕಳವಳವನ್ನುಂಟು ಮಾಡುತ್ತದೆ.



ಏಕೆಂದರೆ ಇದು ಪಾಕ್‌ನ ಎಲ್ಲಾ ನಗರಗಳ ಮೇಲೆ ವಿನಾಶವನ್ನುಂಟುಮಾಡುವ ಸಾಮರ್ಥ್ಯವನ್ನು ಹೊಂದಿದೆ. ಆದರೆ, ಯಾವುದೇ ಪ್ರತಿಕ್ರಮಗಳನ್ನು ಸಹ ಹೊಂದಿಲ್ಲ. ಅಗ್ನಿ-3 ಅನ್ನು ವಿಶ್ವದ ಅತ್ಯಂತ ಶಕ್ತಿಶಾಲಿ ಮಧ್ಯಮ ಶ್ರೇಣಿಯ ಕ್ಷಿಪಣಿಗಳಲ್ಲಿ ಒಂದೆಂದು ಪರಿಗಣಿಸಲಾಗಿದೆ.

**ಅಗ್ನಿ-3 ಭಾರತಕ್ಕೆ ಏಕೆ ವಿಶೇಷ:** ಅಗ್ನಿ-3 ಭಾರತದ ಮಧ್ಯಮ ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿ. ಇದು ಎರಡು ಹಂತದ ಘನ ಇಂಧನ ಕ್ಷಿಪಣಿಯಾಗಿದ್ದು, 16.7 ಮೀಟರ್ ಉದ್ದ, 2 ಮೀಟರ್ ವ್ಯಾಸ ಮತ್ತು 48,300 ಕಿಲೋಗ್ರಾಂಗಳಷ್ಟು ಉಡಾವಣಾ ತೂಕವನ್ನು ಹೊಂದಿದೆ. ಇದು ಪರಮಾಣು ಅಥವಾ ಸಾಂಪ್ರದಾಯಿಕ ಸಿಡಿತಲೆಗಳನ್ನು ಒಳಗೊಂಡಂತೆ 1,500 ಕಿಲೋಗ್ರಾಂಗಳಷ್ಟು ಪೇಲೋಡ್ ಸಾಗಿಸಬಲ್ಲದು ಮತ್ತು 450 ಕಿಲೋಮೀಟರ್‌ಗಳಿಗಿಂತ ಹೆಚ್ಚು ಹಾರಾಟದ ಎತ್ತರವನ್ನು ಹೊಂದಿದೆ.

ಅಭಿವೃದ್ಧಿಪಡಿಸಿದ ಇದನ್ನು ರೈಲು-ಮೊಬೈಲ್ ಮತ್ತು ರಸ್ತೆ-ಮೊಬೈಲ್ ಪ್ಲಾಟ್‌ಫಾರ್ಮ್‌ಗಳಿಂದ ಉಡಾಯಿಸಬಹುದು. ಇದರ ನಿಖರತೆಯು ಸುಧಾರಿತ ಸಂಚರಣೆ ಮತ್ತು ಮಾರ್ಗದರ್ಶನ ವ್ಯವಸ್ಥೆಗಳಿಂದ ಬಂದಿದೆ.

## ಮಸೀದಿ ಸ್ಫೋಟ ಖಂಡಿಸಿದ ಭಾರತ; ಆರೋಪ ಹೊರಿಸಿದರೆ ಹುಷಾರ್

**ಇಸ್ಲಾಮಾಬಾದ್:** ಭಯೋತ್ಪಾದನೆಗೆ ಪೋಷಣೆ ನೀಡುವ ಪಾಕಿಸ್ತಾನ, ಅದೇ ಭಯೋತ್ಪಾದನೆಯ ಶಿಕಾರಿಯಾಗುತ್ತಿದೆ. ಹಾವಿಗೆ ಹಾಲೆರೆದರೇನು ಫಲ? ಎಂಬಂತೆ ತಾನೇ ಸಾಕಿ ಬೆಳೆಸಿದ ಭಯೋತ್ಪಾದನೆಗೆ ಪಾಕಿಸ್ತಾನ ಬಲಿಯಾಗುತ್ತಿದೆ. ಇದಕ್ಕೆ ರಾಜಧಾನಿ ಇಸ್ಲಾಮಾಬಾದ್ ಮಸೀದಿಯೊಂದರಲ್ಲಿ ಸಂಭವಿಸಿದ ಭೀಕರ ಬಾಂಬ್ ಸ್ಫೋಟ ಸಾಕ್ಷಿ.

ಹೌದು, ಇಸ್ಲಾಮಾಬಾದ್‌ನ ಮಸೀದಿಯೊಂದರಲ್ಲಿ ಶುಕ್ರವಾರದ ಪ್ರಾರ್ಥನೆ ವೇಳೆ ಭೀಕರ ಬಾಂಬ್ ಸ್ಫೋಟ ಸಂಭವಿಸಿದ್ದು, ಈ ದಾಳಿಯಲ್ಲಿ ಸುಮಾರು 69 ಜನರು ತಮ್ಮ ಪ್ರಾಣ ಕಳೆದುಕೊಂಡಿದ್ದು, 169ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ. ಭಾರತವು ಈ ಅಮಾನವೀಯ ದಾಳಿಯನ್ನು ಅತ್ಯಂತ ಕಠಿಣ ಶಬ್ದಗಳಲ್ಲಿ ಖಂಡಿಸಿದೆ.

ಈ ಕುರಿತು ಅಧಿಕೃತ ಪ್ರಕಟಣೆ ಹೊರಡಿಸಿರುವ ಭಾರತದ ವಿದೇಶಾಂಗ ಇಲಾಖೆ, ಪಾಕಿಸ್ತಾನ ರಾಜಧಾನಿ ಇಸ್ಲಾಮಾಬಾದ್ ಮಸೀದಿಯಲ್ಲಿ ಸಂಭವಿಸಿದ ಭೀಕರ ಬಾಂಬ್ ಸ್ಫೋಟ ಅತ್ಯಂತ ಖಂಡನಾರ್ಹ. ಈ ದಾಳಿಯಲ್ಲಿ ಮೃತಪಟ್ಟವರಿಗಾಗಿ ಭಾರತ ದು:ಖಿಸುತ್ತದೆ. ದಾಳಿಯಲ್ಲಿ ಗಂಭೀರವಾಗಿ ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸುತ್ತೇವೆ ಎಂದು ಹೇಳಿದೆ. ಇದೇ ವೇಳೆ ಇಸ್ಲಾಮಾಬಾದ್ ಬಾಂಬ್ ದಾಳಿಯಲ್ಲಿ ತನ್ನ ಪಾತ್ರದ ಆರೋಪ ಹೊರಿಸಿದರೆ,



- ಪಾಕಿಸ್ತಾನ ರಾಜಧಾನಿ ಇಸ್ಲಾಮಾಬಾದ್ ಮಸೀದಿಯಲ್ಲಿ ಭೀಕರ ಬಾಂಬ್ ಸ್ಫೋಟ.
- ಇಸ್ಲಾಮಾಬಾದ್ ಮಸೀದಿ ದಾಳಿಯಲ್ಲಿ 69ಕ್ಕೂ ಹೆಚ್ಚು ಜನರ ಸಾವು.
- ಇಸ್ಲಾಮಾಬಾದ್ ದಾಳಿ ಖಂಡಿಸಿದ ಭಾರತ, ಪಾತ್ರ ಆರೋಪ ನಿರಾಕರಣೆ.

**ಕಠಿಣ ಶಬ್ಧಗಳಲ್ಲಿ ಖಂಡನೆ**

ಅದನ್ನು ಖಂಡಿತವಾಗಿ ಸಹಿಸುವುದಿಲ್ಲ ಎಂದೂ ಭಾರತ ಸ್ಪಷ್ಟಪಡಿಸಿದೆ.

ತನ್ನ ಅಧಿಕೃತ ಪ್ರಕಟಣೆಯಲ್ಲಿ, ಇಸ್ಲಾಮಾಬಾದ್‌ನ ಮಸೀದಿಯಲ್ಲಿ ನಡೆದ ಬಾಂಬ್ ಸ್ಫೋಟದಲ್ಲಿ ಭಾಗಿಯಾಗಿರುವ ಯಾವುದೇ ಆರೋಪವನ್ನು ನಾವು ತಿರಸ್ಕರಿಸುತ್ತೇವೆ. ಅಂತಹ ಹೇಳಿಕೆಗಳು ಆಧಾರರಹಿತ ಮತ್ತು ಅರ್ಥಹೀನ ಎಂದು ಗುಡುಗಿದೆ.

ಇಸ್ಲಾಮಾಬಾದ್ ಮಸೀದಿಯಲ್ಲಿ ನಡೆದ ಬಾಂಬ್ ದಾಳಿ ಖಂಡನೀಯ ಮತ್ತು ಭಾರತವು ಅದರಿಂದ ಉಂಟಾದ ಜೀವಹಾನಿಗೆ ಸಂತಾಪ ಸೂಚಿಸುತ್ತದೆ. ತನ್ನ ಸಾಮಾಜಿಕ ರಚನೆಯನ್ನು ಪೀಡಿಸುತ್ತಿರುವ ಸಮಸ್ಯೆಗಳನ್ನು ಗಂಭೀರವಾಗಿ ಪರಿಹರಿಸುವ ಬದಲು, ಪಾಕಿಸ್ತಾನವು ತನ್ನ ಸ್ಥಳೀಯ ಕಾಯಿಲೆಗಳಿಗೆ ಇತರರನ್ನು ದೂಷಿಸುವ ಮೂಲಕ ತನ್ನನ್ನು ತಾನು ಮೋಸಗೊಳಿಸುವ ಮಾರ್ಗವನ್ನು ಆಯ್ಕೆ ಮಾಡಿಕೊಂಡಿರುವುದು ದುರದೃಷ್ಟಕರ. ಭಾರತವು ಅಂತಹ ಯಾವುದೇ ಆರೋಪವನ್ನು ತಿರಸ್ಕರಿಸುತ್ತದೆ ಎಂದು ವಿದೇಶಾಂಗ ಇಲಾಖೆಯ ಅಧಿಕೃತ ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ. ಇಸ್ಲಾಮಾಬಾದ್ ಮಸೀದಿ ಬಾಂಬ್ ಸ್ಫೋಟವನ್ನು ಸಂಪೂರ್ಣವಾಗಿ ಸ್ಥಳೀಯ ದ್ವೇಷದ ಪರಿಣಾಮ ಎಂದು ಕರೆದಿರುವ ಭಾರತ, ಆಂತರಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬದಲು, ತನ್ನ ವೈಫಲ್ಯಕ್ಕೆ ಬೇರೆಯವರತ್ತ ಬೆರಳು ತೋರುವ ಪಾಕಿಸ್ತಾನದ ನಡೆಯನ್ನು ಟೀಕಿಸಿದೆ. ಭಾರತದ ಈ ಸ್ಪಷ್ಟ ಸಂದೇಶ ಪಾಕಿಸ್ತಾನವನ್ನು ಕೆರಳಿಸಿದೆ.

## ಒಬಾಮಾ ದಂಪತಿ ಮಂಗಗಳಂತೆ ಚಿತ್ರಿಸಿ ವಿಕೃತಿ

**ವಾಷಿಂಗ್ಟನ್:** ಅಮೆರಿಕಾದ ಮಾಜಿ ಅಧ್ಯಕ್ಷ ಬರಾಕ್ ಒಬಾಮ ಮತ್ತು ಮಿಚೆಲ್ ಒಬಾಮಾರನ್ನು ಮಂಗಗಳಂತೆ ಚಿತ್ರಿಸುವ ಜನಾಂಗೀಯ ಕ್ಲಿಪ್ ಅನ್ನು ಒಳಗೊಂಡ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ಹರಿಬಿಡುವ ಮೂಲಕ ವಿಕೃತಿ ಮೆರೆಯಲಾಗಿದೆ.

ಮಾಜಿ ಅಧ್ಯಕ್ಷ ಮತ್ತು ಅವರ ಪತ್ನಿಯ ಬಗ್ಗೆ ಅವಹೇಳನಕಾರಿಯಾಗಿ ಚಿತ್ರಿಸಿ ಸಾಮಾಜಿಕ ಜಾಲತಾಣದಲ್ಲಿ ಪ್ರಕಟಿಸಿರುವುದಕ್ಕೆ ವ್ಯಾಪಕ ವಿರೋಧ ವ್ಯಕ್ತವಾಗಿದೆ, ಇದರ ಬೆನ್ನಲ್ಲೇ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸಾಮಾಜಿಕ ಜಾಲತಾಣದಲ್ಲಿರುವ ಪೋಸ್ಟ್ ತೆಗೆದುಹಾಕಲು ನಿರ್ದೇಶನ ನೀಡಿದ್ದಾರೆ. ದಿ ಲಯನ್ ಸ್ಲೀಪ್ಸ್ ಟುನೈಟ್ ಹಾಡಿಗೆ ಹೊಂದಿಸಲಾದ ಈ ಕ್ಲಿಪ್ 2020 ರ ಅಧ್ಯಕ್ಷೀಯ ಚುನಾವಣೆಯಲ್ಲಿ ಮತದಾರರ ವಂಚನೆಯ ಬಗ್ಗೆ ಹಕ್ಕುಗಳನ್ನು ಹೊಂದಿರುವ ಅವರು ಹಂಚಿಕೊಂಡ 62 ಸೆಕೆಂಡುಗಳ ವಿಡಿಯೋ ಆಗಿದೆ.

ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸಿಬ್ಬಂದಿಯೊಬ್ಬರು ವಿಡಿಯೋವನ್ನು ಪೋಸ್ಟ್ ಮಾಡುವ ಮೊದಲು ಅವರು ಅದರ ಆರಂಭ ಮಾತ್ರ ನೋಡಿದ್ದರು ಮತ್ತು ಅದರಲ್ಲಿ ಒಬಾಮಾ ದಂಪತಿಗಳ ಚಿತ್ರಣವಿದೆ ಎಂದು ತಿಳಿದಿರಲಿಲ್ಲ ಎಂದು ಅವರು ಹೇಳಿದ್ದಾರೆ.

ಕಪ್ಪು ವರ್ಣೀಯರಾದ ರಿಪಬ್ಲಿಕನ್ ಸೆನೆಟರ್ ಟಿಮ್



ಸ್ಕಾಟ್ ಮತ್ತಿತತರು ಒತ್ತಡ ಹೇರಿದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.ಶ್ವೇತಭವನದಿಂದ ನೋಡಿದ ಅತ್ಯಂತ ಜನಾಂಗೀಯ ವಿಷಯ ಎಂದು ಮಾಹಿತಿ ನೀಡಿದ್ದಾರೆ. ಶ್ವೇತಭವನ ಆರಂಭದಲ್ಲಿ ಈ ಕ್ಲಿಪ್ ಅನ್ನು ಇಂಟರ್ನೆಟ್ ಮೀಮ್ ವಿಡಿಯೋ ಎಂದು ಸಮರ್ಥಿಸಿಕೊಂಡಿತ್ತು ಮತ್ತು ವಿಮರ್ಶಕರಿಗೆ ನಕಲಿ ಆಕ್ರೋಶ ಹೆಚ್ಚಾದ ಹಿನ್ನೆಲೆಯಲ್ಲಿ ವಿಡಿಯೋ ತೆಗೆದು ಹಾಕಿದೆ. ಹಲವಾರು ರಿಪಬ್ಲಿಕನ್ ಸೆನೆಟರ್‌ಗಳು ಸೇರಿದಂತೆ ತೀವ್ರ ವಿರೋಧದ ನಂತರ, ಪೋಸ್ಟ್ ಅನ್ನು ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಖಾತೆಯಿಂದ ತೆಗೆದುಹಾಕಲಾಗಿದೆ ಮತ್ತು ಶ್ವೇತಭವನದ ಅಧಿಕಾರಿಯೊಬ್ಬರು ಹೇಳಿದ್ದಾರೆ. ಕಪ್ಪು ಜನರನ್ನು ಮಂಗಗಳಿಗೆ ಹೋಲಿಸುವ ಜನಾಂಗೀಯ ವ್ಯಂಗ್ಯಚಿತ್ರಗಳನ್ನು ನೆನಪಿಸುವ ಈ ಕ್ಲಿಪ್ ಅನ್ನು ಸಂಪ್ರದಾಯವಾದಿ ಮೀಮ್ ಸೃಷ್ಟಿಕರ್ತ ಕ್ಸೆರಿಯಾಸ್ ಅಕ್ಟೋಬರ್‌ನಲ್ಲಿ ಹಂಚಿಕೊಂಡ ಪೋಸ್ಟ್‌ನಿಂದ ತೆಗೆದುಕೊಳ್ಳಲಾಗಿದೆ ಎಂದು ಹೇಳಲಾಗಿದೆ.

## ಪವನ್ ಕಲ್ಯಾಣ್ ತೆಲಂಗಾಣ ಪ್ರಚಾರ ಪ್ರವಾಸ ಕೊನೆ ಕ್ಷಣದಲ್ಲಿ ರದ್ದು

**ಹೈದರಾಬಾದ್:** ಇದೇ ತಿಂಗಳ ಫೆ. 11 ರಂದು ತೆಲಂಗಾಣದಲ್ಲಿ ನಡೆಯಲಿರುವ ಪುರಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸಿ ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರು ನಡೆಸಬೇಕಿದ್ದ ಪ್ರಚಾರವನ್ನು ರದ್ದುಪಡಿಸಲಾಗಿದೆ.

ಪ್ರಚಾರಕ್ಕೆ ಕೇವಲ ಎರಡು ದಿನಗಳು ಬಾಕಿ ಇರುವಾಗ, ಕಲ್ಯಾಣ್ ಅವರ ರಾಜ್ಯ ಪ್ರವಾಸವನ್ನು ವೇಳಾಪಟ್ಟಿಯಲ್ಲಿನ ಸಮಸ್ಯೆಗಳಿಂದಾಗಿ ರದ್ದುಗೊಳಿಸಲಾಗಿದೆ ಎಂದು ತೆಲಂಗಾಣ ಬಿಜೆಪಿ ಮುಖ್ಯ ವಕ್ತಾರ ಎನ್.ವಿ. ಸುಭಾಷ್ ಪಿಟಿಐಗೆ ತಿಳಿಸಿದ್ದಾರೆ. ತೆಲಂಗಾಣ ಬಿಜೆಪಿ ಅಧ್ಯಕ್ಷ ಎನ್.ರಾಮಚಂದರ್ ರಾವ್ ಫೆ. 4 ರಂದು ಕಲ್ಯಾಣ್ ಪುರಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸಿ ಪ್ರಚಾರ ಮಾಡಲು ಒಪ್ಪಿಕೊಂಡಿದ್ದಾರೆ ಎಂದು ಹೇಳಿದ್ದರು.ಆದಾಗ್ಯೂ, ಕಲ್ಯಾಣ್ ಅವರ ಪ್ರಚಾರವನ್ನು ರದ್ದುಪಡಿಸಿರುವುದು ಕಳೆದ ವರ್ಷ ಡಿಸೆಂಬರ್‌ನಲ್ಲಿ ತೆಂಗಿನ ಮರಗಳಿಂದ ಕೂಡಿದ ಆಂಧ್ರದ ಸುಂದರವಾದ ಕೊನಸೀಮಾ ಪ್ರದೇಶದ ಮೇಲೆ ದುಷ್ಟ ದೃಷ್ಟಿ ಬೀಳಲು



ಆಂಧ್ರಪ್ರದೇಶದ ವಿಭಜನೆಗೆ ಒಂದು ಕಾರಣ ಎಂದು ಅವರು ಮಾಡಿದ ಹೇಳಿಕೆಯ ವಿವಾದದಿಂದಾಗಿ ಎಂಬ ಊಹಾಪೋಹ ಎದ್ದಿದೆ. ಅವರ ಹೇಳಿಕೆಗಳು ತೆಲಂಗಾಣದ ವಿರುದ್ಧವಾಗಿವೆ ಎಂದು ಹೇಳಿಕೊಂಡ ಕಾಂಗ್ರೆಸ್ ನಾಯಕರು, ಅವರಿಂದ ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದ್ದಾರೆ. ಹೇಳಿಕೆಗಳನ್ನು ತಿರುಚಲಾಗಿದೆ ಎಂದು ಜನಸೇನಾ ಹೇಳಿತ್ತು.

ಆದಾಗ್ಯೂ, ತೆಲಂಗಾಣ ಬಿಜೆಪಿ ಮೂಲಗಳು ವಿವಾದದಿಂದಾಗಿ ರದ್ದತಿಯಾಗಿದೆ ಎಂಬ ಊಹಾಪೋಹವನ್ನು ತಳ್ಳಿಹಾಕಿದೆ. ಪವನ್ ಕಲ್ಯಾಣ್ ಅವರ ಹೇಳಿಕೆಗಳು ತೆಲಂಗಾಣದಲ್ಲಿ ನಕಾರಾತಕ ಪರಿಣಾಮ ಬೀರಿಲ್ಲ ಎಂದು ಮೂಲಗಳು ತಿಳಿಸಿವೆ. ಕಲ್ಯಾಣ್ ಒಬ್ಬ ಆಂಧ್ರದ ನಾಯಕ, ಅವರು ಹಿಂದೆ ತೆಲಂಗಾಣದ ಬಗ್ಗೆ ಆಕ್ಷೇಪಾರ್ಹ ಹೇಳಿಕೆಗಳನ್ನು ನೀಡಿದ್ದರು ಎಂದು ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಬಿ ಮಹೇಶ್ ಕುಮಾರ್‌ಗೌಡ್ ಅವರು ಎರಡು ದಿನಗಳ ಹಿಂದೆ ಹೇಳಿದ್ದರು. ತೆಲಂಗಾಣ ಬಿಜೆಪಿ ನಾಯಕರು ಪವನ್ ಕಲ್ಯಾಣ್ ಅವರನ್ನು ಸಹಾಯಕ್ಕಾಗಿ ಬೇಡಿಕೊಂಡರು ಪಕ್ಷಕ್ಕೆ ರಾಜ್ಯದಲ್ಲಿ ಜನರ ಬೆಂಬಲವಿಲ್ಲ ಎಂದು ಗೌಡ್ ಹೇಳಿದ್ದರು. ಕಲ್ಯಾಣ್ ಅವರ ಜನ ಸೇನಾ ಕೂಡ ತೆಲಂಗಾಣ ಪುರಸಭೆ ಚುನಾವಣೆಯಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ.

## ಬಿಜೆಪಿಯ ರಿತು ತಾವ್‌ಡೆ ಮುಂಬೈ ಪಾಲಿಕೆಯ ನೂತನ ಮೇಯರ್

**ಮುಂಬೈ:** ಗ್ರೇಟರ್ ಮುಂಬೈ ಪಾಲಿಕೆಯ ಮೇಯರ್ ಸ್ಥಾನಕ್ಕೆ ಬಿಜೆಪಿಯ ಕಾರ್ಪೊರೇಟರ್ ರಿತು ತಾವ್‌ಡೆ ಅವರನ್ನು ನಾಮನಿರ್ದೇಶನ ಮಾಡಿದರೆ,ಮಿತ್ರ ಪಕ್ಷ ಶಿವಸೇನೆ ಸಂಜಯ್ ಘಾಡಿ ಅವರನ್ನು ಉಪ ಮೇಯರ್ ಹುದ್ದೆಗೆ ತನ್ನ ಅಭ್ಯರ್ಥಿಯಾಗಿ ಘೋಷಿಸಿದೆ. ಬಿಜೆಪಿ ನಾಯಕ ಅಮಿತ್ ಸತಮ್ ತವ್‌ಡೆ ಅವರು ಬಿಜೆಪಿ ಮೇಯರ್ ಅಭ್ಯರ್ಥಿ ಹೆಸರನ್ನು ಘೋಷಿಸಿದರೆ, ಶಿವಸೇನೆ ನಾಯಕ ರಾಹುಲ್ ಶೇವಾಲೆ ಬಿಎಂಸಿ ಪ್ರಧಾನ ಕಚೇರಿಯಲ್ಲಿ ಘಾಡಿ ಅವರ ಉಮೇದುವಾರಿಕೆಯನ್ನು ಘೋಷಿಸಿದರು.

ತಾವ್‌ಡೆ ವಾರ್ಡ್ 132 ರಿಂದ ಕಾರ್ಪೊರೇಟರ್ ಆಗಿದ್ದರೆ, ಘಾಡಿ ವಾರ್ಡ್ 5 ರಿಂದ ಆಯ್ಕೆಯಾದರು. ಘಾಡಿ 15 ತಿಂಗಳ ಕಾಲ ಉಪ ಮೇಯರ್ ಆಗಿ ಸೇವೆ ಸಲ್ಲಿಸಲಿದ್ದಾರೆ ಎಂದು ಶಿವಸೇನೆಯ ಕಾರ್ಯದರ್ಶಿ ಸಂಜಯ್ ಮೋರ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಗೆ ಸೇರಲು ಪಕ್ಷ ಬದಲಾಯಿಸಿದ ಹಿರಿಯ ಮಾಜಿ ಶಿವಸೇನೆ (ಯುಬಿಟಿ) ಕಾರ್ಪೊರೇಟರ್‌ಗಳಲ್ಲಿ ಅವರು ಒಬ್ಬರು. ಮುಂಬೈನಲ್ಲಿ ಉಪ ಮೇಯರ್ ಅವಧಿಯನ್ನು ವಿಭಜಿಸುವ ಮೂಲಕ, ಶಿವಸೇನೆ ತನ್ನ ನಾಲ್ವರು ಕಾರ್ಪೊರೇಟರ್‌ಗಳಿಗೆ ಅವಕಾಶ ನೀಡಲು ಉದ್ದೇಶಿಸಿದೆ.227 ಸದಸ್ಯ ಬಲದ ಬೃಹನ್ಮುಂಬೈ ಮುನ್ಸಿಪಲ್ ಕಾರ್ಪೊರೇಷನ್‌ಗೆ ನಡೆದ ಚುನಾವಣೆಯಲ್ಲಿ, ಬಿಜೆಪಿ 89 ಸ್ಥಾನಗಳೊಂದಿಗೆ ಏಕೈಕ ಅತಿದೊಡ್ಡ ಪಕ್ಷವಾಗಿ ಹೊರ ಹೊಮ್ಮಿದರೆ, ಶಿವಸೇನೆ 29 ಸ್ಥಾನಗಳನ್ನು ಗೆದ್ದಿದೆ. 118 ಕಾರ್ಪೊರೇಟರ್‌ಗಳ ಸಂಯೋಜಿತ ಬಲವನ್ನು ಹೊಂದಿರುವ ಆಡಳಿತ ಮೈತ್ರಿಕೂಟವು ಅಗತ್ಯವಿರುವ 114ನ್ನು ದಾಟಿದೆ ಮತ್ತು ಮೇಯರ್ ಹುದ್ದೆಯನ್ನು ಭದ್ರಪಡಿಸಿಕೊಳ್ಳಲು ಉತ್ತಮ ಸ್ಥಾನದಲ್ಲಿದೆ.

**15 ತಿಂಗಳ ಕಾಲ ಉಪ ಮೇಯರ್ ಆಗಿ ಸೇವೆ**

1997 ರಿಂದ 25 ವರ್ಷಗಳ ಕಾಲ ಪೌರಾಡಳಿತ ಸಂಸ್ಥೆಯನ್ನು ಆಳಿದ ಶಿವಸೇನೆ (ಯುಬಿಟಿ) 65 ಸ್ಥಾನಗಳನ್ನು ಗೆದ್ದರೆ, ಅದರ ಮಿತ್ರಪಕ್ಷಗಳಾದ ಮಹಾರಾಷ್ಟ್ರ ನವನಿರ್ಮಾಣ ಸೇನೆ (ಎಂಎನ್‌ಎಸ್) 6 ಮತ್ತು ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ (ಶರದ್ ಪವಾರ್) ಒಂದು ಸ್ಥಾನವನ್ನು ಗೆದ್ದಿದೆ. ಉಳಿದಂತೆ ಏಕಾಂಗಿಯಾಗಿ ಸ್ಪರ್ಧಿಸಿದ್ದ ಕಾಂಗ್ರೆಸ್ 24 ಸ್ಥಾನಗಳನ್ನು, ಎಐಎಂಐಎಂ-8, ಎನ್‌ಸಿಪಿ (ಅಜಿತ್ ಪವಾರ್ ಬಣ) 3 ಮತ್ತು ಸಮಾಜವಾದಿ ಪಕ್ಷ ಎರಡು ಸ್ಥಾನಗಳನ್ನು ಗೆದ್ದವು. ಒಂಬತ್ತು ವರ್ಷಗಳ ಅಂತರದ ನಡೆದ ಪ್ರತಿಷ್ಠೆ ಪಣತೊಟ್ಟ ಚುನಾವಣೆಯಲ್ಲಿ ಇಬ್ಬರು ಸ್ವತಂತ್ರ ಅಭ್ಯರ್ಥಿಗಳು ಸಹ ಗೆದ್ದಿದ್ದಾರೆ.



# ಒಮಾನ್ ಮಾತುಕತೆ ಬಳಿಕ ಇರಾನ್ ತೈಲದ ಮೇಲೆ ಅಮೆರಿಕದ ನಿರ್ಬಂಧ

### ಅಮೆರಿಕವು ಈಗಾಗಲೇ ಅನ್ಯ ದೇಶಗಳು ಇರಾನ್‌ನಿಂದ ತೈಲ ಖರೀದಿಸುವುದರ ಮೇಲೆ ಭಾರೀ ನಿರ್ಬಂಧಗಳನ್ನು ವಿಧಿಸಿದೆ

**ವಾಷಿಂಗ್ಟನ್ ಡಿಸಿ:** ಒಮಾನ್‌ನಲ್ಲಿ ನಡೆದ ಅಮೆರಿಕ-ಇರಾನ್ ಶಾಂತಿ ಮಾತುಕತೆ ಫಲಿತಾಂಶವೇನು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಉಭಯ ರಾಷ್ಟ್ರಗಳೂ ಮಾತುಕತೆಗಳು ಫಲಪ್ರದ ಎಂದು ಬಣ್ಣಿಸಿದ್ದರೂ, ಅವು ತೋರುತ್ತಿರುವ ವರ್ತನೆ ಮಾತ್ರ ಇದಕ್ಕೆ ಭಿನ್ನವಾಗಿದೆ.

ಒಮಾನ್‌ನಲ್ಲಿ ನಡೆದ ಮಾತುಕತೆಗಳ ಬಳಿಕ ಅಮೆರಿಕವು ಇರಾನ್ ತೈಲದ ಮೇಲೆ ಹೊಸದಾಗಿ ನಿರ್ಬಂಧಗಳನ್ನು ವಿಧಿಸಿದೆ. ಇರಾನ್‌ನ ತೈಲ ರಫ್ತುಗಳನ್ನು ತಡೆಯುವ ಉದ್ದೇಶ ಹೊಂದಿರುವ ಅಮೆರಿಕ ಪ್ರಮುಖವಾಗಿ ಅದರ 14 ಹಡಗುಗಳನ್ನು ಗುರಿಯಾಗಿಸಿಕೊಂಡಿದೆ.

ಈ ಕುರಿತು ಮಾತನಾಡಿರುವ ವಿದೇಶಾಂಗ ಇಲಾಖೆಯ ವಕ್ತಾರ ಟಾಮಿ ಪಿಗೋಟ್, ಇರಾನ್ ತನಗೆ ಬರುವ ತೈಲ ಆದಾಯವನ್ನು ವಿಶ್ವದಾದ್ಯಂತ ಅಸ್ಥಿರಗೊಳಿಸುವ ಚಟುವಟಿಕೆಗಳಿಗೆ ಹಣಕಾಸು ಒದಗಿಸಲು ಮತ್ತು ಇರಾನ್‌ನೊಳಗೆ ತನ್ನ ದಮನವನ್ನು ಹೆಚ್ಚಿಸಲು ಬಳಸುತ್ತಿದೆ ಎಂದು ಆರೋಪಿಸಿದ್ದಾರೆ.

ಮುಂದುವರೆದು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ತಮ್ಮ ಆಡಳಿತದ ಗರಿಷ್ಠ ಒತ್ತಡದ ಅಭಿಯಾನದ ಅಡಿಯಲ್ಲಿ, ಇರಾನ್ ಆಡಳಿತದ ಅಕ್ರಮ ತೈಲ ಮತ್ತು ಪೆಟ್ರೋಕೆಮಿಕಲ್ ರಫ್ತುಗಳನ್ನು ಕಡಿಮೆ ಮಾಡಲು ಬದ್ಧರಾಗಿದ್ದಾರೆ ಎಂದು ಪಿಗೋಟ್



ತಮ್ಮ ಹೇಳಿಕೆಯಲ್ಲಿ ಉಲ್ಲೇಖಿಸಿದ್ದಾರೆ.

ಟರ್ಕಿ, ಭಾರತ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್‌ನಿಂದ ಬಂದ ಹಡಗುಗಳು ಸೇರಿದಂತೆ, ಇರಾನ್ ತೈಲವನ್ನು ಸಾಗಿಸುವ 14 ಹಡಗುಗಳೊಂದಿಗಿನ ಯಾವುದೇ ವಹಿವಾಟುಗಳನ್ನು ನಿರ್ಬಂಧಿಸಲು ವಿದೇಶಾಂಗ ಇಲಾಖೆ ಆದೇಶಿಸಲಿದೆ ಎಂದು ಅಮೆರಿಕದ ವಿದೇಶಾಂಗ ಇಲಾಖೆಯ ವಕ್ತಾರ ಸ್ಪಷ್ಟಪಡಿಸಿದ್ದಾರೆ. ಅಮೆರಿಕ-ಇರಾನ್ ಸಂಘರ್ಷದಿಂದ ಕಚ್ಚಾತೈಲ ಬೆಲೆ ಏರಿಕೆ ಕಂಡಿದೆ.

- ಒಮಾನ್‌ನಲ್ಲಿ ಅಮೆರಿಕ-ಇರಾನ್ ಶಾಂತಿ ಮಾತುಕತೆ ಪೂರ್ಣ.
- ಮಾತುಕತೆ ಬಳಿಕ ಇರಾನ್ ಮೇಲೆ ಹೊಸದಾಗಿ ತೈಲ ನಿರ್ಬಂಧ ವಿಧಿಸಿದ ಅಮೆರಿಕ.
- ಅಮೆರಿಕ ಮತ್ತು ಇರಾನ್ ನಡುವೆ ಮುಂದುವರೆದ ಉದ್ವಿಗ್ನತೆ.

ಇದೇ ವೇಳೆ ಅಮೆರಿಕವು ಇರಾನ್‌ನ 15 ಸಂಸ್ಥೆಗಳು ಮತ್ತು ಖಮೇನಿ ಆಡಳಿತಕ್ಕೆ ಹತ್ತಿರವಿರುವ ಇಬ್ಬರು ಪ್ರಮುಖ ವ್ಯಕ್ತಿಗಳ ಮೇಲೂ ನಿರ್ಬಂಧಗಳನ್ನು ವಿಧಿಸಿದೆ. ಅಮೆರಿಕವು ಈಗಾಗಲೇ ಅನ್ಯ ದೇಶಗಳು ಇರಾನ್‌ನಿಂದ ತೈಲ ಖರೀದಿಸುವುದರ ಮೇಲೆ ಭಾರೀ ನಿರ್ಬಂಧಗಳನ್ನು ವಿಧಿಸಿದೆ.ಇನ್ನು ಒಮಾನ್‌ನಲ್ಲಿ ನಡೆದ ಮಾತುಕತೆಗಳ ಬಗ್ಗೆ ಅಮೆರಿಕ ಮತ್ತು ಇರಾನ್ ಎರಡೂ ಸಕಾರಾತ್ಮಕ ಹೇಳಿಕೆಗಳನ್ನು ಬಿಡುಗಡೆ ಮಾಡಿವೆ. ಈ ಕುರಿತು ಪ್ರತಿಕ್ರಿಯಿಸಿರುವ ಇರಾನ್‌ನ ವಿದೇಶಾಂಗ ಅಬ್ಬಾಸ್ ಅರಾಘ್ಚಿ, ಒಮಾನ್‌ನಲ್ಲಿ ನಡೆದ ಪರೋಕ್ಷ ಮಾತುಕತೆಗಳು ಸಕಾರಾತ್ಮಕ ವಾತಾವರಣವನ್ನು ಸೃಷ್ಟಿಸಿದೆ. ನಾವು ನಮ್ಮ ಪರಮಾಣು ಕಾರ್ಯಕ್ರಮಗಳ ಉದ್ದೇಶದ ಬಗ್ಗೆ, ಸಭೆಗೆ ಸ್ಪಷ್ಟವಾದ ನಿಲುವು ವ್ಯಕ್ತಪಡಿಸಿದ್ದೇವೆ ಎಂದು ಹೇಳಿದ್ದಾರೆ.

**ಮತ್ತಷ್ಟು ಹದಗೆಟ್ಟ ಸಂಬಂಧ**

ಇರಾನ್ ಹಿಂಸಾತ್ಮಕ ಪ್ರತಿಭಟನೆಗಳಿಗೆ ಅಮೆರಿಕದ ಬೆಂಬಲ, ಮತ್ತು ಇರಾನ್‌ನತ್ತ ಅಮೆರಿಕದ ಯುದ್ಧ ಹಡಗು ರವಾನೆ ಬೆಳವಣಿಗೆಗಳ ಬಳಿಕ, ಉಭಯ ರಾಷ್ಟ್ರಗಳ ನಡುವೆ ಒಮಾನ್‌ನಲ್ಲಿ ಶಾಂತಿ ಮಾತುಕತೆಗಳು ನಡೆದಿವೆ. ಡೊನಾಲ್ಡ್ ಟ್ರಂಪ್ ಅವರು ಇರಾನ್ ವಿರುದ್ಧ ಬಲಪ್ರಯೋಗ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ. ಇದಕ್ಕೆ ಪ್ರತಿಯಾಗಿ ಇರಾನ್ ಕೂಡ ಅಮೆರಿಕದ ಸಂಭಾವ್ಯ ದಾಳಿಗಳನ್ನು ಎದುರಿಸಲು ಸಿದ್ಧ ಎಂದು ಹೇಳಿದೆ.

ಒಟ್ಟಿನಲ್ಲಿ ಒಮಾನ್ ಮಾತುಕತೆಗಳ ಬಳಿಕ ಅಮೆರಿಕವು ಇರಾನ್ ತೈಲದ ಮೇಲೆ ನಿರ್ಬಂಧ ವಿಧಿಸಿರುವುದು, ಉಭಯ ರಾಷ್ಟ್ರಗಳ ನಡುವಿನ ಉದ್ವಿಗ್ನತೆ ಇನ್ನಷ್ಟು ದಿನಗಳ ಕಾಲ ಮುಂದುವರೆಯಲಿದೆ ಎಂಬ ಮುನ್ಸೂಚನೆ ನೀಡಿದೆ.

# ದೊಡ್ಡ ಡೀಲ್‌ಗೆ ಮುಂದಾದ ರಾಜಮೌಳಿ

ನಿರ್ದೇಶಕ ರಾಜಮೌಳಿ 'ವಾರಣಾಸಿ' ಸಿನಿಮಾದ ಕೆಲಸಗಳ ನಡುವೆ ಜಪಾನಿ ಸ್ಟುಡಿಯೋಗಳೊಂದಿಗೆ ದೊಡ್ಡ ಒಪ್ಪಂದಕ್ಕೆ ಮುಂದಾಗಿದ್ದಾರೆ. 'ಆರ್‌ಆರ್‌ಆರ್' ಚಿತ್ರವನ್ನು ಅನಿಮೆ ರೂಪದಲ್ಲಿ ನಿರ್ಮಿಸಲು ಮಾತುಕತೆ ನಡೆಸಲಾಗುತ್ತಿದೆ. ಈ ಕುರಿತು ಅವರೇ ಖಚಿತಪಡಿಸಿದ್ದು, ಡೀಲ್ ಅಂತಿಮವಾದರೆ 'ಆರ್‌ಆರ್‌ಆರ್' ಅನಿಮೆ ಭಾಗವಾಗುವ ಸಾಧ್ಯತೆ ಇದೆ. ಮಹೇಶ್ ಬಾಬು ನಟನೆಯ 'ವಾರಣಾಸಿ' 2027ರಲ್ಲಿ ತೆರೆ ಕಾಣಲಿದೆ.



ನಿರ್ದೇಶಕ ರಾಜಮೌಳಿ ಅವರು 'ವಾರಣಾಸಿ' ಸಿನಿಮಾ ಕೆಲಸಗಳಲ್ಲಿ ತೊಡಗಿಕೊಂಡಿದ್ದಾರೆ. ಈ ಚಿತ್ರದ ಬಗ್ಗೆ ಅಭಿಮಾನಿಗಳಿಗೆ ನಿರೀಕ್ಷೆ ಇದೆ. ಮಹೇಶ್ ಬಾಬು, ಪ್ರಿಯಾಂಕಾ ಚೋಪ್ರಾ, ಮೊದಲಾದವರು ಈ ಸಿನಿಮಾದಲ್ಲಿ ನಟಿಸಿದ್ದಾರೆ. ಈಗ ರಾಜಮೌಳಿ ಅವರು ಸದ್ದಿಲ್ಲದೆ, ಸೈಡಲ್ಲಿ ಮತ್ತೊಂದು ಸಿನಿಮಾ ಮಾಡುತ್ತಿದ್ದಾರೆ. ಈ ವಿಷಯ ಅನೇಕರಿಗೆ ಅಚ್ಚರಿ ಮೂಡಿಸಿದೆ. ಈ ವಿಷಯವನ್ನು ಸ್ವತಃ ಅವರೇ ಖಚಿತಪಡಿಸಿದ್ದಾರೆ.

'ವಾರಣಾಸಿ' ಸಿನಿಮಾ 2027ರ ಏಪ್ರಿಲ್ 7ರಂದು ರಿಲೀಸ್ ಆಗಲಿದೆ. ಈ ಚಿತ್ರಕ್ಕೆ ಈಗಲೇ ಪ್ರಚಾರ ಆರಂಭಿಸಿದ್ದಾರೆ. ಇತ್ತೀಚೆಗೆ ಅವರು ಪ್ರಿಯಾಂಕಾ ಚೋಪ್ರಾ, ಮಹೇಶ್ ಬಾಬು, ಪೃಥ್ವಿರಾಜ್ ಸುಕುಮಾರನ್ ಜೊತೆ ಹಾಲಿವುಡ್ ಮಾಧ್ಯಮಕ್ಕೆ ಸಂದರ್ಶನ ನೀಡಿದ್ದಾರೆ. ಈ ಸಂದರ್ಶನದ ವೇಳೆ ರಾಜಮೌಳಿ ಅವರು ಈ ವಿಷಯ ಹೇಳಿದ್ದಾರೆ. 'ಆರ್‌ಆರ್‌ಆರ್'ಸಿನಿಮಾನ ಜಪಾನ್ ಅಲ್ಲೂ ನೋಡಿದ್ದಾರೆ. ಅಲ್ಲಿಯೂ ಈ ಚಿತ್ರ ಇಷ್ಟಪಟ್ಟಿದ್ದಾರೆ. ಈ ಸಿನಿಮಾನ ಅನಿಮೇ ವರ್ಷನ್ ಅಲ್ಲಿ ಮಾಡಲು ಜಪಾನ್ ಸ್ಟುಡಿಯೋಗಳ ಜೊತೆ ಮಾತುಕತೆ ನಡೆದಿದೆ. ಆದರೆ, ಯಾವುದೂ ಫೈನಲ್ ಆಗಿಲ್ಲವಂತೆ. ಒಂದೊಮ್ಮೆ ಈ ಡೀಲ್ ಫೈನಲ್ ಆದರೆ, ಇದರ ಕೆಲಸಗಳಲ್ಲಿ ಅವರು ತೊಡಗಿಕೊಳ್ಳಬಹುದು. 'ವಾರಣಾಸಿ' ಸಿನಿಮಾ ಶೂಟಿಂಗ್ ಹಂತದಲ್ಲಿ ಇದೆ. ಈ ಚಿತ್ರ ರಿಲೀಸ್‌ಗೆ ಇನ್ನೂ ಒಂದು ವರ್ಷ ಇದೆ.

**ಜಪನೀಸ್ ಸ್ಟುಡಿಯೋಗಳ ಜೊತೆ ಮಾತು**



# ತೆರೆಮೇಲೂ ಕೀಳಾಗಿ ಕಾಣಲು ಇಷ್ಟಪಡಲ್ಲ

ಪೂಜಾ ಬೇಡಿ ಜೂನಿಯರ್ ಎನ್‌ಟಿಆರ್ ಬಗ್ಗೆ ಆಸಕ್ತಿದಾಯಕ ಸಂಗತಿ ಹಂಚಿಕೊಂಡಿದ್ದಾರೆ. 'ಶಕ್ತಿ' ಚಿತ್ರೀಕರಣದ ವೇಳೆ, ಎನ್‌ಟಿಆರ್ ಮಹಿಳೆಯರ ಮೇಲೆ ಕೈ ಎತ್ತಲು ನಿರಾಕರಿಸಿದರು. ಅವರ ಈ ಮಹಿಳಾ ಗೌರವವನ್ನು ಪೂಜಾ ಬೇಡಿ ಶ್ಲಾಘಿಸಿದ್ದಾರೆ. ಇಂದಿನ ಚಿತ್ರರಂಗದಲ್ಲಿ ಇಂತಹ ಮೌಲ್ಯಗಳು ಅಪರೂಪ ಎಂದಿದ್ದಾರೆ. ಜನಪ್ರಿಯ ಬಾಲಿವುಡ್ ನಟಿ ಪೂಜಾ ಬೇಡಿ ತೆಲುಗು ಪ್ರೇಕ್ಷಕರಿಗೂ ಪರಿಚಿತರು. ಅವರು ಈ ಹಿಂದೆ 'ಚಿಟ್ಟೆಮ್ಮ ಮೊಗುಡು' (1993) ಮತ್ತು 'ಶಕ್ತಿ' (2011) ಚಿತ್ರಗಳಲ್ಲಿ ನಟಿಸಿದ್ದಾರೆ.



ಅವರು ಬಹಳ ಸಮಯದ ನಂತರ ತೆಲುಗು ಪರದೆಗೆ ಮರಳಿದ್ದಾರೆ. ಚಂದ್ರಹಾಸ್ ನಾಯಕನಾಗಿ ನಟಿಸಿದ 'ಬರಬಾರ್ ಪ್ರೇಮಿಸ್ತಾ' ಚಿತ್ರದಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಈ ಚಿತ್ರದ ಪ್ರಚಾರದ ಭಾಗವಾಗಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಮಾತನಾಡಿದ ಪೂಜಾ ಬೇಡಿ, ಜೂನಿಯರ್ ಎನ್ ಟಿಆರ್ ಬಗ್ಗೆ ಕೆಲವು ಆಸಕ್ತಿದಾಯಕ ಸಂಗತಿಗಳನ್ನು ಹಂಚಿಕೊಂಡರು. 'ಶಕ್ತಿ' ಚಿತ್ರದ ಚಿತ್ರೀಕರಣದ ಸಮಯದಲ್ಲಿ ನಡೆದ ಒಂದು ಘಟನೆಯನ್ನು ಪೂಜಾ ಬೇಡಿ ನೆನಪಿಸಿಕೊಂಡರು. 'ನಾನು 'ಶಕ್ತಿ' ಚಿತ್ರದಲ್ಲಿ ಸೋನು ಸೂದ್ ಅವರ ಪತ್ನಿಯಾಗಿ ನಟಿಸಿದ್ದೇನೆ. ಅದರಲ್ಲಿ ನನ್ನ ಪಾತ್ರವು ನಕಾರಾತ್ಮಕ ಛಾಯೆಗಳನ್ನು ಹೊಂದಿತ್ತು. ಕಥೆಯ ಪ್ರಕಾರ, ಒಂದು ದೃಶ್ಯದಲ್ಲಿ, ನಾಯಕ ಎನ್ಟಿಆರ್ ನನ್ನೊಂದಿಗೆ ಜಗಳವಾಡಬೇಕಾಯಿತು. ಆದರೆ ಜೂನಿಯರ್ ಎನ್ಟಿಆರ್ ಆ ದೃಶ್ಯವನ್ನು ಮಾಡಲು ಒಪ್ಪಲಿಲ್ಲ. ಅವರು ನಿರಾಕರಿಸಿದರು, ನಾನು ಮಹಿಳೆಯರೊಂದಿಗೆ ಜಗಳವಾಡಲು ಸಾಧ್ಯವಿಲ್ಲ ಎಂದು ಹೇಳಿದರು. ಚಿತ್ರಕ್ಕಾಗಿ ಮಹಿಳೆಯ ವಿರುದ್ಧ ಕೈ ಎತ್ತಲು ಬಯಸುವುದಿಲ್ಲ ಎಂದು ಅವರು ಹೇಳಿದ್ದು ಅವರ ಮೇಲಿನ ನನ್ನ ಗೌರವವನ್ನು ಇನ್ನಷ್ಟು ಹೆಚ್ಚಿಸಿತು' ಎಂದು ಪೂಜಾ ಬೇಡಿ ವಿವರಿಸಿದರು. ಇಂದಿನ ಚಲನಚಿತ್ರ ಜಗತ್ತಿನಲ್ಲಿ, ಅಂತಹ ಮೌಲ್ಯಗಳನ್ನು ಅನುಸರಿಸುವ ಜನರು ಬಹಳ ಅಪರೂಪ ಎಂದು ಅವರು ಹೊಗಳಿದರು. ಸಿನಿಮಾಗಳಲ್ಲಿ ನಾಯಕಿಯರು ಅಥವಾ ನಕಾರಾತ್ಮಕ ಪಾತ್ರಗಳನ್ನು ನಿರ್ವಹಿಸುವ ಮಹಿಳೆಯರೊಂದಿಗೆ ನಾಯಕರು ತೆರೆಮೇಲೆ ಜಗಳವಾಡುವುದು ಸಾಮಾನ್ಯ.

ವಸಿಷ್ಠ ಸಿಂಹ ಮತ್ತು ಹರಿಪ್ರಿಯ ಅವರು ಸ್ಯಾಂಡಲ್‌ವುಡ್‌ನ ಕ್ಯೂಟ್ ಜೋಡಿಗಳಲ್ಲಿ ಒಂದು. ಪ್ರೀತಿಸಿ ಮದುವೆ ಆದ ಹರಿಪ್ರಿಯ ಮತ್ತು ವಸಿಷ್ಠ ಸಿಂಹ ಇದೀಗ ಒಂದು ಮುದ್ದಾದ ಮುಗುವಿನ ಪೋಷಕರು ಸಹ ಆಗಿದ್ದಾರೆ. ಸಿನಿಮಾ, ಜಾಹೀರಾತುಗಳಲ್ಲಿ ಬ್ಯುಸಿಯಾಗಿರುವ ಈ ಜೋಡಿ ಇದೀಗ ತಮ್ಮ ಮನೆಗೆ ಹೊಸ ಅತಿಥಿಯನ್ನು ಸ್ವಾಗತಿಸಿದ್ದಾರೆ. ಈ ಜೋಡಿ ಹೊಸ ಐಶಾರಾಮಿ ಕಾರೊಂದನ್ನು ಈ ಜೋಡಿ ಖರೀದಿ ಮಾಡಿದೆ. ಕಾರಿನ ವೈಶಿಷ್ಟ್ಯತೆಗಳೇನು ಕಾರಿನ ಬೆಲೆ ಎಷ್ಟು ಮಾಹಿತಿ ಇಲ್ಲಿದೆ.



# ಕಾರ್ತಿಕ್‌ಗೆ ನೆಗೆಟಿವ್ ಪಾತ್ರ

ಹೇಮಂತ್ ಕುಮಾರ್ 'ಆಲ್ಫಾ' ಸಿನಿಮಾ ಮೂಲಕ ಸ್ಯಾಂಡಲ್‌ವುಡ್‌ಗೆ ಪಾದಾರ್ಪಣೆ ಮಾಡುತ್ತಿದ್ದಾರೆ. ಫೆಬ್ರವರಿ 20ಕ್ಕೆ ರಿಲೀಸ್ ಆಗಲಿರುವ ಈ ಚಿತ್ರದ ಟ್ರೇಲರ್ ಗಮನ ಸೆಳೆದಿದೆ. ಡ್ರಗ್ಸ್, ಪ್ರೇಮಕಥೆ ಒಳಗೊಂಡ ಈ ಚಿತ್ರದಲ್ಲಿ ಕಾರ್ತಿಕ್ ಮಹೇಶ್ ನೆಗೆಟಿವ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಹೇಮಂತ್ ಫೈಟ್, ಡ್ಯಾನ್ಸ್‌ನಲ್ಲಿ ಶ್ರಮ ಹಾಕಿರುವುದನ್ನು ಟ್ರೇಲರ್‌ನಲ್ಲಿ ನೋಡಬಹುದು. ಕನ್ನಡ ಚಿತ್ರರಂಗಕ್ಕೆ ಹೊಸ ಹೊಸ ಪ್ರತಿಭೆಗಳ ಎಂಟ್ರಿ ಆಗುತ್ತಲೇ ಇರುತ್ತದೆ. ಈಗ ಹೇಮಂತ್ ಕುಮಾರ್ ಹೆಸರಿನ ಹೊಸ ಪ್ರತಿಭೆ 'ಆಲ್ಫಾ' ಸಿನಿಮಾ ಮೂಲಕ ಎಂಟ್ರಿ ಕೊಡಲು ರೆಡಿ ಆಗಿದ್ದಾರೆ. ಫೆಬ್ರವರಿ 20ರಂದು ಸಿನಿಮಾ ರಿಲೀಸ್ ಆಗುತ್ತಿದೆ. ಈ ಚಿತ್ರದ ಟ್ರೇಲರ್ ರಿಲೀಸ್ ಆಗಿ ಗಮನ ಸೆಳೆದಿದೆ. ಈ ಚಿತ್ರದಲ್ಲಿ ಕಾರ್ತಿಕ್ ಮಹೇಶ್ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಈ ಚಿತ್ರದ ಟ್ರೇಲರ್ ಸಖತ್ ರಾ ಆಗಿದೆ. ಹೇಮಂತ್ ಅವರು 'ಆಲ್ಫಾ' ಚಿತ್ರಕ್ಕಾಗಿ ಸಾಕಷ್ಟು ಶ್ರಮ ಹಾಕಿದ್ದಾರೆ. ಅವರು ಫೈಟ್, ಡ್ಯಾನ್ಸ್ ಶ್ರದ್ಧೆಯಿಂದ ಕಲಿತಿರೋದು ಟ್ರೇಲರ್ ಅಲ್ಲಿ ನೋಡಿದರೆ ಗೊತ್ತಾಗುತ್ತದೆ. ಟ್ರೇಲರ್ ನೋಡಿದರೆ ಡ್ರಗ್ಸ್ ಹಾಗೂ ಇತರ ವಿಷಯಗಳ ಬಗ್ಗೆ ನಿರ್ದೇಶಕರು ಹೇಳಲು ಹೊರಟಂತೆ ಇದೆ. ಈ ಚಿತ್ರದಲ್ಲಿ ಒಂದು ಸುಂದರ ಪ್ರೇಮಕಥೆ ಕೂಡ ಇದೆ.

'ಆಲ್ಫಾ' ಸಿನಿಮಾದಲ್ಲಿ ಕಾರ್ತಿಕ್ ನಟಿಸುತ್ತಿದ್ದಾರೆ ಎಂದಾಗಲೇ ಸಾಕಷ್ಟು ಚರ್ಚೆಗಳು ನಡೆದವು. ಈಗ ಸಿನಿಮಾದಲ್ಲಿ ಅವರ ಅವತಾರ ರಿವೀಲ್ ಆಗಿದೆ. ಈ ಸಿನಿಮಾದಲ್ಲಿ ಅವರದ್ದು ನೆಗೆಟಿವ್ ಪಾತ್ರ ಎಂಬುದು ಸ್ಪಷ್ಟವಾಗಿದೆ. ಆದರೆ, ಪಾತ್ರ ಪ್ರಾಮುಖ್ಯತೆ ಇದೆ ಎಂಬ ಕಾರಣಕ್ಕೆ ಅವರು ಸಿನಿಮಾನ ಒಪ್ಪಿಕೊಂಡಿದ್ದಾರೆ.

**ಗಮನ ಸೆಳೆದ ಹೊಸ ಪ್ರತಿಭೆ**

# ಪತಿಯನ್ನು 'ಬೇಬಿ ಪಾಪಾ' ಎಂದ ಐಶ್ವರ್ಯಾ

ಅಭಿಷೇಕ್ ಬಚ್ಚನ್ ಮತ್ತು ಐಶ್ವರ್ಯಾ ರೈಗೆ ಓರ್ವ ಮಗಳಿದ್ದಾಳೆ. ಕೆಲವು ದಿನಗಳ ಹಿಂದೆ, ಅಭಿಷೇಕ್ ಬಚ್ಚನ್ ಮತ್ತು ಐಶ್ವರ್ಯ ರೈ ಅವರ ವಿಚ್ಛೇದನದ ಬಗ್ಗೆ ಬಲವಾದ ಮಾತುಕತೆಗಳು ನಡೆದವು. ಆದರೆ ಅದು ಸುಳ್ಳಾಗಿದೆ. ಐಶ್ವರ್ಯ ರೈ ಯಾವಾಗಲೂ ತಮ್ಮ ಮಗಳು ಆರಾಧ್ಯ ಬಚ್ಚನ್ ಜೊತೆ ವಿದೇಶಕ್ಕೆ ಹೋಗುವುದನ್ನು ಕಾಣಬಹುದು.

ಇತ್ತೀಚೆಗೆ, ಐಶ್ವರ್ಯಾ ರೈ ವಿಶೇಷ ಪೋಸ್ಟ್‌ನಲ್ಲಿ ಅಭಿಷೇಕ್ ಬಗೆಗಿನ ವಿಶೇಷ ವಿಷಯವನ್ನು ಬಹಿರಂಗಪಡಿಸಿದರು. ಅಭಿಷೇಕ್ ಬಚ್ಚನ್ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ಐಶ್ವರ್ಯಾ ರೈ ವಿಶೇಷ ಪೋಸ್ಟ್ ಅನ್ನು ಹಂಚಿಕೊಂಡರು. ಅವರು ಅಭಿಷೇಕ್ ಬಚ್ಚನ್ ಅವರ ವಯಸ್ಸಿನ ಬಗ್ಗೆಯೂ ನೇರವಾಗಿ ಮಾತನಾಡಿದ್ದಾರೆ. ಐಶ್ವರ್ಯಾ ರೈ ಹಂಚಿಕೊಂಡ ಪೋಸ್ಟ್ ಅಭಿಮಾನಿಗಳಿಗೆ ತುಂಬಾ ಇಷ್ಟವಾಗಿದೆ. ಅಬಿಷೇಕ್ ಅವರನ್ನು 'ಬೇಬಿ ಪಾಪಾ' ಎಂದು ಕರೆಯುವ ಐಶ್ವರ್ಯಾ ರೈ, ಅಭಿಷೇಕ್ ಬಚ್ಚನ್‌ಗೆ 50 ವರ್ಷ ವಯಸ್ಸಾಗಿದೆ ಎಂದು ಹೇಳಿದರು. ಅಭಿಷೇಕ್ ಬಚ್ಚನ್ ಅವರ ವಯಸ್ಸಿನ ಬಗ್ಗೆ ಐಶ್ವರ್ಯಾ ರೈ ಬಹಿರಂಗಪಡಿಸಿದ್ದಾರೆ. ಈಗ ಅಭಿಷೇಕ್ ಬಚ್ಚನ್ 50 ನೇ ವಯಸ್ಸಿನಲ್ಲಿ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ್ದಾರೆ. ಅಭಿಷೇಕ್ ಬಚ್ಚನ್ ಕೆಲವು ದಿನಗಳ ಹಿಂದೆ ಒಂದು ಸಂದರ್ಶನ ನೀಡಿದ್ದರು.

# ಹೊಸ ಕಾರು ಖರೀದಿಸಿದ ವಸಿಷ್ಠಸಿಂಹ-ಹರಿಪ್ರಿಯಾ

ವಸಿಷ್ಠ ಸಿಂಹ ಮತ್ತು ಹರಿಪ್ರಿಯ ಅವರು ಸ್ಯಾಂಡಲ್‌ವುಡ್‌ನ ಕ್ಯೂಟ್ ಜೋಡಿಗಳಲ್ಲಿ ಒಂದು. ಪ್ರೀತಿಸಿ ಮದುವೆ ಆದ ಹರಿಪ್ರಿಯ ಮತ್ತು ವಸಿಷ್ಠ ಸಿಂಹ ಇದೀಗ ಒಂದು ಮುದ್ದಾದ ಮುಗುವಿನ ಪೋಷಕರು ಸಹ ಆಗಿದ್ದಾರೆ. ಸಿನಿಮಾ, ಜಾಹೀರಾತುಗಳಲ್ಲಿ ಬ್ಯುಸಿಯಾಗಿರುವ ಈ ಜೋಡಿ ಇದೀಗ ತಮ್ಮ ಮನೆಗೆ ಹೊಸ ಅತಿಥಿಯನ್ನು ಸ್ವಾಗತಿಸಿದ್ದಾರೆ. ಈ ಜೋಡಿ ಹೊಸ ಐಶಾರಾಮಿ ಕಾರೊಂದನ್ನು ಈ ಜೋಡಿ ಖರೀದಿ ಮಾಡಿದೆ. ದುಬಾರಿ ಬೆಲೆಯ ಈ ಕಾರು ಸಾಕಷ್ಟು ವೈಶಿಷ್ಟ್ಯತೆಗಳನ್ನು ಒಳಗೊಂಡಿದೆ. ವಸಿಷ್ಠ ಸಿಂಹ ಮತ್ತು ಹರಿಪ್ರಿಯ ಅವರು ಟೊಯೊಟಾ ಇನ್ನೊವಾ ಹೈಕ್ರಾಸ್ ಕಾರನ್ನು ಖರೀದಿ ಮಾಡಿದ್ದಾರೆ. ಹೊಸ ಕಾರಿನ ಡೆಲಿವರಿ ಪಡೆಯುತ್ತಿರುವ ಫೋಟೋಗಳು ಮತ್ತು ವಿಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿವೆ.



**50 ನೇ ವಯಸ್ಸಿನಲ್ಲಿ ಚಿತ್ರರಂಗಕ್ಕೆ ಪಾದಾರ್ಪಣೆ**

# ಚಾಂಪಿಯನ್ ಯುವ ಭಾರತಕ್ಕೆ ಭರ್ಜರಿ ಬಹುಮಾನ ಘೋಷಿಸಿದ ಬಿಸಿಸಿಐ

ಹರಾರೆಯಲ್ಲಿ ಇಂಗ್ಲೆಂಡ್ ವಿರುದ್ಧ ದಾಖಲೆಯ 6ನೇ ಅಂಡರ್ 19 ವಿಶ್ವಕಪ್ ಗೆದ್ದ ಭಾರತ ಯುವ ಪಡೆಗೆ ಬಿಸಿಸಿಐ ಭಾರಿ ಬಹುಮಾನ ಘೋಷಿಸಿದೆ. ಫೈನಲ್‌ನಲ್ಲಿ 311 ರನ್ ಗಳಿಸಿ, ಇಂಗ್ಲೆಂಡ್ ತಂಡವನ್ನು 100 ರನ್‌ಗಳಿಂದ ಮಣಿಸಿ ಚಾಂಪಿಯನ್ ಪಟ್ಟಕ್ಕೇರಿದ ತಂಡದ ಆಟಗಾರರು, ಕೋಚಿಂಗ್ ಸಿಬ್ಬಂದಿ ಮತ್ತು ಸಹಾಯಕ ಸಿಬ್ಬಂದಿಗೆ 7.5 ಕೋಟಿ ರೂ. ನಗದು ಬಹುಮಾನ ದೊರೆಯಲಿದೆ. ಈ ಗೆಲುವು ಭಾರತದ ಕ್ರಿಕೆಟ್ ಕೀರ್ತಿಯನ್ನು ಹೆಚ್ಚಿಸಿದೆ.

ಹರಾರೆಯಲ್ಲಿ ನಡೆದ 19 ವರ್ಷದೊಳಗಿನವರ ವಿಶ್ವಕಪ್‌ನಲ್ಲಿ ಇಂಗ್ಲೆಂಡ್ ತಂಡವನ್ನು ಮಣಿಸಿದ ಭಾರತ ಯುವ ಪಡೆ ದಾಖಲೆಯ 6ನೇ ಬಾರಿಗೆ ಟ್ರೋಫಿಯನ್ನು ಎತ್ತಿಹಿಡಿದಿತ್ತು. ಆಯುಷ್ ಮ್ಹಾತ್ರೆ ತಂಡದ ಈ ಸಾಧನೆಗೆ ಎಲ್ಲೆಡೆ ಪ್ರಶಂಸೆ ವ್ಯಕ್ತವಾಗಿತ್ತು. ವಿಶ್ವ ಕ್ರಿಕೆಟ್ ಮುಂದೆ ಭಾರತದ ಕೀರ್ತಿ ಪತಾಕೆಯನ್ನು ಮತ್ತೊಮ್ಮೆ ಹಾರಿಸಿದ ಯುವ ಟೀಂ ಇಂಡಿಯಾಕ್ಕೆ ಬಿಸಿಸಿಐ ಭರ್ಜರಿ ಬಹುಮಾನ ಘೋಷಿಸಿದೆ. ನಿನ್ನೆ ನಡೆದ ಫೈನಲ್ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ ದಾಖಲೆಯ 311 ರನ್ ಕಲೆಹಾಕಿತು.

ಈ ಗುರಿ ಬೆನ್ನಟ್ಟಿದ ಇಂಗ್ಲೆಂಡ್ 311 ರನ್‌ಗಳಿಗೆ ಆಲೌಟ್ ಆಗಿ 100 ರನ್‌ಗಳಿಂದ ಸೋಲೊಪ್ಪಿಕೊಂಡಿತು. ಹೀಗಾಗಿ ಚಾಂಪಿಯನ್ ಭಾರತಕ್ಕೆ ಐಸಿಸಿ ಕಡೆಯಿಂದ ಟ್ರೋಫಿ ಹಾಗೂ ಪದಕ ಸಿಕ್ಕಿತ್ತು. ಆದರೆ ನಗದು ರೂಪದಲ್ಲಿ ಯಾವುದೇ ಬಹುಮಾನ ಸಿಕ್ಕಿರಲಿಲ್ಲ. ವಾಸ್ತವವಾಗಿ ಈ ಪಂದ್ಯಾವಳಿಯನ್ನು ಯುವ ಆಟಗಾರರಿಗೆ ಅಭಿವೃದ್ಧಿ ವೇದಿಕೆಯಾಗಿ ಆಡಲಾಗುತ್ತಿರುವುದರಿಂದ ಐಸಿಸಿ ಅಂಡರ್-19 ಮಟ್ಟದಲ್ಲಿ ಯಾವುದೇ ನಗದು ಬಹುಮಾನವನ್ನು ವಿತರಿಸುವುದಿಲ್ಲ. ಹೀಗಾಗಿ ಟ್ರೋಫಿ ಮತ್ತು ಪದಕದೊಂದಿಗೆ ಟೀಂ ಇಂಡಿಯಾ ಆಟಗಾರರು ತವರಿಗೆ ಮರಳುತ್ತಿದ್ದಾರೆ. ಇದೀಗ ಬಿಸಿಸಿಐ ಚಾಂಪಿಯನ್ ಭಾರತ ತಂಡಕ್ಕೆ ಭರ್ಜರಿ ನಗದು ಬಹುಮಾನ ಘೋಷಿಸಿದೆ.ಇಂಗ್ಲೆಂಡ್ ತಂಡವನ್ನು ಮಣಿಸಿ 6ನೇ ಬಾರಿಗೆ ಟ್ರೋಫಿ ಎತ್ತಿಹಿಡಿದಿದ್ದ ಭಾರತ ಯುವ ಪಡೆಗೆ ಬಿಸಿಸಿಐ 7.5 ಕೋಟಿ ರೂ. ನಗದು ಬಹುಮಾನ ಘೋಷಿಸಿದೆ. ಈ ಬಹುಮಾನದ ಮೊತ್ತವನ್ನು ಈ ಪಂದ್ಯಾವಳಿಯಲ್ಲಿ ತಂಡದ ಭಾಗವಾಗಿದ್ದ ಆಟಗಾರರು, ಕೋಚಿಂಗ್ ಸಿಬ್ಬಂದಿಗಳಿಗೆ ಹಂಚಲಾಗುವುದು.

ಬಿಸಿಸಿಐ ಈ ರೀತಿ ಬಹುಮಾನ ಘೋಷಿಸಿರುವುದು ಇದೇ ಮೊದಲಲ್ಲ. ಇದಕ್ಕೂ ಮುನ್ನ ಬಿಸಿಸಿಐ ಅಂಡರ್ 19 ವಿಶ್ವಕಪ್ ಗೆದ್ದ ತಂಡಗಳಿಗೆ ನಗದು ಬಹುಮಾನ ಘೋಷಿಸಿತ್ತು. 2024 ರ ಅಂಡರ್ 19 ವಿಶ್ವಕಪ್ ಗೆದ್ದ ಭಾರತ ತಂಡದ ಪ್ರತಿಯೊಬ್ಬ ಆಟಗಾರನಿಗೆ ಬಿಸಿಸಿಐ ತಲಾ 30 ಲಕ್ಷ ರೂ. ಬಹುಮಾನ ನೀಡಿತ್ತು. ಅದೇ ರೀತಿ, 2025 ರ ಮಹಿಳಾ ಅಂಡರ್-19 ಟಿ20 ವಿಶ್ವಕಪ್ ಗೆದ್ದಿದ್ದ ವನಿತಾ ಪಡೆಗೆ ಬಿಸಿಸಿಐ 5 ಕೋಟಿ ರೂ. ಬಹುಮಾನ ನೀಡಿತ್ತು. ಅದರಂತೆ ಈ ಬಾರಿಯೂ ಸಹ ಬಿಸಿಸಿಐ ಆಟಗಾರರು, ಸಹಾಯಕ ಸಿಬ್ಬಂದಿ ಮತ್ತು ತರಬೇತಿ ತಂಡಕ್ಕೆ ನಗದು ಬಹುಮಾನ ಘೋಷಣೆ ಮಾಡಿದೆ.



**7.5 ಕೋಟಿ ರೂ. ನಗದು ಬಹುಮಾನ**

# ನೆದರ್ಲ್ಯಾಂಡ್ಸ್ ವಿರುದ್ಧ ಶುಭಾರಂಭ ಗೆದ್ದ ಪಾಕಿಸ್ತಾನ

2026ರ ಟಿ20 ವಿಶ್ವಕಪ್ ಆರಂಭಗೊಂಡಿದ್ದು, ಮೊದಲ ಪಂದ್ಯದಲ್ಲಿ ಪಾಕಿಸ್ತಾನ ನೆದರ್ಲ್ಯಾಂಡ್ಸ್ ವಿರುದ್ಧ ರೋಚಕ ಜಯ ಸಾಧಿಸಿದೆ. ಕೊನೆಯ ಓವರ್‌ವರೆಗೂ ಸಾಗಿದ ಈ ಪಂದ್ಯದಲ್ಲಿ ಫಹೀಮ್ ಅಶ್ರಫ್ ಅವರ ಅಬ್ಬರದ ಬ್ಯಾಟಿಂಗ್ ಪಾಕಿಸ್ತಾನಕ್ಕೆ ಗೆಲುವು ತಂದುಕೊಟ್ಟಿತು. 19ನೇ ಓವರ್‌ನಲ್ಲಿ ನೆದರ್ಲ್ಯಾಂಡ್ಸ್ ಕೈಚೆಲ್ಲಿದ ಕ್ಯಾಚ್ ಪಾಕಿಸ್ತಾನದ ಗೆಲುವಿಗೆ ಪ್ರಮುಖ ಕಾರಣವಾಯಿತು. ಈ ಗೆಲುವಿನೊಂದಿಗೆ ಪಾಕಿಸ್ತಾನ ವಿಶ್ವಕಪ್ ಅಭಿಯಾನವನ್ನು ಶುಭಾರಂಭ ಮಾಡಿದೆ. 2026 ರ ಟಿ20 ವಿಶ್ವಕಪ್ ಆರಂಭವಾಗಿದೆ.

ಮೊದಲ ದಿನ ಮೂರು ಪಂದ್ಯಗಳು ನಡೆಯುತ್ತಿದ್ದು, ಮೊದಲ ಪಂದ್ಯದಲ್ಲಿ ಪಾಕಿಸ್ತಾನ ಹಾಗೂ ನೆದರ್ಲ್ಯಾಂಡ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಕೊನೆಯ ಓವರ್ ವರೆಗೂ ತೀವ್ರ ಕುತೂಹಲ ಕೆರಳಿಸಿದ್ದ ಈ ಪಂದ್ಯವನ್ನು ಗೆದ್ದುಕೊಳ್ಳುವಲ್ಲಿ ಯಶಸ್ವಿಯಾಯಿತು.

ಇತ್ತ 19ನೇ ಓವರ್‌ನಲ್ಲಿ ಸುಲಭ ಕ್ಯಾಚ್ ಕೈಚೆಲ್ಲಿದ ನೆದರ್ಲ್ಯಾಂಡ್ಸ್ ರೋಚಕ ಗೆಲುವಿನಿಂದ ವಂಚಿತವಾಯಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ನೆದರ್ಲ್ಯಾಂಡ್ಸ್ 147 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಪಾಕಿಸ್ತಾನ 18 ನೇ ಓವರ್ ವೇಳೆಗೆ ಸೋಲಿನ ಸನಿಹಕ್ಕೆ ತಲುಪಿತ್ತು. ಆದರೆ 19 ನೇ ಓವರ್‌ನಲ್ಲಿ ಫಹೀಮ್ ಅಶ್ರಫ್ ಮೂರು ಸಿಕ್ಸರ್‌ಗಳು ಮತ್ತು ಒಂದು ಬೌಂಡರಿ ಬಾರಿಸಿ ತಂಡದ ಗೆಲುವು ಖಚಿತಪಡಿಸಿದರು. ಇದೇ ಓವರ್‌ನಲ್ಲಿ ಅಶ್ರಫ್‌ಗೆ ಜೀವದಾನವೂ ಸಿಕ್ಕಿತು. ಇದರ ಪರಿಣಾಮವಾಗಿ ಪಾಕಿಸ್ತಾನ ಗೆಲುವಿನೊಂದಿಗೆ ಅಭಿಯಾನವನ್ನು ಪ್ರಾರಂಭಿಸಿತು.

**147 ರನ್ ಕಲೆಹಾಕಿದ ನೆದರ್ಲ್ಯಾಂಡ್ಸ್**

ಮೊದಲು ಬ್ಯಾಟಿಂಗ್ ಮಾಡಿದ ನೆದರ್ಲ್ಯಾಂಡ್ಸ್ 19.5 ಓವರ್‌ಗಳಲ್ಲಿ 147 ರನ್‌ಗಳಿಗೆ ಆಲೌಟ್ ಆಯಿತು. ತಂಡದ ಪರ ಆರಂಭಿಕ ಮೈಕೆಲ್ ಲೆವಿಟ್ 24 ರನ್ ಮತ್ತು ನಾಯಕ ಸ್ಕಾಟ್ ಎಡ್ವರ್ಡ್ಸ್ 37 ರನ್ ಕಲೆಹಾಕಿ ತಂಡಕ್ಕೆ ಭದ್ರ ಬುನಾದಿ ಹಾಕಿಕೊಟ್ಟರು. ಆದಾಗ್ಯೂ, ಪಾಕಿಸ್ತಾನಿ ಬೌಲರ್ ಸಲ್ಮಾನ್ ಮಿರ್ಜಾ (3/24) ಅದ್ಭುತ ಸ್ಪೆಲ್ ಮೂಲಕ ನೆದರ್ಲ್ಯಾಂಡ್ಸ್ ರನ್ ವೇಗಕ್ಕೆ ಕಡಿವಾಣ ಹಾಕಿದರು. ಉಳಿದಂತೆ ಪಾಕ್ ಅಬ್ರಾರ್ ಅಹ್ಮದ್, ಸ್ಯಾಮ್ ಅಯೂಬ್ ಮತ್ತು ಮೊಹಮ್ಮದ್ ನವಾಜ್ ತಲಾ ಎರಡು ವಿಕೆಟ್ ಪಡೆದು ನೆದರ್ಲ್ಯಾಂಡ್ಸ್ ದೊಡ್ಡ ಸ್ಕೋರ್ ಗಳಿಸುವುದನ್ನು ತಡೆದರು.

**20ನೇ ಓವರ್‌ನಲ್ಲಿ ಪಂದ್ಯ ಗೆದ್ದ ಪಾಕ್**



# ಭಾರತದ ವಿರುದ್ಧ ಯುಎಸ್‌ಎಗೆ ಸೂರ್ಯಗ್ರಹಣ

## ಭಾರತದ ಸಂಘಟಿತ ಬೌಲಿಂಗ್ ದಾಳಿಗೆ ಧೂಳೀಪಟವಾದ ಅಮೆರಿಕಾ!

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಭಾರತ ಹಾಗೂ ಅಮೆರಿಕ ನಡುವಿನ 2026 ರ ಟಿ20 ವಿಶ್ವಕಪ್ ಮೂರನೇ ಪಂದ್ಯದಲ್ಲಿ ಆತಿಥೇಯ ಭಾರತ ತಂಡ ಸುಲಭ ಜಯ ದಾಖಲಿಸಿತು. ಇದರೊಂದಿಗೆ ಹಾಲಿ ಚಾಂಪಿಯನ್ ಆಗಿ ಪಂದ್ಯಾವಳಿಗಿಳಿದಿರುವ ಭಾರತ ಗೆಲುವಿನ ಶುಭಾರಂಭ ಮಾಡಿದೆ. ಇತ್ತ ಭಾರತದ ವಿರುದ್ಧ ಸೋತರೂ ಅನಾನುಭವಿ ಅಮೆರಿಕ ತಂಡ ದಿಟ್ಟ ಪ್ರದರ್ಶನ ನೀಡಿ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಬಲಿಷ್ಠ ಬ್ಯಾಟಿಂಗ್ ವಿಭಾಗವನ್ನು ಹೊಂದಿರುವ ಟೀಂ ಇಂಡಿಯಾವನ್ನು ಕೇವಲ 161 ರನ್‌ಗಳಿಗೆ ಕಟ್ಟಿಹಾಕುವಲ್ಲಿ ಅಮೆರಿಕ ಬೌಲರ್‌ಗಳು ಯಶಸ್ವಿಯಾದರು. ಆದಾಗ್ಯೂ ಈ ಗುರಿ ಬೆನ್ನಟ್ಟಿದ ಅಮೆರಿಕ ತಂಡದ ಬ್ಯಾಟಿಂಗ್ ವಿಭಾಗದ ಭಾರತದ ಬೌಲಿಂಗ್ ದಾಳಿಯ ಮುಂದೆ ತತ್ತರಿಸಿ 20 ಓವರ್‌ಗಳಲ್ಲಿ 132 ರನ್‌ಗಳನಷ್ಟೇ ಕಲೆಹಾಕಲು ಶಕ್ತವಾಗಿ 29 ರನ್‌ಗಳಿಂದ ಸೋಲೊಪ್ಪಿಕೊಂಡಿತು.

ಬ್ಯಾಟಿಂಗ್ ವಿಭಾಗದ ಕಳಪೆ ಪ್ರದರ್ಶನ: ಟಿ20 ವಿಶ್ವಕಪ್ ಇತಿಹಾಸದಲ್ಲಿ ಎರಡನೇ ಆವೃತ್ತಿಯನ್ನು ಆಡುತ್ತಿರುವ ಅಮೆರಿಕ ತಂಡ ತನ್ನ ಮೊದಲ ಆವೃತ್ತಿಯಲ್ಲಿ ಅಂದರೆ 2024 ರ ಟಿ20 ವಿಶ್ವಕಪ್‌ನಲ್ಲಿ ಪಾಕಿಸ್ತಾನಕ್ಕೆ ಮಣ್ಣು ಮುಕ್ಕಿಸಿ ಎಲ್ಲರಲ್ಲೂ ಅಚ್ಚರಿ ಮೂಡಿಸಿತ್ತು. ಇದೀಗ ಈ ಆವೃತ್ತಿಯ ತನ್ನ ಮೊದಲ ಪಂದ್ಯದಲ್ಲೇ ಟೀಂ ಇಂಡಿಯಾದ ಅಹಂ ಮುರಿಯಿತು. ಅನಾನುಭವಿ ಯುಎಸ್ಎ ತಂಡದ ಎದುರು ಭಾರತದ ಬ್ಯಾಟರ್‌ಗಳ ಗರ್ವಭಂಗವಾಯಿತು. ಅಮೆರಿಕ ತಂಡದ ಕಾರ್ಯತಂತ್ರದ ಮುಂದೆ ಮಂಡಿಯೂರಿದ ಟೀಂ ಇಂಡಿಯಾ ಬ್ಯಾಟರ್‌ಗಳು



**ಅಭಿಷೇಕ್ ಗೋಲ್ಡನ್ ಡಕ್**

**ಭಾರತದ ಪರ ಅಭಿಷೇಕ್ ಶರ್ಮಾ ಹಾಗೂ ಇಶಾನ್ ಕಿಶನ್ ಇನ್ನಿಂಗ್ಸ್ ಆರಂಭಿಸಿದರು. ಮೊದಲ ಓವರ್‌ನಲ್ಲಿ ಸಿಕ್ಸರ್ ಬಾರಿಸುವ ಮೂಲಕ ಕಿಶನ್ ತಂಡದ ಇನ್ನಿಂಗ್ಸ್ ಆರಂಭಿಸಿದರು. ಆದರೆ ಮುಂದಿನ ಓವರ್‌ನಲ್ಲಿ ಸ್ಟ್ರೈಕ್‌ಗೆ ಬಂದ ಅಭಿಷೇಕ್ ಶರ್ಮಾ ಎದುರಿಸಿದ ಮೊದಲ ಎಸೆತದಲ್ಲೇ ಸಿಕ್ಸರ್ ಬಾರಿಸುವ ಯತ್ನದಲ್ಲಿ ಕ್ಯಾಚಿತ್ತು ನಿರ್ಗಮಿಸಿದರು. ಇದರಿಂದ ಅಭಿಷೇಕ್‌ಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ.**

ಬಂದಷ್ಟೇ ವೇಗವಾಗಿ ಪೆವಿಲಿಯನ್ ಸೇರಿಕೊಂಡರು. ಇದರ ಫಲವಾಗಿ ತಂಡದ ಪ್ರಮುಖ 4 ವಿಕೆಟ್‌ಗಳು ಪವರ್ ಪ್ಲೇ ಒಳಗೆ ಪತನಗೊಂಡವು. ಆ ನಂತರ ಕಿಶನ್ ಹಾಗೂ ತಿಲಕ್ ನಿಧಾನವಾಗಿ ಇನ್ನಿಂಗ್ಸ್ ಕಟ್ಟಲು ಶುರು ಮಾಡಿದರು. ಇದೇ ಹಂತದಲ್ಲಿ ಕಿಶನ್‌ಗೆ ಜೀವದಾನವೂ ಸಿಕ್ಕಿತು. ಆದರೆ ಇದನ್ನು ಸದುಪಯೋಗಪಡಿಸಿಕೊಳ್ಳದ ಕಿಶನ್ 6ನೇ ಓವರ್‌ನ 2ನೇ ಎಸೆತದಲ್ಲಿ ಕ್ಯಾಚಿತ್ತು ಔಟಾದರು. ಅದೇ ಓವರ್‌ನಲ್ಲಿ ತಿಲಕ್ ವರ್ಮಾ ಕೂಡ ಪೆವಿಲಿಯನ್ ಸೇರಿಕೊಂಡರು. ಆ ನಂತರ ಬಂದ ಶಿವಂ ದುಬೆ ಕೂಡ ಮೊದಲ ಎಸೆತದಲ್ಲೇ ಕ್ಯಾಚ್ ನೀಡಿದರು. ಹೀಗಾಗಿ ಟೀಂ ಇಂಡಿಯಾದ ಪ್ರಮುಖ 3 ವಿಕೆಟ್‌ಗಳು ಒಂದೇ ಓವರ್‌ನಲ್ಲಿ ಅಂದರೆ 6ನೇ ಓವರ್‌ನಲ್ಲೇ ಪತನಗೊಂಡವು.

# 200 ಕ್ಕಿಂತ ಕಡಿಮೆ ಮೊತ್ತಕ್ಕೆ ಆಲೌಟ್

ರಣಜಿ ಟೂರ್ನಿಯು ಮುಕ್ತಾಯದ ಹಂತಕ್ಕೆ ಬಂದು ನಿಂತಿದೆ. 32 ತಂಡಗಳಿಂದ ಶುರುವಾದ ಈ ಟೂರ್ನಿಯಲ್ಲಿ ಇದೀಗ ಉಳಿದಿರುವುದು 8 ತಂಡಗಳು ಮಾತ್ರ. ಈ ತಂಡಗಳ ನಡುವೆ ಇದೀಗ ಕ್ವಾರ್ಟರ್ ಫೈನಲ್ ಪಂದ್ಯಗಳು ನಡೆಯುತ್ತಿದೆ. ಈ ಮ್ಯಾಚ್‌ಗಳಲ್ಲಿ ಗೆಲ್ಲುವ ತಂಡಗಳು ಸೆಮಿಫೈನಲ್‌ಗೇರಲಿದೆ. ರಣಜಿ ಟೂರ್ನಿಯ 4ನೇ ಕ್ವಾರ್ಟರ್ ಫೈನಲ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಕರ್ನಾಟಕ ಮತ್ತು ಮುಂಬೈ ತಂಡಗಳು ಅಲ್ಪ ಮೊತ್ತಕ್ಕೆ ಕುಸಿದಿದೆ. ಮುಂಬೈನ ಶರದ್ ಪವಾರ್ ಕ್ರಿಕೆಟ್ ಅಕಾಡೆಮಿಯಲ್ಲಿ ನಡೆಯುತ್ತಿರುವ ಈ ಪಂದ್ಯದಲ್ಲಿ ಟಾಸ್ ಗೆದ್ದ ಮುಂಬೈ ತಂಡದ ನಾಯಕ ಶಾರ್ದೂಲ್ ಠಾಕೂರ್ ಬ್ಯಾಟಿಂಗ್ ಆಯ್ದುಕೊಂಡಿದ್ದರು.ಅದರಂತೆ ಮೊದಲು ಬ್ಯಾಟ್ ಮಾಡಿದ ಮುಂಬೈ ತಂಡವು ಕೇವಲ 120 ರನ್‌ಗಳಿಗೆ ಆಲೌಟ್ ಆಗಿದ್ದರು. ಕರ್ನಾಟಕ ಪರ ವಿಧ್ವತ್ ಕಾವರೇಪ್ಪ, ಪ್ರಸಿದ್ಧ್ ಕೃಷ್ಣ ಮತ್ತು ಶ್ರೇಯಸ್ ಗೋಪಾಲ್ ತಲಾ 3 ವಿಕೆಟ್ ಕಬಳಿಸಿ ಮಿಂಚಿದ್ದರು. ಮುಂಬೈ ಕಲೆಹಾಕಿದ 120 ರನ್‌ಗಳಿಗೆ ಪ್ರತ್ಯುತ್ತವಾಗಿ ಮೊದಲ ಇನಿಂಗ್ಸ್ ಆರಂಭಿಸಿದ ಕರ್ನಾಟಕ ತಂಡ ಕೂಡ ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕನಾಗಿ ಕಣಕ್ಕಿಳಿದ ಕೆಎಲ್ ರಾಹುಲ್ 28 ರನ್‌ಗಳಿಸಿ ವಿಕೆಟ್ ಒಪ್ಪಿಸಿದ್ದರು. ಇದರ ಬೆನ್ನಲ್ಲೇ ನಾಯಕ ದೇವದತ್ ಪಡಿಕ್ಕಲ್ (17) ಕೂಡ ಔಟಾದರು.

ಆ ಬಳಿಕ ಬಂದ ಕರುಣ್ ನಾಯರ್ ಕಲೆಹಾಕಿದ್ದು ಕೇವಲ 4 ರನ್‌ಗಳು ಮಾತ್ರ. ಇದರ ಬೆನ್ನಲ್ಲೇ ಸ್ಮರಣ್ ರವಿಚಂದ್ರನ್ ಹಾಗೂ ಶ್ರೇಯಸ್ ಗೋಪಾಲ್ ಸೊನ್ನೆ ಸುತ್ತುವ ಮೂಲಕ ವಿಕೆಟ್ ಒಪ್ಪಿಸಿದರು. ಇದಾಗ್ಯೂ ಮತ್ತೊಂದೆಡೆ ಆರಂಭಿಕನಾಗಿ ಕಣಕ್ಕಿಳಿದ ಮಯಾಂಕ್ ಅಗರ್ವಾಲ್ ಜವಾಬ್ದಾರಿಯುತ ಬ್ಯಾಟಿಂಗ್ ಪ್ರದರ್ಶಿಸಿದರು. ಎಚ್ಚರಿಕೆಯ ಬ್ಯಾಟಿಂಗ್‌ನೊಂದಿಗೆ 134 ಎಸೆತಗಳಲ್ಲಿ 1 ಸಿಕ್ಸ್ ಹಾಗೂ 14 ಫೋರ್‌ಗಳೊಂದಿಗೆ 92 ರನ್ ಬಾರಿಸಿದರು. ಶತಕಕ್ಕೆ ಇನ್ನೇನು 8 ರನ್ ಬೇಕಿದ್ದಾಗ ಮಯಾಂಕ್ ಅಗರ್ವಾಲ್ 8ನೇ ವಿಕೆಟ್ ಆಗಿ ಔಟಾದರು. ಆ ಬಳಿಕ ಬಂದ ಶಿಖರ್ ಶೆಟ್ಟಿ (4) ಪ್ರಸಿದ್ಧ್ ಕೃಷ್ಣ (0) ಔಟಾಗುವುದರೊಂದಿಗೆ ಕರ್ನಾಟಕ ತಂಡವು 173 ರನ್‌ಗಳಿಗೆ ಆಲೌಟ್ ಆಗಿದೆ. ಮೊದಲ ಇನಿಂಗ್ಸ್‌ನಲ್ಲಿ 173 ರನ್‌ಗಳಿಗೆ ಆಲೌಟ್ ಆದರೂ ಕರ್ನಾಟಕ ತಂಡ 53 ರನ್‌ಗಳ ಮುನ್ನಡೆ ಪಡೆದುಕೊಂಡಿದೆ. ಅದರಂತೆ ಇದೀಗ ಮುಂಬೈ ತಂಡವು ದ್ವಿತೀಯ ಇನಿಂಗ್ಸ್ ಆರಂಭಿಸಲಿದ್ದು, 53 ರನ್‌ಗಳ ಬಳಿಕ ಮುಂಬೈ ಸ್ಕೋರ್ ಶುರುವಾಗಲಿದೆ. ಹೀಗಾಗಿ ಮೊದಲ ಇನಿಂಗ್ಸ್‌ನಲ್ಲಿ ಕರ್ನಾಟಕ ಬ್ಯಾಟರ್‌ಗಳು ಕಳಪೆ ಪ್ರದರ್ಶನ ನೀಡಿದರೂ ಪಂದ್ಯದಲ್ಲಿ ಅಲ್ಪ ಮೇಲುಗೈ ಸಾಧಿಸುವಲ್ಲಿ ಯಶಸ್ವಿಯಾಗಿದ್ದಾರೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966